ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ  Postal Reg. No. BDR/054/2026-2027 Email: mallammanudi@gmail.com  E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-ಸಂಪುಟ:12 | ISSUE- ಸಂಚಿಕೆ: 353 | PAGE- ಪುಟ 8 | ಶನಿವಾರ 25.01.2025 | RS.ಬೆಲೆ 2/-

# ಶ್ರೀರಾಮುಲುಗೆ ಆಹ್ವಾನ ನೀಡಿಲ್ಲ: ಡಿ.ಕೆ ಶಿವಕುಮಾರ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜ.24: ನನಗೆ ಶ್ರೀರಾಮುಲು ಅವರು ಸಿಕ್ಕಿಲ್ಲ. ನನ್ನ ಬಳಿ ಅವರು ಮಾತನಾಡಿಲ್ಲ.ಪಕ್ಷಕ್ಕೆಬರುವಂತೆ ಅವರಿಗೆ ಯಾವುದೇ ಆಹ್ವಾನ ನೀಡಿಲ್ಲ. ಈ ವಿಚಾರದಲ್ಲಿ ನನ್ನ ಹೆಸರನ್ನು ದುರುಪಯೋಗ ಮಾಡಿಕೊಳ್ಳುತ್ತಿದ್ದಾರೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ವಾಗ್ದಾಳಿನಡೆಸಿದ್ದಾರೆ.ವಿಧಾನಸೌಧದ ಬಳಿ ಮಾತನಾಡಿದ ಅವರು, ಆತ ಬಾಯಿ ಚಪಲಕ್ಕೆ ಮಾತನಾಡುತ್ತಿದ್ದಾನೆ. ಆತ ಆ ಪಕ್ಷದಲ್ಲಿಯೇ ಇರಲಿಲ್ಲ. ಈಗ ಆ ಪಕ್ಷಕ್ಕೆ ಕಾಲಿಟ್ಟು, ಆ ಮನೆಯನ್ನೇ ಒಡೆಯುವ ಪ್ರಯತ್ನಮಾಡುತ್ತಿದ್ದಾನೆ.ನಾನು ಆತನ ಹೆಸರು ಹೇಳಿ ಅವನನ್ನು ಏಕೆ ದೊಡ್ಡ ಮನುಷ್ಯನನ್ನಾಗಿ ಮಾಡಲಿ? ಆತ ನನ್ನ ಹೆಸರು ತೆಗೆದುಕೊಂಡರೆ ದೊಡ್ಡವನಾಗುತ್ತಾನೆಯೇ?ನಾನು ಸಂಪರ್ಕದಲ್ಲಿ ಇರುವುದನ್ನು ಆತನೋಡಿದ್ದಾನೆಯೇ?ಆತನೇ ಯಾರ ಜೊತೆ ಸಂಪರ್ಕದಲ್ಲಿ ಇದ್ದ ಎಂಬುದನ್ನು ಈಗ ಚರ್ಚೆ ಮಾಡುವುದು ಬೇಡ. ನಾನು ಯಾವುದನ್ನು ಬಹಿರಂಗಗೊಳಿಸಲು ಹೋಗುವುದಿಲ್ಲ ಎಂದು ಕಿಡಿ–ಕಾರಿದರು.

ಈ ಹಿಂದೆ ಚುನಾವಣೆಗೆ ಮುಂಚಿತವಾಗಿ ಶ್ರೀರಾಮುಲು ಅವರನ್ನು ಪಕ್ಷಕ್ಕೆ ಆಹ್ವಾನಿಸಿದ್ದು ನಿಜ. ಆಗ ಅವರು ಬರುವುದಿಲ್ಲ, ಬಿಜೆಪಿಯಲ್ಲಿಯೇಉಳಿದುಕೊಳ್ಳುತ್ತೇನೆ ಎಂದು ಹೇಳಿದ್ದರು. ನಾನು ಆ ರೀತಿ ಸುಮಾರು 50 ಜನಕ್ಕೆ ಕೇಳಿದ್ದೇನೆ ಎಂದು ಹೇಳಿದರು. ಶ್ರೀರಾಮುಲು ಅವರು ಈಗ ಕಾಂಗ್ರೆಸ್ ಪಕ್ಷಕ್ಕೆ ಬರಲು ಒಪ್ಪಿದರೆ ಎಂದು ಪ್ರಶ್ನಿಸಿದಾಗ, ಇದರ ಬಗ್ಗೆ ನಾನೇಕೆ ಸುಮ್ಮನೆ ಯೋಚನೆ ಮಾಡಲಿ ಎಂದರು.ಕೆಲವು ಸಚಿವರು ಶ್ರೀರಾಮುಲು ಅವರು ಪಕ್ಷಕ್ಕೆ ಬಂದರೆ ಸ್ವಾಗತ ಎಂದು ಹೇಳಿರುವ ಬಗ್ಗೆ ಕೇಳಿದಾಗ, ನನ್ನ ಮುಂದೆ ಈ ವಿಚಾರ ಪ್ರಸ್ತಾಪವಾಗಲಿ, ಆಗ ಚರ್ಚೆ ಮಾಡೋಣ ಎಂದು ಹೇಳಿದರು.ಮೈಕ್ರೋ ಫೈನಾನ್ಸ್ ಹಾವಳಿಗಳ ಬಗ್ಗೆ ಪ್ರತಿಕ್ರಿಯಿಸಿದ ಶಿವಕುಮಾರ್, ಈ ವಿಚಾರದ ಬಗ್ಗೆ ಮುಖ್ಯಮಂತ್ರಿಗಳು, ಕಂದಾಯ, ಗೃಹ, ಕಾನೂನು ಸಚಿವರು ಸೇರಿ ಚರ್ಚೆ ಮಾಡುತ್ತಿದ್ದಾರೆ. ಈ ವಿಚಾರದ ಬಗ್ಗೆ ನಾನು ಹಿಂದೆ ಅಧ್ಯಯನ ಮಾಡಿದ್ದೆ. ಕಾನೂನಾತ್ಮಕವಾಗಿ ಯಾವ ಕ್ರಮ ತೆಗೆದ ಕೊಳ್ಳಬಹುದು ಎಂದು ನಾವು ಚರ್ಚೆ ಮಾಡುತ್ತೇವೆ. ಸದ್ಯದಲ್ಲಿಯೇ ಸರ್ಕಾರದ ನಿರ್ಧಾರ ತಿಳಿಸಲಾಗುವುದು. ನಾವು ಇದನ್ನು ಗಂಭೀರವಾಗಿ ಪರಿಗಣಿಸಿದ್ದೇವೆ ಎಂದು ಹೇಳಿದರು.


## ಭಕ್ತಾದಿಗಳಿಗೆ ಸಕಲ ಸೌಲಭ್ಯಗಳು ಕಲ್ಪಿಸಬೇಕು ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್.ಪ್ರತಿವರ್ಷದಂತೆ ಈ ವರ್ಷವೂ ಹುಮನಾಬಾದ್ ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸ ಅದ್ದೂರಿಯಾಗಿ ನಡೆಯಲಿದ್ದು.ಹುಮನಾಬಾದ್ ನಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿದೆ. ರಾಜ್ಯದ ಮೂಲೆ ಮೂಲೆಗಳಿಂದ ಬರುವ ಭಕ್ತರು ಅಲ್ಲದೆ. ಇತರೆ ರಾಜ್ಯದಿಂದ ಭಕ್ತರು ಅಗಮಿಸುತ್ತಾರೆ. ಬಂದ ಭಕ್ತರಿಗೆ ಯಾವುದೇ ತರಹದ ತೊಂದರೆ ಆಗದಂತೆ ನೋಡಿ ಕೊಳ್ಳಬೇಕು ಎಂದು ತಿಳಿಸಲಾಗಿದೆ. ಈ ಕ್ಷೇತ್ರದ ಮಾಜಿ ಸಚಿವನಾಗಿ. ನನ್ನ ಕರ್ತವ್ಯ ವನ್ನು ನಾನು ಮಾಡಲೇ ಬೇಕು. ಎಂದು ರಾಜಶೇಖರಪಾಟೀಲತಿಳಿಸಿದ್ದಾರೆ. ಭಕ್ತರಿಗೆ ಅಧಿಕಾರಿ ವರ್ಗ, ಚಿದ್ರಿ. ಪರಿವಾರ ಸೇರಿದಂತೆ ಇತರರು

(2ನೇ ಪುಟ ನೋಡಿ)



ಹುಮನಾಬಾದ:ಅಕ್ಷರ ಜ್ಯೋತಿ ಯಾತ್ರೆಗೆ ದಾಸೋಹ ನೀಡಿರುವ ಡಾ ನಾಗನಾಥ ಹುಲಸೂರೆ, ಡಾ. ಗೋವಿಂದ, ಡಾ. ಜಗನಾಥ ಹಲಮಂಡಗೆ, ಪಂಡಿತ ಬಾಳೂರೆ, ತೀಥ9ಪ್ಪಾ ಸಂಗಮಕರ್ ರುದ್ರವಾಡಿ ಹಾಗೂ ಇತರರನ್ನು ಕಲ್ಯಾಣ ಕರ್ನಾಟಕ ಪ್ರತಿಷ್ಠಾನದ ಅಧ್ಯಕ್ಷರಾದ ಶ್ರೀ ಬಸವಕುಮಾರ ಪಾಟೀಲರು ಆತ್ಮೀಯವಾಗಿ ಇಂದು ಬೆಳಿಗ್ಗೆ ಹುಮನಾಬಾದ ಪಟ್ಟಣದಲ್ಲಿ ಸನ್ಮಾನ ಮಾಡಿದರು.

## ರೈತರ ಮತ್ತು ವ್ಯಾಪಾರಸ್ಥರ ಉತ್ತೇಜನಕ್ಕೆ ಪ್ರಯತ್ನಿಸುತ್ತೇನೆ :ಎಖೇಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ತಾಲೂಕಿನ ನಿರ್ಣಾ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾಗಿ ಜಗನಾಥರೆಡ್ಡಿ ರಾಜರೆಡ್ಡಿ ಎಖೇಳ್ಳಿ, ಉಪಾಧ್ಯಕ್ಷರಾಗಿ ಮಲ್ಲಪ್ಪ ರೇವಣಪ್ಪ ಕೋರಿ ಅವಿರೋಧವಾಗಿ ಆಯ್ಕೆಯಾದರು. ಶುಕ್ರವಾರ ಪಿಕೆಪಿಎಸ್ ಕಾರ್ಯಾಲಯದಲ್ಲಿ ಜರುಗಿದ, ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಸ್ಥಾನಕ್ಕೆ ಬಬ್ಬರೆ ನಾಮಪತ್ರ ಸಲ್ಲಿಸಿದರಿಂದ ಅವಿರೋಧವಾಗಿ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಬಸವರಾಜಯ್ಯ ಸಾಲಿಮಠ ತಿಳಿಸಿದರು.

ನಂತರ ಮುಖ್ಯ

(2ನೇ ಪುಟ ನೋಡಿ)

## ಕಾರು ಮರಕ್ಕೆ ಡಿಕ್ಕಿ:ಮೂವರ ಸಾವು

ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ,ಜ.24–ಚಾಲಕನ ನಿಯಂತ್ರಣ ತಪ್ಪಿ ಕಾರು ಮರಕ್ಕೆ ಡಿಕ್ಕಿಹೊಡೆದು ಕಮರಿಗೆ ಬಿದ್ದು ಮೂವರು ಪ್ರಯಾಣಿಕರು ಸ್ಥಳದಲ್ಲಿಯೇ ಮೃತಪಟ್ಟು, ಇಬ್ಬರು ಗಾಯಗೊಂಡಿರುವ ದುರ್ಘಟನೆ ಶುಕ್ರವಾರ ಬೆಳಗಿನ ಜಾವ ವಿಜಯಪುರ ತಾಲೂಕಿನ ಕನ್ನಾಳ ಕ್ರಾಸ್ ಬಳಿ ಎನ್ ಎಚ್–50ರಲ್ಲಿ ಸಂಭವಿಸಿದೆ.

ವಿಜಯಪುರ ದರಬಾರ ಗಲ್ಲಿಯ ನಿವಾಸಿ ಅಭಿಷೇಕ ಸಾವಂತ (23), ಮಠಪತಿ ಗಲ್ಲಿಯ ವಿಜಯಕುಮಾರ ಔರಂಗಾಬಾದ (24) ಹಾಗೂ ತೇಕಡೆ ಗಲ್ಲಿಯ ರಾಜು ಬಿರಾದಾರ (24) ಮೃತಪಟ್ಟವರು. ಮೃತರು ಆರೋಗ್ಯ ಇಲಾಖೆಯ ಸಿಬ್ಬಂದಿ ಎನ್ನಲಾಗಿದೆ.

ವಿಜಯಪುರದಸ್ವಾತಂತ್ರ್ಯಯೋಧರ ಕಾಲನಿಯ ನಿವಾಸಿ ರಾಜು ಕಾಂಬಳೆ, ವಿಜಯಪುರದ ವಿಶಾಲ ಪೋಳ ತೀವ್ರವಾಗಿ ಗಾಯಗೊಂಡಿದ್ದು,ಗಾಯಾಳುಗಳಿಗೆ ಜಿಲ್ಲಾಆಸ್ಪತ್ರೆಗೆದಾಖಲಿಸಲಾಗಿದೆ.

ನಿನ್ನೆ ರಾತ್ರಿ ಐವರು ಸೇರಿ–ಕೊಂಡು ಕಾರಿನಲ್ಲಿ ಸೊಲ್ಲಾಪುರಕ್ಕೆ ತೆರಳಿದ್ದರು.ಮರಳಿ ವಿಜಯಪುರಕ್ಕೆ ಬರುತ್ತಿದ್ದಾಗ ಶುಕ್ರವಾರ ನಸುಕಿನ ಜಾವ 5.–15ರ ಸುಮಾರಿಗೆ ವಿಜಯಪುರ ಇನ್ನೂ ಕೇವಲ 15 ಕಿ.ಮಿ. ಇರುವಾಗಲೆ ಕಾರ್ ಚಾಲಕನ ನಿಯಂತ್ರಣ ತಪ್ಪಿ ಕನ್ನಾಳ ಕ್ರಾಸ್ ಬಳಿ ಮರಕ್ಕೆ ಡಿಕ್ಕಿ ಹೊಡೆದು ರಸ್ತೆ ಬದಿಯ ಆಳವಾದ ಕಮರಿಗೆ ಬಿದ್ದಿದೆ.

ಸುದ್ದಿ ತಿಳಿದತಕ್ಷಣ ವಿಜಯಪುರ ಗ್ರಾಮೀಣ ಪೊಲೀಸರು ಸ್ಥಳಕ್ಕೆ ಧಾವಿಸಿ ಗಾಯಾಳುಗಳನ್ನು ತಕ್ಷಣ ಜಿಲ್ಲಾ ಆಸ್ಪತ್ರೆಗೆ ಸಾಗಿಸಿದ್ದಾರೆ. ಶವಗಳನ್ನು ನಜ್ಜುಗುಜ್ಜಾದ ಕಾರಿನಿಂದ ಹೊರಗೆ ತಗೆದು ಜಿಲ್ಲಾ ಆಸ್ಪತ್ರೆಗೆ ಸಾಗಿಸಿದ್ದಾರೆ. ವಿಜಯಪುರ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕೊಪ್ಪಳ ಕೇಂದ್ರೀಯ ಬಸ್ ನಿಲ್ದಾಣದಲ್ಲಿ ಚಾಲಕರ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜ.24: ಜಿಲ್ಲಾ ಕೇಂದ್ರೀಯ ಬಸ್ ನಿಲ್ದಾಣದಲ್ಲಿ ಶುಕ್ರವಾರ ಬೆಳಿಗ್ಗೆ ಸರಳಾಗಿ ನಡೆದ ಚಾಲಕರ ದಿನಾಚರಣೆ ಕಾರ್ಯಕ್ರಮದಲ್ಲಿಡಿ,ವೈ,ಎಸ್,ಪಿ, ಮುತ್ತಣ್ಣಸವರಗೋಳಭಾಗವಹಿಸಿ ಹಗಲು ರಾತ್ರಿ ಎನ್ನದೆ ಸೇವೆ ಸಲ್ಲಿಸುವ ಚಾಲಕರಿಗೆ ಶುಭ ಹಾರೈಸಿದರು.

ಚಾಲಕರ ಸೇವೆಗೆ ಗೌರವ ಸಲ್ಲಿಸಲು,ಪ್ರತಿನಿತ್ಯ ಸಾರ್ವಜನಿಕರಿಗೆ ಗಮ್ಯಸ್ಥಾನ ತಲುಪಿಸಲುಶ್ರಮಿಸುವಚಾಲಕರ ಕಠಿಣ ಪರಿಶ್ರಮ ಮತ್ತು ಸೇವೆಯನ್ನುಗೌರವಿಸಲು.ರಸ್ತೆ ಸುರಕ್ಷೆ:ರಸ್ತೆ ಸುರಕ್ಷತೆಯ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಚಾಲಕರನ್ನು ಪ್ರೋತ್ಸಾಹಿಸಲು ಚಾಲಕರ ದಿನಾಚರಣೆ ಆಚರಿಸಲಾಗುತ್ತಿದೆ ಎಂದು ಜನಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಎಸ್,ಎ,ಗಫಾರ್ ವಿವರಿಸಿ ಎಲ್ಲಾ ಚಾಲಕರಿಗೂ ಚಾಲಕರ ದಿನಾಚರಣೆಯ ಶುಭಾಶಯಗಳು ತಿಳಿಸಿದರು,

ನಿರಂತರಪ್ರಯತ್ನದಮೂಲಕ ಕೇಂದ್ರೀಯ ಬಸ್ ನಿಲ್ದಾಣದಲ್ಲಿ ಎರಡನೇ ವರ್ಷ ಚಾಲಕರ ದಿನಾಚರಣೆ ಆಚರಿಸಲಾಗುತ್ತಿದೆ ಎಂದು ಶಾಲು ತಾಯಿ ಸಂಚಾರಿ ನಿಯಂತ್ರಕ ರವೀಂದ್ರನುಡಿದು ಚಾಲಕರಿಗೆ ಶುಭ ಹಾರೈಸಿದರು.

ಅಧ್ಯಕ್ಷತೆ ವಹಿಸಿದ್ದ ಡಿಪೋ ವ್ಯವಸ್ಥಾಪಕ ರಮೇಶ ಚಿಣಗಿ ಅವರು ಚಾಲಕರಿಗೆ

(2ನೇ ಪುಟ ನೋಡಿ)

## ಸಮಾಜ ಕಲ್ಯಾಣ, ಬಿಸಿಎಂ, ಅಲ್ಪಸಂಖ್ಯಾತರ ವಸತಿ ನಿಲಯಗಳಲ್ಲಿ ಶಿಸ್ತು ಇರಲಿ: ಡಾ.ಶರಣಪ್ರಕಾಶ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರ:ಜ.24:ಸಮಾಜ ಕಲ್ಯಾಣ ಇಲಾಖೆ,ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ರಾಯಚೂರ ಜಿಲ್ಲೆಯ ಎಲ್ಲಾ ಕಡೆಗಿನ ವಸತಿ ನಿಲಯಗಳಲ್ಲಿ ಮೂಲ ಸೌಕರ್ಯ, ಅಲ್ಲಿನ ವಿದ್ಯಾರ್ಥಿಗಳಿಗೆ ಉತ್ತಮ ವಿದ್ಯಾಭ್ಯಾಸಕ್ಕೆ ಅವಕಾಶ ಕಲ್ಪಿಸಿ ವಸತಿ ನಿಲಯಗಳಲ್ಲಿ ಶಿಸ್ತು ಕಾಪಾಡಬೇಕು ಎಂದು ವೈದ್ಯಕೀಯ ಶಿಕ್ಷಣ ಸಚಿವರು ಹಾಗೂ ರಾಯಚೂರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರು, ಸಮಾಜ ಕಲ್ಯಾಣ, ಬಿಸಿಎಂ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಜನವರಿ 24ರಂದು ಮುಂದುವರೆದ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಸತಿ ನಿಲಯಗಳಿಗೆ ಅವಶ್ಯವಿರುವ ಕಡೆಗಳಲ್ಲಿ ಸಿಎ ಸೈಟ್ ಗುರುತಿಸಿ ಕಟ್ಟಡ ನಿರ್ಮಾಣಕ್ಕೆಕ್ರಮ ವಹಿಸಬೇಕು. ಜಿಲ್ಲೆಯ ಯಾವ ಯಾವ ಕಡೆಗಳಲ್ಲಿ ವಸತಿ ನಿಲಯಗಳಿಗೆ ಕಟ್ಟಡ ನಿರ್ಮಾಣಕ್ಕೆ ಜಾಗದ ಕೊರತೆ ಇದೆ ಎಂಬುದರ ಬಗ್ಗೆ ಇಲಾಖೆಯ ಅಧಿಕಾರಿಗಳು ಜಿಪಂ ಸಿಇಓ ಅವರೊಂದಿಗೆ ಚರ್ಚಿಸಿ ಕೂಡಲೇ ಜಾಗ ಪಡೆದು ಕಟ್ಟಡ ನಿರ್ಮಾಣಕ್ಕೆ ಕ್ರಮ ವಹಿಸಬೇಕು. ಕಟ್ಟಡ ನಿರ್ಮಾಣಕ್ಕೆಬೇಕಾದಅನುದಾನ, ಜಾಗದ ಅವಶ್ಯಕತೆಯ ಬಗ್ಗೆ ಪ್ರಸ್ತಾವನೆ ಸಲ್ಲಿಸಬೇಕು ಎಂದು ಸಚಿವರು ತಿಳಿಸಿದರು.

ತಾಲೂಕು ಅಧಿಕಾರಿಗಳಿಗೆ ಸೂಚನೆ: ಸಮಾಜ ಕಲ್ಯಾಣ ಇಲಾಖೆ, ಬಿಸಿಎಂ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಗಳ ವಸತಿ ನಿಲಯಗಳಿಗೆ ಆಹಾರ ಪೂರೈಕೆಯ ಟೆಂಡರ್ ಪಡೆದ ಏಜೆನ್ಸಿದಾರರು ಪ್ರತಿ ಮಾಹೆ 5ನೇ ತಾರೀಖಿನೊಳಗೆ ಟೆಂಡರ್ ಪಡೆದ ಪೂರ್ಣ ಮಾಲನ್ನು ವಸತಿ ನಿಲಯಗಳಿಗೆ ತಲುಪಿಸಿದ ಬಗ್ಗೆ ದಾಸ್ತಾನು ಸ್ವೀಕೃತಿ ರಸೀದಿ ಪಡೆಯಬೇಕು. ಈ ಬಗ್ಗೆ ಜಿಲ್ಲಾ ಹಾಗೂ ಪ್ರತಿ ತಾಲೂಕಿನ ಅಧಿಕಾರಿಗಳು ಸೂಕ್ತ ಮೇಲ್ವಿಚಾರಣೆ ಮಾಡಬೇಕು ಎಂದು ಸಚಿವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜಿಪಂ ಸಿಇಓಗೆ ಸೂಚನೆ: ಆಯಾ ವಸತಿ ನಿಲಯಗಳಿಗೆ ನಿಯಮಿತವಾಗಿ ಭೇಟಿ ಮಾಡಿ ಪರಿಶೀಲಿಸಿದ ಬಗ್ಗೆ, ವಸತಿ ನಿಲಯಗಳಮೇಲೆನಿಯುಕ್ತಿಯಾದ ನೋಡಲ್ ಅಧಿಕಾರಿಗಳಿಂದ ವರದಿ ಪಡೆದು, ವಸತಿ ನಿಲಯಗಳಲ್ಲಿನ ವ್ಯವಸ್ಥೆಯ ಬಗ್ಗೆ ಯಾವುದೇ ರೀತಿಯ ದೂರುಗಳು ಬಾರದ ಹಾಗೆ ಸೂಕ್ತ ಮೇಲ್ವಿಚಾರಣೆ

(2ನೇ ಪುಟ ನೋಡಿ)

## ವಕ್ಫ್ ಮಸೂದೆಯ ಜಂಟಿ ಸಂಸದೀಯ ಸಮಿತಿ ಸಭೆಯಲ್ಲಿ ಗದ್ದಲ: ಪ್ರತಿಪಕ್ಷ ಸಂಸದರ ಅಮಾನತು



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಜ.24: ವಕ್ಫ್ ತಿದ್ದುಪಡಿ ಮಸೂದೆಯ ಜಂಟಿಸಂಸದೀಯಸಮಿತಿ(ಜೆಪಿಸಿ) ಸಭೆಯಿಂದ ಪ್ರತಿಪಕ್ಷಗಳ ಎಲ್ಲಾ ಸಂಸದರನ್ನು ಶುಕ್ರವಾರ ಒಂದು ದಿನದ ಮಟ್ಟಿಗೆ ಅಮಾನತುಗೊಳಿಸಲಾಗಿದೆ.

ಜೆಪಿಸಿ ಅಧ್ಯಕ್ಷ ಜಗದಾಂಬಿಕಾ ಪಾಲ್ ಅವರ ವಿರುದ್ಧ ನಿರಂತರ ಪ್ರತಿಭಟನೆ ಮತ್ತು ಗದ್ದಲದ ಹಿನ್ನೆಲೆಯಲ್ಲಿ ಪ್ರತಿಪಕ್ಷಗಳ ಎಲ್ಲಾ 10 ಸಂಸದರನ್ನು ಅಮಾನತುಗೊಳಿಸಲಾಗಿದೆ.

ಕಲ್ಯಾಣ್ ಬ್ಯಾನರ್ಜಿ, ಮೊಹಮ್ಮದ್ ಜಾವೇದ್, ಎ ರಾಜಾ, ಅಸಾದುದ್ದೀನ್ ಓವೈಸಿ, ನಾಸೀರ್ ಹುಸೇನ್, ಮೊಹಿಬುಲ್ಲಾ, ಮೊಹಮ್ಮದ್ ಅಬ್ದುಲ್ಲಾ, ಅರವಿಂದ್ ಸಾವಂತ್, ನದೀಮ್–ಉಲ್ ಹಕ್, ಇಮ್ರಾನ್ ಮಸೂದ್ ಅವರನ್ನು ಒಂದು ದಿನದ ಮಟ್ಟಿಗೆ ಅಮಾನತುಗೊಳಿಸಲಾಗಿದೆ.

ಬಿಜೆಪಿ ಸದಸ್ಯ ನಿಶಿಕಾಂತ್ ದುಬೆ ಅವರು ವಿರೋಧ ಪಕ್ಷದ ಸದಸ್ಯರನ್ನು ಅಮಾನತುಗೊಳಿಸುವ ಪ್ರಸ್ತಾವನೆಯನ್ನು ಮಂಡಿಸಿದರು ಮತ್ತು ಇದನ್ನು ಸಮಿತಿ ಅಂಗೀಕರಿಸಿತು.

ಬಿಜೆಪಿ ಸದಸ್ಯ ಅಪರಾಜಿತಾ ಸಾರಂಗಿ ಅವರು ವಿರೋಧ ಪಕ್ಷದ ಸದಸ್ಯರು ಸಭೆಯಲ್ಲಿ ನಿರಂತರವಾಗಿ ಗದ್ದಲ ಸೃಷ್ಟಿಸುತ್ತಿದ್ದರು ಮತ್ತು ಪಾಲ್ ವಿರುದ್ಧ ಅಸಂಸದೀಯ ಭಾಷೆ ಬಳಸುತ್ತಿದ್ದರು ಎಂದು ಆರೋಪಿಸಿದ್ದಾರೆ.

ಜಂಟಿ ಸಂಸದೀಯ ಸಮಿತಿ ಸಭೆಯು ತೀವ್ರ ಗದ್ದಲದಿಂದ ಕೂಡಿತ್ತು, ವಿರೋಧ ಪಕ್ಷದ ಸದಸ್ಯರು ಕರಡು ಮಸೂದೆಗೆ ಪ್ರಸ್ತಾವಿತ ಬದಲಾವಣೆಗಳನ್ನು ಅಧ್ಯಯನ ಮಾಡಲು ಸಾಕಷ್ಟು ಸಮಯ ನೀಡಲಾಗಿಲ್ಲ ಎಂದು ಆರೋಪಿಸಿದರು.ಈ ಬಗ್ಗೆ ಮಾತನಾಡಿದ ತೃಣಮೂಲ ಕಾಂಗ್ರೆಸ್ ಸಂಸದ ಕಲ್ಯಾಣ್ ಬ್ಯಾನರ್ಜಿ ಅವರು, ಸಮಿತಿಯ ಅಧ್ಯಕ್ಷರಾದ ಜಗದಾಂಬಿಕಾ ಪಾಲ್ ಅವರು ವಿರೋಧ ಪಕ್ಷದ ಸಂಸದರ ಧ್ವನಿಯನ್ನು ಕಡೆಗಣಿಸಿದ್ದಾರೆ.

## ಒಂದನೇ ಪುಟದಿಂದ

## ಶಿಸ್ತು ಇರಲಿ: ಡಾ.ಶರಣಪ್ರಕಾಶ ಪಾಟೀಲ

ಮಾಡಬೇಕು. ಜಿಲ್ಲೆಯಲ್ಲಿನ ಎಲ್ಲಾ ವಸತಿ ನಿಲಯಗಳ ಸೂಕ್ತ ಮೇಲ್ವಿಚಾರಣೆಗಾಗಿ ಕೂಡಲೇ ಬಾಕಿ ಇರುವ ಕಡೆಗೆ ನೋಡಲ್ ಅಧಿಕಾರಿಗಳನ್ನು ನೇಮಿಸಬೇಕು ಎಂದು ಇದೆ ವೇಳೆ ಸಚಿವರು, ಜಿಪಂ ಸಿಇಓ ಅವರಿಗೆ ಸೂಚನೆ ನೀಡಿದರು.

ಫಲಿತಾಂಶ ಸುಧಾರಿಸಬೇಕು: ರಾಯಚೂರ ಜಿಲ್ಲೆಯ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಫಲಿತಾಂಶವು ಇಡೀ ರಾಜ್ಯದಲ್ಲಿಯೇ ಕಳಪೆ ಇದೆ ಎಂದು ಸಭೆಗೆ ತಿಳಿಸಿದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರ ಪ್ರಶ್ನೆ ಮೇಲೆ ಚರ್ಚಿಸಿದ ಸಚಿವರು, ಸಮಾಜ ಕಲ್ಯಾಣ ಇಲಾಖೆ, ಬಿಸಿಎಂ ಮತ್ತು ಮೈನಾರಿಟಿ ವಸತಿ ನಿಲಯದಲ್ಲಿನ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆತು ಅವರ ಫಲಿತಾಂಶ ಸುಧಾರಣೆಗೆ ಒತ್ತು ಕೊಡಬೇಕು ಎಂದರು. ಗುಣಮಟ್ಟದ ಆಹಾರ ಪೂರೈಕೆಯ ಪರಿಶೀಲನೆ ಜತೆಗೆ ಅಲ್ಲಿನ ವಿದ್ಯಾರ್ಥಿಗಳ ಓದು, ಬರೆಹ, ಅವರ ಆರೋಗ್ಯದ ಪ್ರಗತಿಯ ಬಗ್ಗೆ ಸಹ ಪರಿಶೀಲನಾ ಕಾರ್ಯ ಆಗಬೇಕು. ಆದಾಗ್ಯೂ ಎಸ್ಸೆಸ್ಸೆಲ್ಸಿ ಮತ್ತು ಪಿಯು ಫಲಿತಾಂಶದಲ್ಲಿ ಕುಸಿತ ಕಂಡು ಬಂದಲ್ಲಿ ಆಯಾ ವಸತಿ ನಿಲಯಗಳ ವಾರ್ಡನ್, ವಸತಿ ನಿಲಯಗಳಿಗೆ ನಿಯೋಜನೆಯಾದ ನೋಡಲ್ ಅಧಿಕಾರಿ ಮತ್ತು ತಾಲೂಕು ಅಧಿಕಾರಿಯನ್ನೇ ಹೊಣೆಯಾಗಿಸಿ ಕ್ರಮ ಜರುಗಿಸಲಾಗುದು ಎಂದು ಸಚಿವರು ಎಚ್ಚರಿಕೆ ನೀಡಿದರು.

ನಿಲಯಗಳ ಸುಧಾರಣೆಗೆ ಆದ್ಯತೆ ಕೊಡಿ: ಸರ್ಕಾರವು ಬಡ ಮಕ್ಕಳ ಶಿಕ್ಷಣಕ್ಕೆ ನೀಡುವ ಅನುದಾನವು ಸದ್ಬಳಕೆಯಾಗಬೇಕು. ಈ ನಿಟ್ಟಿನಲ್ಲಿ ವಸತಿ ನಿಲಯಗಳ ಸುಧಾರಣೆಗೆ ಮೊದಲ ಆದ್ಯತೆ ಕೊಡಬೇಕು ಎಂದು ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಬಸನಗೌಡ ತುರವಿಹಾಳ ಅವರು ಹೇಳಿದರು.

ಬ್ಲಾಕ್ ಲೀಸ್ಟ್ ಗೆ ಹಾಕಿ:

ವಸತಿ ನಿಲಯಗಳಿಗೆ ಆಹಾರ ಪೂರೈಕೆ ಮಾಡುವ ಏಜೆನ್ಸಿಗಳ ಮೇಲೆ ಸಹ ಮಾನಿಟರ್ ಆಗಬೇಕು. ಪ್ರತಿ ಬಾರಿ ಒಂದೇ ಏಜೆನ್ಸಿಗೆ ಟೆಂಡರ್ ಕೊಡುವುದು ತಪ್ಪಬೇಕು ಎಂದು ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಹೇಳಿದರು.

ಶಿಕ್ಷಕರ ಕೊರತೆ ತಪ್ಪಿಸಿ: ದೇವದುರ್ಗ ತಾಲೂಕಿನಲ್ಲಿ ಶಿಕ್ಷಣ ಇಲಾಖೆಯಲ್ಲಿ ಕೊರತೆಯಿದ್ದರೂ ಸಮಾಜ ಕಲ್ಯಾಣ ಇಲಾಖೆ ತೆಗೆದುಕೊಂಡ ಶಿಕ್ಷಕರನ್ನು ಕೂಡಲೇ ಬಿಡುಗಡೆಗೊಳಿಸಿ ಮಾತೃ ಇಲಾಖೆಗೆ ಕಳುಹಿಸಬೇಕು ಎಂದು ಶಾಸಕರಾದ ಕರೆಮ್ಮ ಜಿ. ನಾಯಕ ಅವರು ಸಭೆಗೆ ತಿಳಿಸಿದರು.

ಕಟ್ಟಡ ನಿರ್ವಹಣೆ ಸಮರ್ಪಕವಾಗಿರಲಿ:

ಮಾನ್ವಿ ತಾಲೂಕಿನಲ್ಲಿ ಕಟ್ಟಿರುವ

ಕೆಲವು ಸರ್ಕಾರಿ ಕಟ್ಟಡಗಳು ಸರಿಯಾದ ನಿರ್ವಹಣೆ ಇಲ್ಲದೇ ದುಸ್ಥಿತಿಯಲ್ಲಿದ್ದು, ಅವಶ್ಯವಿರುವ ಇಲಾಖೆಗೆ ಕೂಡಲೇ ಹಸ್ತಾಂತರಿಸುವ ಪ್ರಕ್ರಿಯೆ ನಡಸಬೇಕು ಎಂದು ಮಾನ್ವಿ ಶಾಸಕರಾದ ಜಿ.ಹಂಪಯ್ಯ ನಾಯಕ ಅವರು ಸಭೆಗೆ ತಿಳಿಸಿದರು.

ಕೀಳುಮಟ್ಟದ ನಿರ್ವಹಣೆ: ಬಹುತೇಕ ವಸತಿ ನಿಲಯಗಳಲ್ಲಿ ಪೂರ್ಣಾವಧಿಯಲ್ಲಿ ವಾರ್ಡನಗಳಿಲ್ಲದೇ ಕೀಳುಮಟ್ಟದ ನಿರ್ವಹಣೆಯಿದೆ ಎಂದು ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ ಅವರು ಅಸಮಾಧಾನ ವ್ಯಕ್ತಪಡಿಸಿದರು. ಇದಕ್ಕೆ ದನಿಗೂಡಿಸಿದ ಶಾಸಕರಾದ ಬಸನಗೌಡ ಬಾದರ್ಲಿ ಅವರು,

ಸಿಂಧನೂರಿನಲ್ಲಿ ಹಾಸ್ಟೆಲಗಳಿಗೆ ಭೇಟಿ ಮಾಡಿ ಪರಿಶೀಲನೆ ನಡೆಸಿದ ವೇಳೆಯಲ್ಲಿ ಅಲ್ಲಿ ಕಳಪೆ ಮಟ್ಟದ ಆಹಾರ ಪೂರೈಕೆ ಜೊತೆಗೆ ಮೌಲಸೌಕರ್ಯ ಕೊರತೆಯಿರುವುದು ಕಂಡು ಬಂದಿದೆ ಎಂದರು. ದೇವದುರ್ಗ ತಾಲೂಕಿನಲ್ಲೂ ಇದೆ ಸ್ಥಿತಿಯಿದೆ ಎಂದು ದೇವದುರ್ಗ ಶಾಸಕರು ಹೇಳಿದರು.

ವಸತಿ ನಿಲಯಗಳ ಸಂಖ್ಯೆ ಹೆಚ್ಚಿಸಿ: ಹಿಂದುಳಿದ ರಾಯಚೂರ ಜಿಲ್ಲೆಗೆ ವಿದ್ಯಾರ್ಥಿಗಳ ಅಗತ್ಯಕ್ಕೆ ತಕ್ಕಂತೆ ಮೊರಾರ್ಜಿ ವಸತಿ ಶಾಲೆ ಸೇರಿದಂತೆ ಇನ್ನೀತರ ವಸತಿ ನಿಲಯಗಳ ಸಂಖ್ಯೆಯನ್ನು ಹೆಚ್ಚಿಸಬೇಕು ಎಂದು ನಾಮ ನಿರ್ದೇಶಿತ ಸದಸ್ಯರಾದ ತಿಮ್ಮಪ್ಪ ಮಲ್ಲಯ್ಯ ಹಾಗೂ ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ ಹಾಗೂ ಇನ್ನೀತರರು ಸಭೆಗೆ ಮನವಿ ಮಾಡಿದರು.

ಸಭೆಯಲ್ಲಿ ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರ ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ನಾಮ ನಿರ್ದೇಶಿತ ಸದಸ್ಯರಾದ ಸೋಮಶೇಖರ ಪಾಟೀಲ, ಮೀನಾಕ್ಷಿ ರಾಮಸ್ವಾಮಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಪಂ ಸಿಇಓ ರಾಹುಲ್ ತುಕಾರಾಮ ಪಾಂಡ್ವೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ ಪುಟ್ಟಮಾದಯ್ಯ, ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

## ಉತ್ತೇಜನಕ್ಕೆ ಪ್ರಯತ್ನಿಸುತ್ತೇನೆ :ಎಖೇಳ್ಳಿ

ಕಾರ್ಯನಿರ್ವಾಹಕ ನಾಗಪ್ಪ ಅಂಬಾಡಿ ನೂತನ ಅಧ್ಯಕ್ಷ ಉಪಾಧ್ಯಕ್ಷ ಹಾಗೂ ಸರ್ವ ಸದಸ್ಯರನ್ನು ಶಾಲು ಹೊದಿಸಿ ಸನ್ಮಾನಿಸಿದರು. ನೂತನ ಅಧ್ಯಕ್ಷ ಜಗನಾಥರೆಡ್ಡಿ ಎಖೇಳ್ಳಿ ಮಾತನಾಡಿ, ಡಿಸಿಸಿ ಬ್ಯಾಂಕ ನಿರ್ದೇಶಕರಾಗಿ ಮತ್ತು 2007 ರಿಂದ ಪಿಕೆಪಿಎಸ್ ನಿರ್ದೇಶಕನಾಗಿ, ಅಧ್ಯಕ್ಷನಾಗಿ ಸೇವೆ ಮಾಡಲು ನನಗೆ ಅವಕಾಶ ಕಲ್ಪಿಸಿಕೊಟ್ಟ ರೈತರಿಗೆ ಧನ್ಯವಾದಗಳು ಸಲ್ಲಿಸುತ್ತನೆ. ರೈತರ ಏಳಿಗೆಗಾಗಿ ಹಗಲಿರಳು ಶ್ರಮಿಸಿ, ರೈತರ ಮತ್ತು ವ್ಯಾಪಾರಸ್ಥರ ಉತ್ತೇಜನಕ್ಕಾಗಿ ಏನು ಮಾಡಬೇಕು ಎಂಬುದನ್ನು ಯೋಜನೆ ಹಾಕಿಕೊಂಡು ಕಾರ್ಯರೂಪಕ್ಕೆ ತರುವ ಪ್ರಯತ್ನ ಮಾಡುತ್ತೇನೆ, ರೈತರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳು ರೈತರ ಮನೆ ಬಾಗಿಲಿಗೆ ಮುಟ್ಟಿಸುವಂತಹ ಕಾರ್ಯ ಮಾಡುತ್ತೇನೆ ಎಂದು ಆಶ್ವಾಸನೆ ನೀಡಿದರು. ಸಹಕಾರ ಕ್ಷೇತ್ರದಲ್ಲಿ ಸೇವಾ ಮನೋಭಾವನೆ ಇರಬೇಕು ರಾಜಕೀಯ ಹೊರತಾಗಿ ಸಹಕಾರ ಕ್ಷೇತ್ರ ಬೆಳೆಯಬೇಕು ಸಹಕಾರ ಸಂಘ ಕೇವಲ ಬಡ್ಡಿ ಆದಾಯದಿಂದ ಬೆಳೆಯಲು ಸಾಧ್ಯವಿಲ್ಲ ಬೆಳವಣಿಗೆಗೆ ವಿಭಿನ್ನ ಆದಾಯ ಮೂಲ ಅಗತ್ಯವಾಗಿದೆ ಎಂದರು. ರೈತರಿಗೆ ನೀಡುವ ಕಡಿಮೆ ಬಡ್ಡಿ ದರದ ಸಾಲಕ್ಕೆ ನಬಾರ್ಡ್ ಇದರಿಂದ ರೈತರಿಗೆ ಅಗತ್ಯ ಇರುವಷ್ಟು ಸಾಲ ನೀಡಲು ಸಾಧ್ಯವಾಗುತ್ತಿಲ್ಲ ಸರ್ಕಾರ ಇನ್ನು ಹೆಚ್ಚಿನ ಅನುದಾನ ನೀಡಿ ರೈತರಿಗೆ ಹೆಚ್ಚಿನ ಸಾಲ ಸೌಲಭ್ಯ ನೀಡಬೇಕು ಎಂದು ಒತ್ತಾಯಿಸಿದರು. ನಿರ್ದೇಶಕರಾದ ತುಕರಾಮ ಸಾಯಪ್ಪ, ವಿಜಯಕುಮಾರ್ ಭೀಮಶಾ, ಕೃಷ್ಣರೆಡ್ಡಿ ಸಂಗಾರೆಡ್ಡಿ, ಚಂದ್ರಶೇಖರ್ ಹಾವಶೆಟ್ಟಿ, ತಿಪ್ಪಣ್ಣ ಮರೇಪ್ಪ, ಎಂ.ಡಿ. ರಸೂಲ ಅಹ್ಮದ್ ಖಾಜಾಸಾಬ್ ಲಶ್ಕೇರಿ, ಚಂದ್ರಶೇಖರ್ ಶಂಕರರಾವ, ರಂಗಮ್ಮಾ , ಲಕ್ಷ್ಮಿಬಾಯಿ ಸಂಜೂಕುಮಾರ್, ಹಣಮಂತರೆಡ್ಡಿ ರಾಮರೆಡ್ಡಿ, ಸಿಬ್ಬಂದಿಗಳಾದ ಲಕ್ಷ್ಮಿ ಮಠಪತಿ, ಚಂದ್ರಕಲಾ ಮಲ್ಲಪನೋರ್, ಸುಧಾಕರ್ ಹಲಗೆ, ಶಾಮರಾವ ವಿಜಾಪುರ, ಶ್ರೀಕಾಂತ ರೆಡ್ಡಿ ಗುಡ್ಡಾಡಿ, ಜಗನ್ನಾಥ ರಾಯಗೊಂಡ ಪ್ರಮುಖರಾದ ಸಂಜೀವ ರೆಡ್ಡಿ, ಯಾಮಾರೆಡ್ಡಿ, ಅಶೋಕ ರೆಡ್ಡಿ ಲಚನಗಾರ, ಪೆಂಟಾರೆಡ್ಡಿ ಎಖೇಳ್ಳಿ, ತಿಪ್ಪಣ್ಣ ಮಾಲೆ, ಸೂರ್ಯಕಾಂತ ಕಾಗೆ, ಅಶೋಕ ಕಾಗೆ, ಅನೀಲ ರೆಡ್ಡಿ ಲಚನಗಾರ, ಬಲವಂತ ರೆಡ್ಡಿ ಬನ್ನಳ್ಳಿ, ಗುಂಡಪ್ಪ ಮದರಗಿ, ಮೈನು ಮಚ್ಕುರಿ, ಅಬ್ದುಲ್ ಗನಿ ಲಶ್ಕೇರಿ, ಮುಸ್ತಫಾ, ಸಾಗರ ನಿರ್ಣಾ ವಾಡಿ, ತಾಜೋದ್ದಿನ ಲಶ್ಕೇರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.ನಿರ್ಣಾ ಸಹಕಾರಿ ಸಂಘ ಮಾದರಿ ಸಂಘ ಮಾಡಲು ಆಡಳಿತ ಮಂಡಳಿಯ ಸಹಕಾರದೊಂದಿಗೆ ಹಗಲಿರಳು ಶ್ರಮಿಸುತ್ತೇನೆ, ನನಗೆ ಅಧ್ಯಕ್ಷನಾಗಿ ಆಯ್ಕೆ ಮಾಡಿದ ಸರ್ವ ನಿರ್ದೇಶಕರಿಗೆ ಹಾಗೂ ಗ್ರಾಮದ ಹಿರಿಯರಿಗೆ ಮತ್ತು ವಿಶೇಷವಾಗಿ ರೈತರಿಗೆ ಧನ್ಯವಾದಗಳು ಸಲ್ಲಿಸುತ್ತೇನೆ. **ನೂತನ ಅಧ್ಯಕ್ಷ ಜಗನಾಥ ರೆಡ್ಡಿ ಎಖೇಳ್ಳಿ**

## ನಿಲ್ದಾಣದಲ್ಲಿ ಚಾಲಕರ ದಿನಾಚರಣೆ

ಶುಭಾಶಯಗಳನ್ನು ಹೇಳಿದರು. ಕೇಂದ್ರೀಯ ಬಸ್ ನಿಲ್ದಾಣದ ಕಾರ್ಯಕ್ರಮದಲ್ಲಿ ಅಮೀನ್ ಸಾಬ್ ಕೋಳಿ, ಚೆನ್ನಮ್ಮ, ವಿಭಾಗೀಯ ನಿಯಂತ್ರಣಾಧಿಕಾರಿ ಎಂ,ವೆಂಕಟೇಶ್, ವಿಭಾಗಿಯ ಸಂಚಾಲನ ಅಧಿಕಾರಿ ಆರ್,ಬಿ,ಜಾದವ್, ಚಾಲಕ ವಸಂತ ರಾಮದುರ್ಗ, ಅನಿಲ್ ಕುಮಾರ್, ಲೆಕ್ಕಾಧಿಕಾರಿ ಶ್ರೀಮತಿ ಜಯಶ್ರೀ, ಶ್ರೀಮತಿ ಕಾವ್ಯ, ಸಂಚಾರ ನಿರೀಕ್ಷಕ ಮಂಜುನಾಥ್ ಬಂಡಿ, ನಾಗರಾಜ ನಾಗರೆಡ್ಡಿ, ಕೆ,ಎಸ್,ಆರ್,ಟಿ,ಸಿ, ಸ್ಟಾಫ್ ಆಯಿಂಡ್ ವರ್ಕರ್ಸ್ ಫೆಡರೇಶನ್ ಮುಖಂಡ ಎ,ಜಿ, ಮಣ್ಣೂರು ಮುಂತಾದ ಅನೇಕ ಕೆ,ಎಸ್,ಆರ್,ಟಿ,ಸಿ,ಚಾಲಕರು,ನಿರ್ವಾಹಕರು, ಕಾರ್ಮಿಕರು ಭಾಗವಹಿಸಿ ಚಾಲಕರಿಗೆ ಶುಭಾಶಯಗಳನ್ನು ತಿಳಿಸಿದರು.

## ರಾಜ್ಯ ಮಟ್ಟಕ್ಕೆ ಕಲಬುರಗಿ ತಂಡ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.24:ಕಲಬುರಗಿ ವಿಭಾಗ ಮಟ್ಟದ ಸಮಾಜ ಕಲ್ಯಾಣ ಇಲಾಖೆಯ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು ಜನವರಿ 23 ಮತ್ತು 24 ರಂದು ಎರಡು ದಿನಗಳ ಕಾಲ ಕಲಬುರಗಿಯ ಪದವಿ ಕಾಲೇಜು ಆವರಣದಲ್ಲಿ ಯಶಸ್ವಿಯಾಗಿ ಜರುಗಿದ್ದು, ಕ್ರಿಕೆಟ್ ಪಂದ್ಯಾವಳಿಯಲ್ಲಿ ಕಲಬುರಗಿ ಜಿಲ್ಲಾ ತಂಡ ಯಾದಗಿರಿ ತಂಡವನ್ನು ಸೋಲಿಸಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದೆ.

## ಸಕಲ ಸೌಲಭ್ಯಗಳು ಕಲ್ಪಿಸಬೇಕು ಪಾಟೀಲ

ಅನ್ನ ದಾಸೋಹ. ಉತ್ತಮವಾಗಿ ನಡೆಸುತ್ತಾರೆ. ಇದು ನಮ್ಮ ಊರು ಜಾತ್ರೆ ನಮ್ಮ ಹೆಮ್ಮೆ. ಹಾಗಾಗಿ ಬರುವ ಭಕ್ತರು ನಮ್ಮ ಮನೆಯ ಸದಸ್ಯರಂತೆ ಕಾಣಬೇಕು ಎಂದು ತಿಳಿಸಿದರು. ಜಾತ್ರೆಗೆ ಬರುವ ಭಕ್ತರಿಗೆ ಹಾರ್ದಿಕ ಸ್ವಾಗತ ಕೊರುತ್ತೇನೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ ತಿಳಿಸಿದ್ದಾರೆ

## ಗ್ರಾಮಸ್ಥರ ಸಹಕಾರವಿದ್ದಾಗ ಮಾತ್ರ ಅಭಿವೃದ್ಧಿ ಸಾಧ್ಯ : ಬಸವರಾಜ ರಾಯರೆಡ್ಡಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜ.24: ಕುಕನೂರ ತಾಲೂಕಿನ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿ ಹಾಗೂ ಭೂಮಿ ಪೂಜೆ ಕಾರ್ಯಕ್ರಮ ನೆರವೇರಿಸಲಾಯಿತು. ಕುಕನೂರು ತಾಲೂಕಿನ ಯಡೆಯಾಪುರ ಬೂದುಗುಂಪ ರಸ್ತೆಯಲ್ಲಿ ಬರುವ ಹಳ್ಳಕ್ಕೆ ಬ್ರಿಜ್ ಕಮ್ ಬ್ಯಾರೇಜ್ ಭೂಮಿ ಪೂಜೆ ನೆರವೇರಿಸಿ ವೇದಿಕೆಯನ್ನು ಉದ್ದೇಶಿಸಿ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ ಮಾತನಾಡುತ್ತ ಕೇವಲ ಒಂದು ವರ್ಷದಲ್ಲಿ ಕ್ಷೇತ್ರದಲ್ಲಿ ನೂತನ 14 ಪ್ರೌಢಶಾಲೆ ಆರು ಪದವಿಪೂರ್ವ ಕಾಲೇಜು ಹಾಗು ನಾಲ್ಕು ವಸತಿ ಶಾಲೆಗಳನ್ನು ಮಂಜೂರು ಮಾಡಿಸಿದ್ದು ಮುಂದಿನ ಅವಧಿಯೊಳಗೆ ಕ್ಷೇತ್ರದ ಎಲ್ಲಾ ರೀತಿಯ ಅಭಿವೃದ್ಧಿಗೆ ಬದ್ಧನಾಗಿದ್ದು ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗಾಗಿ ಸದಾಕಾಲ ಸಿದ್ಧನಿದ್ದೇನೆ ಎಂದರು. ಸರ್ಕಾರದಿಂದ ಹಲವಾರು ಯೋಜನೆಗಳನ್ನು ಮಂಜೂರು ಪಡಿಸುತ್ತಿದ್ದು ಪ್ರತಿ ಗ್ರಾಮದಲ್ಲೂ ಗ್ರಾಮಸ್ಥರ ಸಹಕಾರವಿದ್ದಾಗ ಮಾತ್ರ ಅಭಿವೃದ್ಧಿ ಸಾಧ್ಯ. ಗ್ರಾಮಗಳಲ್ಲಿ ಬೃಹತ್ ಕೆರೆ ನಿರ್ಮಾಣಕ್ಕಾಗಿ ಭೂಮಿ ಅವಶ್ಯಕತೆ ಇದ್ದು ಸರ್ಕಾರಿ ಬೆಲೆಗೆ ಭೂಮಿಯನ್ನು ನೀಡುವ ಬೂದಾನಿಗಳು ಮುಂದೆ ಬಂದಲ್ಲಿ ಪ್ರತಿ ಗ್ರಾಮಕ್ಕೂ ಉತ್ತಮವಾದ ಬೃಹತ್ ಕೆರೆ ನಿರ್ಮಾಣ ಮಾಡುವುದಾಗಿ ತಿಳಿಸಿದರು ಹಾಗೂ ಅಭಿವೃದ್ಧಿಗೆ ರಸ್ತೆಗಳು ಪೂರಕವಾಗಿದ್ದು ಎಲ್ಲಾ ರಸ್ತೆಗಳನ್ನು ಹಂತ ಹಂತವಾಗಿ ಸುಧಾರಣೆಗೊಳಿಸಲು ಹಗಲಿರುಳು ಶ್ರಮಿಸುತ್ತೇನೆ ಎಂದು ಹೇಳಿದರು.

## ಪರವಾನಿಗೆ ನವೀಕರಣ ಇಲ್ಲದ ಹಣಕಾಸು ಸಂಸ್ಥೆ ಮುಟ್ಟುಗೋಲು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ : ಜ. 24 : ಕರ್ನಾಟಕ ಲೇವಾದೇವಿದಾರರ 1961, ಅಧಿನಿಯಮ 7, 10 ರಡಿ 05 ವರ್ಷಗಳ ಅವಧಿಗೆ ಲೇವಾದೇವಿ ವ್ಯವಹಾರ ಮಾಡಲು ಪರವಾನಿಗೆಯನ್ನು ಪಡೆದ ಜಿಲ್ಲೆಯ ಕೆಲವು ಲೇವಾದೇವಿ, ಹಣಕಾಸು ಸಂಸ್ಥೆಗಳು , ಗಿರಿವಿದಾರರಿಗೆ ಅವಧಿ ಮುಕ್ತಾಯವಾದ ನಂತರ ಪರವಾನಿಗೆ ನವೀಕರಣಕ್ಕೆ ಪ್ರಸ್ತಾವನೆಯನ್ನು ಸಲಿಸುವಂತೆ ಇಲಾಖೆಯಿಂದ ನೋಟೀಸ್ ನೀಡಲಾಗಿತ್ತು. ಆದರೆ ಈ ಕೆಳಗಿನ ಸಂಸ್ಥೆಗಳು ಪ್ರಸ್ತಾವನೆಯನ್ನು ತಹಲ್‌ವರೆಗೂ ಸಲ್ಲಿಸಿರುವುದಿಲ್ಲ. ಅಲ್ಲದೆ ಪರವಾನಿಗೆಯ ಅವಧಿ ಮುಕ್ತಾಯವಾದರೂ ಕೂಡ ನವೀಕರಣಕ್ಕಾಗಿ ಅಥವಾ ಭದ್ರತಾ ಠೇವಣಿಯನ್ನು ಮರುಸಂದಾಯ ಮಾಡಲು ಪ್ರಸ್ತಾವನೆಯನ್ನು ಕೂಡ ಸಲ್ಲಿಸಿರುವುದಿಲ್ಲ. ಕಾರಣ ನೀವು ಇಟ್ಟಂತ ಭದ್ರತಾ ಠೇವಣಿಯನ್ನು ಕಲಂ 7ಬಿ ರಲ್ಲಿಯ ಅವಕಾಶಗಳಂತೆ ಸರ್ಕಾರಕ್ಕೆ ಏಕೆ ಮುಟ್ಟುಗೋಲು ಹಾಕಿಕೊಂಡು ಆದೇಶ ಮಾಡಬಾರದು ಎಂಬುದಕ್ಕೆ ತಕರಾರು ಇದ್ದಲ್ಲಿ ಪತ್ರಿಕಾ ಪ್ರಕಟಣೆಯಾದ 7 ದಿನಗಳ ಒಳಗಾಗಿ ಸಹಕಾರ ಸಂಘಗಳ ಉಪನಿಬಂಧಕರು, ಬಾಗಲಕೋಟೆ ರೂ.ನಂ.13%, ಆಡಳಿತ ಭವನ, ನವನಗರ ಇಲ್ಲಿ ಖುದ್ದು ಹಾಜರಾಗಿ ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಕೆಳಗೆ ನಮೂದಿಸಿದ ಸಂಸ್ಥೆಗಳ ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದೆಂದು ತಿಳಿಸಲಾಗಿದೆ.

## ರೈಲು ಹಳಿ ಮೇಲೆ ಮೃತದೇಹ ಪತ್ತೆ ; ವಾರಸುದಾರರ ಪತ್ತೆಗಾಗಿ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 24 : ಹುಮನಾಬಾದ್ ಮತ್ತು ಹಳ್ಳಿಖೇಡ (ಕೆ) ಮಧ್ಯದ ರೈಲು ಹಳಿ ಮೇಲೆ ವ್ಯಕ್ತಿಯೊಬ್ಬನ ಮೃತದೇಹ ಪತ್ತೆಯಾಗಿದ್ದು, ಮೃತ ವ್ಯಕ್ತಿಯ ವಾರಸುದಾರರ ಪತ್ತೆಗಾಗಿ ಬೀದರ್ ರೈಲ್ವೆ ಪೊಲೀಸ್ ಠಾಣೆಯ ಪೊಲೀಸ್ ಉಪನಿರೀಕ್ಷಕರು ಪತ್ರಿಕಾ ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.

ಜ.22 ರ ಬೆಳಿಗ್ಗೆ ಸುಮಾರು 9:40 ಗಂಟೆಗೆ 45 ವಯಸ್ಸಿನ ವ್ಯಕ್ತಿಯ ಮೃತದೇಹವು ರೈಲು ಹಳಿ ಮೇಲೆ ಪತ್ತೆಯಾಗಿದ್ದು, ಇದುವರೆಗೆ ಮೃತನ ವಾರಸುದಾರರು ಯಾರು ಎಂದು ಪತ್ತೆಯಾಗಿಲ್ಲ.

ಬೀದರ್ ರೈಲು ನಿಲ್ದಾಣ ಅಧಿಕಾರಿಯ ಲಿಖಿತ ದೂರಿನ ಮೇರೆಗೆ ಬೀದರ್ ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ, ತನಿಖೆ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದ್ದಾರೆ.ಮೃತ ವ್ಯಕ್ತಿಯು 5 ಫೀಟ್ 6 ಇಂಚ್ ಎತ್ತರ ಇದ್ದು, ಅಗಲವಾದ ಹಣೆ, ಸಧೃಡ ಮೈಕಟ್ಟು, ಗೋಧಿ ಮೈ ಬಣ್ಣ, ತಲೆಯಲ್ಲಿ ಕಪ್ಪು ಉದ್ದನೆಯ ಕೂದಲು,ಮುಖದ ಮೇಲೆ ಉದ್ದನೆಯ ಗಡ್ಡ ಮತ್ತು ಮೀಸೆ ಇದೆ. ಆತ ಒಂದು ಕಪ್ಪು ಬಣ್ಣದ ಜಾಕೇಟ್, ಒಂದು ಕಪ್ಪು ಬಣ್ಣದ ಪ್ಯಾಂಟ್, ಬೂದು ಬಣ್ಣದ ರೌಂಡ್ ನೇಕ್ ಟಿ ಶರ್ಟ್ ಧರಿಸಿರುತ್ತಾನೆ ಎಂದು ಮಾಹಿತಿ ನೀಡಿದ್ದಾರೆ.ಮೃತ ವ್ಯಕ್ತಿಯ ವಾರಸುದಾರರು ಯಾರಾದರೂ ಇದ್ದಲ್ಲಿ ಅಥವಾ ವಾರಸುದಾರರ ಬಗ್ಗೆ ಯಾರಿಗಾದರು ಮಾಹಿತಿ, ಸುಳಿವು ಸಿಕ್ಕಲ್ಲಿ ಪೊಲೀಸ್ ಉಪ ನಿರೀಕ್ಷಕರು ರೈಲ್ವೆ ಪೊಲೀಸ್ ಠಾಣೆ ಬೀದರ್ ಅಥವಾ ದೂರವಾಣಿ ಸಂಖ್ಯೆ: 08482-226389,ಮೊಬೈಲ್ ಸಂಖ್ಯೆ:9480802133,7483095508 ಗೆ ಸಂಪರ್ಕಿಸುವಂತೆ ಕೋರಿದ್ದಾರೆ.

## ನಾಳೆ ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಜನಜಾಗೃತಿ ಸಮಾವೇಶ: ವಿಷ್ಣುವರ್ಧನ ವಾಲದೊಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 24 : ನಾಳೆ(26/01/2025)ರವಿವಾರ ಸಾಯಂಕಾಲ 4.30 ಗಂಟೆಗೆ ನಗರದ ಡಾ.ಬಿ.ಆರ್ ಅಂಬೇಡ್ಕರ್ ವೃತ್ತದಲ್ಲಿ ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ 75ನೇ ಗಣರಾಜ್ಯೋತ್ಸವದ ನಿಮಿತ್ಯ ಭಾರತೀಯ ಸಂವಿಧಾನ ಜಾರಿಯಾದ ಸಂಭ್ರಮ ದಿನದಂದು ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಜನ ಜಾಗೃತಿ ಸಮಾವೇಶ ಹಾಗೂ ಬಹಿರಂಗ ಸಭೆ ಹಮ್ಮಿಕೊಳ್ಳಲಾಗಿಸೆ ಎಂದು ಸಮಾವೇಶದ ಆಯೋಜನಾ ಸಮಿತಿಯ ಅಧ್ಯಕ್ಷ ವಿಷ್ಣುವರ್ಧನ ವಾಲದೊಡ್ಡಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಟಿ ಉದ್ದೇಶಿಸಿ ಮಾತನಾಡಿರುವ ಅವರು, ಈ ಸಮಾವೇಶಕ್ಕೆ ವಿಶೇಷ ಭಾಷಣಕಾರರಾಗಿ ದೆಹಲಿ ಜವಹರಲಾಲ ನೆಹರು ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕರಾದ ಡಾ.ಲಕ್ಷ್ಮಣ ಯಾದವ ಆಗಮಿಸುತ್ತಿದ್ದು, ಮಹಿಳಾ ಸ್ವತಂತ್ರ ಕುರಿತು ಯಾದಗಿರಿ ಸರ್ಕಾರಿ ಮಹಾವಿದ್ಯಾಲಯದ ಪ್ರಾಧ್ಯಾಪಕಿ ಡಾ.ಜಯದೇವಿ ಗಾಯಕವಾಡ ಮಾತನಾಡುವರು. ಪೂಜ್ಯ ಭಂತೆ ವರಜ್ಯೋತಿ ಕಾರ್ಯಕ್ರಮ ಉದ್ಘಾಟಿಸುವರು.

ಈ ಅರ್ಥಪೂರ್ಣ ಕಾರ್ಯಕ್ರಮಕ್ಕೆ ಬುದ್ದ, ಬಸವ, ಅಂಬೇಡ್ಕರ್ ಅನುಯಾಯಿಗಳು, ದೇಶಭಕ್ತರು, ಸಂವಿಧಾನದ ಆಶೆಯ ಬಲ್ಲವರು, ಚಿಂತನಕಾರರು, ದಲಿತಪರ ಸಂಘಟನೆಗಳ ಮುಖಂಡರು, ಶೋಷಿತ, ಬಡವ ಹಾಗೂ ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕೆಂದು ವಾಲದೊಡ್ಡಿ ಮನವಿ ಮಾಡಿದರು.

ಸಲಹಾ ಸಮಿತಿ ಸದಸ್ಯರಾದ ಮಾರೂತಿ ಬೌದ್ದೆ ಮಾತನಾಡಿ, ವಿಶ್ವರತ್ನ ಡಾ? ಬಾಬಾ ಸಾಹೇಬ್ ಅಂಬೇಡ್ಕರ್ ರವರು ರಚಿಸಿದ. ಭಾರತೀಯ ಸಂವಿಧಾನವು 26 ಜನವರಿ 1950 ರಂದು ಜಾರಿಯಾಯಿತ್ತು. ಸಂವಿಧಾನವು ಆಧುನಿಕ ಭಾರತದಲ್ಲಿ ಸಮಾನತೆ, ಸಹೋದರತೆ, ಸ್ವಾತಂತ್ರ್ಯ ಮತ್ತು ನ್ಯಾಯ, ಮಾನವೀಯ ಮೌಲ್ಯಗಳನ್ನೊಳಗೊಂಡ ಕಾಯಕ ಜೀವಿಗಳು ಹಾಗೂ ದಲಿತರು ದಮನಿಯತರು, ಮಹಿಳೆಯರು, ಒಳಗೊಂಡಂತೆ ದೇಶದ ಎಲ್ಲಾ ಸಾಮಾಜಿಕ ಆರ್ಥಿಕ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ, ರಾಜಕೀಯ ಅಧಿಕಾರಗಳನ್ನು ಪಡೆಯುವುದಕ್ಕಾಗಿ ಎಲ್ಲಾ ಜಾತಿ ಬಡವರ ಏಳಿಗೆಗಾಗಿ ಸಂವಿಧಾನವು ವರಧಾನವಾಗಿದೆ. ಆದರೆ ಸ್ವಾತಂತ್ರ್ಯ ಭಾರತದಲ್ಲಿ ಕೆಲವು ವರ್ಷಗಳದಿಂದ ಯುವ ಪೀಳಿಗೆಯನ್ನು ದಿಕ್ಕುಗೆಡಿಸುವ ಪ್ರಯತ್ನ ಇಂದು ವ್ಯವಸ್ಥಿತವಾಗಿ ನಡೆಯುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು. ಇನ್ನೋರ್ವ ಸಲಹಾ ಸಮಿತಿ ಸದಸ್ಯರಾದ ಬಾಬು ಪಾಸ್ವಾನ ಮಾತನಾಡಿ, ನಮ್ಮ ಸಂವಿಧಾನ ಮೂಲ ಆಶಯಗಳು ದೇಶದ ಪ್ರಗತಿ, ಜನರು ಬದುಕುಳಿಯುವ ಪ್ರಶ್ನೆಯಾಗಿದೆ, ಸಮಾನತೆಯ ಹಕ್ಕು, ಸ್ವಾತಂತ್ರ್ಯದ ಹಕ್ಕು, ಶೋಷಣೆಯ ವಿರುದ್ಧ ಹಕ್ಕು, ಧಾರ್ಮಿಕ ಸ್ವಾತಂತ್ರ್ಯದ ಹಕ್ಕು, ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಹಕ್ಕು, ಸಂವಿಧಾನಾತ್ಮಕ ಪರಿಹಾರ ಹಕ್ಕು, ದೇಶದ ಸಂಪೂರ್ಣ ಪ್ರಗತಿಗಾಗಿ ಅಳವಡಿಸಿದ, ಈ ಹಕ್ಕುಗಳನ್ನು ಆಳುವ ಸರ್ಕಾರಗಳು 75 ವರ್ಷಗಳು ಆದರೂ ಕೂಡ ಇನ್ನೂ ಸಂಪೂರ್ಣವಾಗಿ ಜಾರಿ ಮಾಡಿಲ್ಲ,-ಮತ್ತು ಹಕ್ಕುಗಳನ್ನು ಮೊಟಕುಗೊಳಿಸುತ್ತಿದ್ದಾರೆ.ಹಾಗೂ ಸಂವಿಧಾನ ಬದಲಾವಣೆ ಮಾತುಗಳನ್ನು ಆಡುತ್ತಾ, ದೇಶ ಮತ್ತು ರಾಜ್ಯದಲ್ಲಿ ಕೋಮು ಗಲಭೆಯ ಭಾವನೆ ಬಿತ್ತುವ ಕೊಳಕು ಮನಸ್ಸುಗಳನ್ನು ನಾವು ಅರಿಯಬೇಕಾಗಿದೆ. ಅದಕ್ಕೆ ದಾವು ಜಾಗ್ರತರಾಗಿ, ನಮ್ಮ ಸಂವಿಧಾನ ಮತ್ತು ಪ್ರಜಾಪ್ರಭುತ್ವ ರಕ್ಷಣೆ ಮಾಡುವ ದೃಢ ಸಂಕಲ್ಪ ಮಾಡಬೇಕಾಗಿದೆ ಎಂದರು. ಸಮಿತಿಯ ಗೌರವಾಧ್ಯಕ್ಷರಾದ ಶಿವಕುಮಾರ ನೀಲಿಕಟ್ಟಿ ಹಾಗೂ ಪ್ರಧಾನ ಕಾರ್ಯದರ್ಶಿ ಅರುಣ ಪಟೇಲ ಮಾತನಾಡಿದರು. ಕಾರ್ಯಾಧ್ಯಕ್ಷ ಪ್ರೇಮಕುಮಾರ ಕಾಂಬಳೆ, ಸಲಹಾ ಸಮಿತಿ ಸದಸ್ಯರಾದ ಶ್ರೀಪತರಾವ ದೀನೆ, ಕಲ್ಯಾಣರಾವ ಭೋಸ್ಲೆ, ರಮೇಶ ಕಟ್ಟಿತುಗಾಂವ, ಅಂಬಾದಾಸ ಗಾಯಕವಾಡ ಹಾಗೂ ಇತರರಿದ್ದರು.

# ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳಿಗೆ ನವೋದಯ ವಿದ್ಯಾಲಯದಲ್ಲಿ ಕಾರ್ಯಾಗಾರ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರು ಸ್ಫೂರ್ತಿದಾಯಕ,ಪ್ರೇರಣಾತ್ಮಕ ವಾತಾವರಣ ನಿರ್ಮಿಸಿ ಶಿಕ್ಷಣದ ಗುಣಮಟ್ಟ ಮತ್ತು ಫಲಿತಾಂಶ ಹೆಚ್ಚಿಸುವ ನಿಟ್ಟಿನಲ್ಲಿ ಶಿಕ್ಷಣ ಇಲಾಖೆಯಿಂದ ಇಂದು ಪಟ್ಟಣದ ನವೋದಯ ಶಾಲೆಯಲ್ಲಿ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳಿಗೆ ವಿಶೇಷ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು.



ಯೂನಿವರ್ಸಲ್ ನಾಲೆಜ್ ಟ್ರಸ್ಟ್ ಮತ್ತು ಗ್ರಾಮ ವಿಕಾಸ ಸೊಸೈಟಿ ಹಾಗೂ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಎಸ್ ಎಸ್ ಎಲ್ ಸಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಸಾಕಾರಾತ್ಮಕ ಮನೋಭಾವದೊಂದಿಗೆ ಸುಲಭ ಕಲಿಕೆ ಎಂಬ ಹೆಸರಲ್ಲಿ ವಿಶೇಷ ಕಾರ್ಯಾಗಾರವನ್ನು ಪರಿಣಿತ ಶಿಕ್ಷಕ ವೃಂದ ನಡೆಸಿಕೊಟ್ಟಿತು. ಕಳೆದ ಶೈಕ್ಷಣಿಕ ವರ್ಷದಲ್ಲಿ ಎಸ್ ಎಸ್ ಎಲ್ ಸಿ ಫಲಿತಾಂಶ ಗಣನೀಯ ಪ್ರಮಾಣದಲ್ಲಿ ಇಳಿಕೆ ಕಂಡ ಹಿನ್ನೆಲೆ ತಾಲೂಕಿನಲ್ಲಿ ಫಲಿತಾಂಶ ಮತ್ತು ಶಿಕ್ಷಣದ ಗುಣಮಟ್ಟ ಹೆಚ್ಚಿಸುವ ನಿಟ್ಟಿನಲ್ಲಿ ಶಿಕ್ಷಣ ಇಲಾಖೆ ಮುಂದಾಗಿದ್ದು ಅದರಲ್ಲೂ ವಿಶೇಷವಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾಗಿರುವ ಸೋಮಶೇಖರ್ ಪಾಟೀಲ್ ಅವರು ಹೆಚ್ಚಿನ ಮುತುವರ್ಜಿ ವಹಿಸಿದ್ದು ಅದರಂತೆ ತಾಲೂಕಿನ 22 ಶಾಲೆಯ ಎಸ್ ಎಸ್ ಎಲ್ ಸಿ ಓದುತ್ತಿರುವ ವಿದ್ಯಾರ್ಥಿಗಳಿಗೆ ವಿಶೇಷ ಕಾರ್ಯಾಗಾರ ನಡೆಸಲಾಯಿತು.

ಕಾರ್ಯಾಗಾರದಲ್ಲಿ 969 ವಿದ್ಯಾರ್ಥಿಗಳು 75 ಶಿಕ್ಷಕ ವೃಂದ ಭಾಗವಹಿಸದ್ದರು. ಕಾರ್ಯಾಗಾರವನ್ನು ಉದ್ಘಾಟನೆ ಮಾಡಿ ನವೋದಯ ವಿದ್ಯಾಲಯದ ಪ್ರಚಾರ್ಯೆ ಜಯಾ ಅವರು ಮಾತನಾಡಿ, ರಾಜ್ಯ ಪಠ್ಯಕ್ರಮದ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಗುಣಮಟ್ಟ ಎತ್ತರಿಸುವ ಅವಶ್ಯಕತೆ ಕಂಡು ಬಂದ ಹಿನ್ನೆಲೆ ಶಿಕ್ಷಣ ಇಲಾಖೆ ವಿಶೇಷ ಆಸಕ್ತಿ ವಹಿಸಿ ಕಾರ್ಯಾಗಾರ ಮಾಡುತ್ತಿದ್ದು ವಿದ್ಯಾರ್ಥಿಗಳು ಪ್ರಯೋಜನ ಪಡೆದುಕೊಂಡು ಉತ್ತಮ ಫಲಿತಾಂಶದೊಂದಿಗೆ ಉಜ್ವಲ ಭವಿಷ್ಯ ರೂಪಿಸಿಕೊಳ್ಳುವ ಅಗತ್ಯವಿದೆ ಎಂದು ಹೇಳಿದರು.

ಗ್ರಾಮ ವಿಕಾಸ ಸೊಸೈಟಿಯ ಕಾರ್ಯದರ್ಶಿ ತರಬೇತುದಾರ ಸುಬ್ರಮಣ್ಯ,ಸಂಯೋಜಮಾಧವ ಬಂಡಾರಿ ಅವರಿಂದ ಸಾಕಾರಾತ್ಮಕ ಮನೋಭಾವದ ಸುಲಭ ಕಲಿಕೆಯ ಪಠ್ಯಕ್ರಮದ ವಿವಿಧ ಪ್ರಕಾರಗಳ ಅಭ್ಯಾಸಗಳನ್ನು ವಿದ್ಯಾರ್ಥಿಗಳಿಗೆ ಹೇಳಿಕೊಡಲಾಯಿತು.

ಈ ಸಂದರ್ಭದಲ್ಲಿ ಶಿಕ್ಷಕ ವೃಂದದ ವಿ ಎಸ್ ಬೇಣಕಲ್, ಸೋಮಶೇಖರ್ ಹರ್ತಿ, ಸುರೇಶ್ ಅಬ್ಬಿಗೇರಿ, ಮುತ್ತಣ್ಣ ಎಚ್, ಮಂಜುನಾಥ್ ಹಳ್ಳಿ, ಬಿ ಆರ್ ಪಿ ಬಸವರಾಜ್ ಅಂಗಡಿ, ಸಿ ಆರ್ ಪಿ ಗಳಾದ ಪೀರ್ ಸಾಬ್ ದಫೆದಾರ್, ಮಂಜುನಾಥಯ್ಯ ತೆಗ್ಗಿನಮಠ. ಇತರರು ಉಪಸ್ಥಿತರಿದ್ದರು.

# ರೈತರ ಮತ್ತು ವ್ಯಾಪಾರಸ್ಥರ ಉತ್ತೇಜನಕ್ಕೆ ಪ್ರಯತ್ನಿಸುತ್ತೇನೆ : ಜಗನಾಥರೆಡ್ಡಿ ಎಖೇಳ್ಳಿ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ತಾಲೂಕಿನ ನಿರ್ಣಾ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾಗಿ ಜಗನಾಥರೆಡ್ಡಿ ರಾಜರೆಡ್ಡಿ ಎಖೇಳ್ಳಿ, ಉಪಾಧ್ಯಕ್ಷರಾಗಿ ಮಲ್ಲಪ್ಪ ರೇವಣಪ್ಪ ಕೋರಿ ಅವಿರೋಧವಾಗಿ ಆಯ್ಕೆಯಾದರು. ಶುಕ್ರವಾರ ಪಿಕೆಪಿಎಸ್ ಕಾರ್ಯಾಲಯದಲ್ಲಿ ಜರುಗಿದ, ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಸ್ಥಾನಕ್ಕೆ ಬಬ್ಬರೆ ನಾಮಪತ್ರ ಸಲ್ಲಿಸಿದರಿಂದ ಅವಿರೋಧವಾಗಿ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಬಸವರಾಜಯ್ಯ ಸಾಲಿಮಠ ತಿಳಿಸಿದರು. ನಂತರ ಮುಖ್ಯ ಕಾರ್ಯನಿರ್ವಾಹಕ ನಾಗಪ್ಪ ಅಂಬಾಡಿ ನೂತನ ಅಧ್ಯಕ್ಷ ಉಪಾಧ್ಯಕ್ಷ ಹಾಗೂ ಸರ್ವ ಸದಸ್ಯರನ್ನು ಶಾಲು ಹೊದಿಸಿ ಸನ್ಮಾನಿಸಿದರು. ನೂತನ ಅಧ್ಯಕ್ಷ ಜಗನಾಥರೆಡ್ಡಿ ಎಖೇಳ್ಳಿ ಮಾತನಾಡಿ, ಡಿಸಿಸಿ ಬ್ಯಾಂಕ ನಿರ್ದೇಶಕರಾಗಿ ಮತ್ತು 2007 ರಿಂದ ಪಿಕೆಪಿಎಸ್



ನಿರ್ದೇಶಕನಾಗಿ, ಅಧ್ಯಕ್ಷನಾಗಿ ಸೇವೆ ಮಾಡಲು ನನಗೆ ಅವಕಾಶ ಕಲ್ಪಿಸಿಕೊಟ್ಟ ರೈತರಿಗೆ ಧನ್ಯವಾದಗಳು ಸಲ್ಲಿಸುತ್ತನೆ. ರೈತರ ಏಳಿಗೆಗಾಗಿ ಹಗಲಿರಳು ಶ್ರಮಿಸಿ, ರೈತರ ಮತ್ತು ವ್ಯಾಪಾರಸ್ಥರ ಉತ್ತೇಜನಕ್ಕಾಗಿ ಏನು ಮಾಡಬೇಕು ಎಂಬುದನ್ನು ಯೋಜನೆ ಹಾಕಿಕೊಂಡು ಕಾರ್ಯರೂಪಕ್ಕೆ ತರುವ ಪ್ರಯತ್ನ ಮಾಡುತ್ತೇನೆ, ರೈತರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳು ರೈತರ ಮನೆ ಬಾಗಿಲಿಗೆ ಮುಟ್ಟಿಸುವಂತಹ ಕಾರ್ಯ ಮಾಡುತ್ತೇನೆ ಎಂದು ಆಶ್ವಾಸನೆ ನೀಡಿದರು. ಸಹಕಾರ ಕ್ಷೇತ್ರದಲ್ಲಿ ಸೇವಾ ಮನೋಭಾವನೆ ಇರಬೇಕು ರಾಜಕೀಯ ಹೊರತಾಗಿ ಸಹಕಾರ ಕ್ಷೇತ್ರ ಬೆಳೆಯಬೇಕು ಸಹಕಾರ ಸಂಘ ಕೇವಲ ಬಡ್ಡಿ ಆದಾಯದಿಂದ ಬೆಳೆಯಲು ಸಾಧ್ಯವಿಲ್ಲ ಬೆಳವಣಿಗೆಗೆ ವಿಭಿನ್ನ ಆದಾಯ ಮೂಲ ಅಗತ್ಯವಾಗಿದೆ ಎಂದರು. ರೈತರಿಗೆ ನೀಡುವ ಕಡಿಮೆ ಬಡ್ಡಿದರದ ಸಾಲಕ್ಕೆ ನಬಾರ್ಡ್

> “ನಿರ್ಣಾ ಸಹಕಾರಿ ಸಂಘ ಮಾದರಿ ಸಂಘ ಮಾಡಲು ಆಡಳಿತ ಮಂಡಳಿಯ ಸಹಕಾರದೊಂದಿಗೆ ಹಗಲಿರಳು ಶ್ರಮಿಸುತ್ತೇನೆ, ನನಗೆ ಅಧ್ಯಕ್ಷನಾಗಿ ಆಯ್ಕೆ ಮಾಡಿದ ಸರ್ವ ನಿರ್ದೇಶಕರಿಗೆ ಹಾಗೂ ಗ್ರಾಮದ ಹಿರಿಯರಿಗೆ ಮತ್ತು ವಿಶೇಷವಾಗಿ ರೈತರಿಗೆ ಧನ್ಯವಾದಗಳು ಸಲ್ಲಿಸುತ್ತೇನೆ.
>
> –ನೂತನ ಅಧ್ಯಕ್ಷ ಜಗನಾಥ ರೆಡ್ಡಿ ಎಖೇಳ್ಳಿ



ಇದರಿಂದ ರೈತರಿಗೆ ಅಗತ್ಯ ಇರುವಷ್ಟು ಸಾಲ ನೀಡಲು ಸಾಧ್ಯವಾಗುತ್ತಿಲ್ಲ ಸರ್ಕಾರ ಇನ್ನು ಹೆಚ್ಚಿನ ಅನುದಾನ ನೀಡಿ ರೈತರಿಗೆ ಹೆಚ್ಚಿನ ಸಾಲ ಸೌಲಭ್ಯ ನೀಡಬೇಕು ಎಂದು ಒತ್ತಾಯಿಸಿದರು. ನಿರ್ದೇಶಕರಾದ ತುಕರಾಮ ಸಾಯಪ್ಪ, ವಿಜಯಕುಮಾರ್ ಭೀಮಶಾ, ಕೃಷ್ಣರೆಡ್ಡಿ ಸಂಗಾರೆಡ್ಡಿ, ಚಂದ್ರಶೇಖರ್ ಹಾವಶೆಟ್ಟಿ, ತಿಪ್ಪಣ್ಣ ಮರೇಪ್ಪ, ಎಂ.ಡಿ. ರಸೂಲ ಅಹ್ಮದ್ ಖಾಜಾಸಾಬ್ ಲಶ್ಕೇರಿ, ಚಂದ್ರಶೇಖರ್ ಶಂಕರರಾವ, ರಂಗಮ್ಮಾ , ಲಕ್ಷ್ಮಿಬಾಯಿ ಸಂಜೂಕುಮಾರ್, ಹಣಮಂತರೆಡ್ಡಿ ರಾಮರೆಡ್ಡಿ, ಸಿಬ್ಬಂದಿಗಳಾದ ಲಕ್ಷ್ಮಿ ಮಠಪತಿ, ಚಂದ್ರಕಲಾ ಮಲ್ಲಪನೋರ್, ಸುಧಾಕರ್ ಹಲಗೆ, ಶಾಮರಾವ ವಿಜಾಪುರ, ಶ್ರೀಕಾಂತ ರೆಡ್ಡಿ ಗುಡ್ಡಾಡಿ, ಜಗನ್ನಾಥ ರಾಯಗೊಂಡ ಪ್ರಮುಖರಾದ ಸಂಜೀವರೆಡ್ಡಿ, ಯಾಮಾರೆಡ್ಡಿ, ಅಶೋಕ ರೆಡ್ಡಿ ಲಚನಗಾರ, ಪೆಂಟಾರೆಡ್ಡಿ ಎಖೇಳ್ಳಿ, ತಿಪ್ಪಣ್ಣ ಮಾಲೆ, ಸೂರ್ಯಕಾಂತ ಕಾಗೆ, ಅಶೋಕ ಕಾಗೆ, ಅನಿಲ ರೆಡ್ಡಿ ಲಚನಗಾರ, ಬಲವಂತ ರೆಡ್ಡಿ ಬನ್ನಳ್ಳಿ, ಗುಂಡಪ್ಪ ಮದರಗಿ, ಮೈನು ಮಚ್ಕುರಿ, ಅಬ್ದುಲ್ ಗನಿ ಲಶ್ಕೇರಿ, ಮುಸ್ತಫಾ, ಸಾಗರ ನಿರ್ಣಾ ವಾಡಿ, ತಾಜೋದ್ದಿನ ಲಶ್ಕೇರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಮದನೂರು:ಪಿಕೆಪಿಎಸ್ ಅಧ್ಯಕ್ಷರಾಗಿ ದಿಗಂಬರ ಬಿರಾದಾರ ಉಪಾಧ್ಯಕ್ಷರಾಗಿ ಅಶೋಕ ಚೌರೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ತಾಲೂಕಿನ ಮದನೂರು ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಡಿಗಂಬರ ಬಿರಾದಾರ ಹಾಗೂ ಉಪಾಧ್ಯಕ್ಷರಾಗಿ ಅಶೋಕ ಚೌರೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಉಮಾಕಾಂತ ನಾಗಮಾರಪಳ್ಳಿ ಅವರ ನೇತೃತ್ವದಲ್ಲಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.ಮತ್ತು ಆಯ್ಕೆಯಾದ ಪದಾಧಿಕಾರಿಗಳಿಗೆ ಸನ್ಮಾನಿಸಿ ಅಭಿನಂದಿಸಲಾಯಿತು ಎಂದು ಮುಖಂಡ ಸಂಗಮೇಶ ಧರಣೆ ಪ್ರಕಟಣೆಗೆ ತಿಳಿಸಿದರು.

# ಸುಭಾಷ್ ಚಂದ್ರ ಬೋಸ್ ಅವರ 128ನೇ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:

ತಾಲೂಕಿನ ಡಿಗ್ಗಿ ಸರಕಾರಿ ಶಾಲೆಯಲ್ಲಿ,

ಶಾಲೆ ಹಾಗೂ ಸುಭಾಷ ಚಂದ್ರ ಬೋಸ ಅಭಿವೃದ್ಧಿ ಸಂಘದ ಸಂಯುಕ್ತ ಆಶ್ರಯದಲ್ಲಿ ಸುಭಾಷ್ ಚಂದ್ರ ಬೋಸ್ ಅವರ 128ನೇ ಜಯಂತಿ ಕಾರ್ಯಕ್ರಮ ಗುರುವಾರ ಆಚರಣೆ ಮಾಡಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಪಿ.ಎಸ್.ಐ ಚಂದ್ರಶೇಖರ ನಿರ್ಣೆ ಸುಭಾಸ ಚಂದ್ರ ಬೋಸ ಅವರ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು,

ದೇಶ ಸ್ವತಂತ್ರ ಹೋರಾಟ ಮಾಡುವಾಗ ಆಜಾದ ಹಿಂದೆ ಸೈನ್ಯವನ್ನು ಕಟ್ಟಿ ಬ್ರಿಟಿಷರ ವಿರುದ್ಧ ಬೋಸ ಅವರು ಸಮರ ಸಾರಿದರು.

"ನೀವು ನಿಮ್ಮ ರಕ್ತ ಕೊಡಿ ನಾನು ನಿಮಗೆ ಸ್ವಾತಂತ್ರ್ಯ ತಂದು ಕೊಡುತ್ತೇನೆ" ಎಂದು ಘೋಷಣೆ ವಾಕ್ಯ ನೀಡಿ ಬ್ರಿಟಿಷರನ್ನು ಭಯ ಮೂಡಿಸಿದರು ಎಂದು ಹೇಳಿದರು.

ಸುಭಾಷ್ ಚಂದ್ರ ಬೋಸ ಅಭಿವೃದ್ಧಿ ಸಂಘ ಡಿಗ್ಗಿಯ ಅಧ್ಯಕ್ಷ ಸಂಗಮನಾಥ ಬಿರಾದಾರ ಮಾತನಾಡಿ, ಸುಭಾಷ್ ಚಂದ್ರ ಬೋಸ್ ಜನ್ಮದಿನವನ್ನ ಪರಾಕ್ರಮ ದಿವಸ್ ಎಂದು ಆಚರಿಸಲಾಗುತ್ತದೆ. ಅವರು ನಮ್ಮೆಲ್ಲರಿಗೆ ಆದರ್ಶ ವ್ಯಕ್ತಿಯಾಗಿದ್ದಾರೆ.

"ಸ್ವಾತಂತ್ರ್ಯವೆಂಬುದು ಯಾರೂ ಕೊಡುವಂಥ ಸರಕಲ್ಲ ಅದು ನಾವು ಪಡೆದುಕೊಳ್ಳಬೇಕಾದದ್ದು" ಎಂದು ಹೇಳಿ ಎಲ್ಲರನ್ನು ಎಚ್ಚರಿಸುವ ಕೆಲಸ ಮಾಡಿದ್ದಾರೆ ಎಂದು ಹೇಳಿದರು.

ಮುಂದಿನ ಪೀಳಿಗೆಗೆ ನೇತಾಜಿ ಅವರ ಮಹತ್ವ ಅರ್ಥ ಮಾಡಿಸುವುದು ಅವಶಕವಾಗಿದೆ, ಹಾಗಾಗಿ ಸರಕಾರಿ ಕಚೇರಿಯಲ್ಲಿ ಕಡ್ಡಾಯವಾಗಿ ಬೋಸ ಅವರ ಜನ್ಮದಿನ ಆಚರಣೆ ಮಾಡಬೇಕೆಂದು ಸರಕಾರಕ್ಕೆ ಮನವಿ ಮಾಡಿದರು.

ಇದಕ್ಕೂ ಮುಂಚೆ ಗ್ರಾಮದ ಮುಖ್ಯ ರಸ್ತೆ ಪಕ್ಕ ಸಂಘದ ಫಲಕ್ಕೆ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಂಘದ ಸದಸ್ಯರು ಸೇರಿದರು. ಪಿಎಸ್ಐ ಮಾತನಾಡಿ, ಸಂಘದ ಒಳ್ಳೆಯ ಕೆಲಸಕ್ಕೆ ಹೆಮ್ಮೆ ಪಟ್ಟರು ಹಾಗೂ ಯುವಕರು ರಸ್ತೆ ನಿಯಮಗಳು ತಪ್ಪದೇ ಪಾಲನೆ ಮಾಡಲು ತಿಳಿಸಿದರು.

ಈ ಸಂದರ್ಭದಲ್ಲಿ ಶಾಲೆ ಎಸ್.ಡಿ.ಎಮ.ಸಿ.ಅಧ್ಯಕ್ಷ ಸಂತೋಷ ಬನವಾಸೆ ಅಧ್ಯಕ್ಷ ಭಾಷಣ ಮಾಡಿದರು. ಸಂಪನ್ಮೂಲ ವ್ಯಕ್ತಿ ಮಡಿವಾಳಪ್ಪ ಮುರ್ಕೆ, ಪಿ.ಡಿ.ಓ. ಪ್ರಶಾಂತ ಸುತರ, ಮುಖ್ಯ ಗುರು ಸಂತೋಷ ಬಿರಾದಾರ, ಸಿಬ್ಬಂದಿಗಳಾದ ಸತೀಶ ಕುಲಾಲ, ವಿಜಯಲಕ್ಷ್ಮಿ ಪಾಟೀಲ, ಸುಮಂಗಲಾ ಮಾನೆ, ನಿಲಾಂಬಿಕಾ ಚಾಂಡೇಶ್ವರೆ, ಸಪ್ನಾ ನಿಟ್ಟೂರೆ ಸೇರಿದಂತೆ ಅನೇಕರು ಇದ್ದರು.

# ಗ್ರಾಮಸ್ಥರ ಸಹಕಾರವಿದ್ದಾಗ ಮಾತ್ರ ಅಭಿವೃದ್ಧಿ ಸಾಧ್ಯ : ಬಸವರಾಜ ರಾಯರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ತಾಲೂಕಿನ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿ ಹಾಗೂ ಭೂಮಿ ಪೂಜೆ ಕಾರ್ಯಕ್ರಮ ನೆರವೇರಿಸಲಾಯಿತು.




ಕುಕನೂರು ತಾಲೂಕಿನ ಯಡೆಯಾಪುರ ಬೂದುಗುಂಪ ರಸ್ತೆಯಲ್ಲಿ ಬರುವ ಹಳ್ಳಕ್ಕೆ ಬ್ರಿಜ್ ಕಮ್ ಬ್ಯಾರೇಜ್ ಭೂಮಿ ಪೂಜೆ ನೆರವೇರಿಸಿ ವೇದಿಕೆಯನ್ನು ಉದ್ದೇಶಿಸಿ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ ಮಾತನಾಡುತ್ತ ಕೇವಲ ಒಂದು ವರ್ಷದಲ್ಲಿ ಕ್ಷೇತ್ರದಲ್ಲಿ ನೂತನ 14 ಪ್ರೌಢಶಾಲೆ ಆರು ಪದವಿಪೂರ್ವ ಕಾಲೇಜು ಹಾಗು ನಾಲ್ಕು ವಸತಿ ಶಾಲೆಗಳನ್ನು ಮಂಜೂರು ಮಾಡಿಸಿದ್ದು ಮುಂದಿನ ಅವಧಿಯೊಳಗೆ ಕ್ಷೇತ್ರದ ಎಲ್ಲಾ ರೀತಿಯ ಅಭಿವೃದ್ಧಿಗೆ ಬದ್ಧನಾಗಿದ್ದು ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗಾಗಿ ಸದಾಕಾಲ ಸಿದ್ಧನಿದ್ದೇನೆ ಎಂದರು.

ಸರ್ಕಾರದಿಂದ ಹಲವಾರು ಯೋಜನೆಗಳನ್ನು ಮಂಜೂರು ಪಡಿಸುತ್ತಿದ್ದು ಪ್ರತಿ ಗ್ರಾಮದಲ್ಲೂ ಗ್ರಾಮಸ್ಥರ ಸಹಕಾರವಿದ್ದಾಗ ಮಾತ್ರ ಅಭಿವೃದ್ಧಿ ಸಾಧ್ಯ. ಗ್ರಾಮಗಳಲ್ಲಿ ಬೃಹತ್ ಕೆರೆ ನಿರ್ಮಾಣಕ್ಕಾಗಿ ಭೂಮಿ ಅವಶ್ಯಕತೆ ಇದ್ದು ಸರ್ಕಾರಿ ಬೆಲೆಗೆ ಭೂಮಿಯನ್ನು ನೀಡುವ ಬೂದಾನಿಗಳು ಮುಂದೆ ಬಂದಲ್ಲಿ ಪ್ರತಿ ಗ್ರಾಮಕ್ಕೂ ಉತ್ತಮವಾದ ಬೃಹತ್ ಕೆರೆ ನಿರ್ಮಾಣ ಮಾಡುವುದಾಗಿ ತಿಳಿಸಿದರು ಹಾಗೂ ಅಭಿವೃದ್ಧಿಗೆ ರಸ್ತೆಗಳು ಪೂರಕವಾಗಿದ್ದು ಎಲ್ಲಾ ರಸ್ತೆಗಳನ್ನು ಹಂತ ಹಂತವಾಗಿ ಸುಧಾರಣೆಗೊಳಿಸಲು ಹಗಲಿರುಳು ಶ್ರಮಿಸುತ್ತೇನೆ ಎಂದು ಹೇಳಿದರು.

ಕುಕನೂರು ನೂತನ ತಾಲೂಕು ಕಾರ್ಯರಂಭಗೊಂಡು ಸುಮಾರು ವರ್ಷಗಳು ಕಳೆದರೂ ಸಹ ಸೂಕ್ತ ಕಾರ್ಯಾಲಯ ಕಟ್ಟಡವಿಲ್ಲದಿರುವುದು ಅಭಿವೃದ್ಧಿಗೆ ಕುಂಠಿತವಾಗಿರುತ್ತದೆ ಶೀಘ್ರದಲ್ಲಿ ತಾಲೂಕ ಆಡಳಿತ ಭವನ ನಿರ್ಮಾಣಕ್ಕೆ ಕಾರ್ಯ ಆರಂಭ ಮಾಡಲಾಗುವುದು ಎಂದು ಹೇಳಿದರು. ಈ ವೇಳೆಯಲ್ಲಿ ಕುಕುನೂರು ತಹಸಿಲ್ದಾರ ಎಚ್,ಪ್ರಾಣೇಶ್ ಹನುಮಂತ ಗೌಡ ಚಂಡೂರ, ವೆಂಕಣ್ಣ ಯರಾಸಿ, ರೈಮನ್ ಸಾಬ್ ಮಕಪ್ಪನವರ್, ಸಂಗಮೇಶ್ ಗುತ್ತಿ, ರಾಘವೇಂದ್ರ ಕಾತ್ರಿಕಿ, ಮುತ್ತಣ್ಣ ರಾಜೂರ, ಸೇರಿದಂತೆ ಪ್ರಮುಖರು ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

# ಎಂ.ಬಿ.ಪಾಟೀಲ್ ದಾವೋಸ್ ಗೆ ಹೋಗಬೇಕು – ನಿರಾಣಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ರಾಜ್ಯದಲ್ಲಿ ಪ್ರತಿವರ್ಷ 1 ಲಕ್ಷ 20 ಸಾವಿರಕ್ಕೂ ಅಧಿಕ ಇಂಜಿನಿಯರ್, ಸಿಎ ಸೇರಿದಂತೆ ವಿವಿಧ ಉನ್ನತ ತಾಂತ್ರಿಕ ಪದವೀಧರರು ಹೊರ ಬರುತ್ತಿದ್ದು ಅವರಿಗೆಲ್ಲ ಉದ್ಯೋಗಾವಕಾಶಗಳ ಅಗತ್ಯವಿದೆ. ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅವರು ದಾವೋಸ್ ಗೆ ತೆರಳಿ ಕರ್ನಾಟಕಕ್ಕೆ ಉದ್ಯಮಿಗಳನ್ನು ಆಕರ್ಷಿಸಬೇಕೆಂದು ಮಾಜಿ ಕೈಗಾರಿಕೆ ಸಚಿವ ಡಾ.ಮುರುಗೇಶ್ ಆರ್.ನಿರಾಣಿ ಸಲಹೆ ನೀಡಿದರು.

ಇಂದಿಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಎಂ.ಬಿ.ಪಾಟೀಲ್ ಜೊತೆ ನನಗೆ ವೈಯಕ್ತಿಕ ದ್ವೇಷ ಇಲ್ಲ. 10 ವರ್ಷ ಕೈಗಾರಿಕೆ ಸಚಿವನಾಗಿದ್ದರಿಂದ ನಾನು ಹಲವಾರು ಬಾರಿ ದಾವೋಸ್ ನಲ್ಲಿ ನಡೆಯುವ ಕೈಗಾರಿಕೆ ಮೇಳದಲ್ಲಿ ಭಾಗವಹಿಸಿದ್ದೇನೆ. ಅಲ್ಲಿ ಜಗತ್ತಿನ ಎಲ್ಲ ಉದ್ಯಮಿಗಳು, ಕಂಪನಿಗಳು ಬರುತ್ತವೆ. ಈ ಸಂದರ್ಭದಲ್ಲಿ ಕರ್ನಾಟಕದ ಪರವಾಗಿ ಎಂ.ಬಿ.ಪಾಟೀಲರು, ಅಧಿಕಾರಿಗಳು ತೆರಳಿ ಕರ್ನಾಟಕದಲ್ಲಿ ಉದ್ಯಮ ಸ್ಥಾಪಿಸಲು ಆಹ್ವಾನಿಸಬೇಕು. ಮುಖ್ಯಮಂತ್ರಿಗಳು ತಮ್ಮ ಅಧೀನ ಅಧಿಕಾರಿಗಳನ್ನು ಇಂತಹ ಮೇಳಗಳಿಗೆ ಕಳುಹಿಸಿಕೊಡಬೇಕೆಂದರು. ಎಂ.ಬಿ.ಪಾಟೀಲ್ ಮತ್ತು ನಾನು ಒಂದೇ ಜಿಲ್ಲೆಯವರು. ವೈಯಕ್ತಿಕವಾಗಿ ಇಬ್ಬರ ನಡುವೆ ಯಾವುದೇ ದ್ವೇಷ, ಅಸೂಯೆ ಇಲ್ಲ. ಇಬ್ಬರೂ ಇಂಜಿನಿಯರ್ ಪದವೀಧರರು. ಅಭಿವೃದ್ಧಿ ವಿಷಯ ಬಂದಾಗ ನಾವು ನಮ್ಮ ಪಕ್ಷ ರಾಜಕಾರಣ ಬಿಟ್ಟು ಕೈ ಜೋಡಿಸಬೇಕಾಗುತ್ತದೆ. ಬೆಂಗಳೂರಿನಲ್ಲಿ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದ ವೇಳೆ ಕಾರ್ಟೂನ್ ಚಿತ್ರಕ್ಕೆ ಹಣ ದುರುಪಯೋಗಿಸಲಾಗಿದೆ. ಹೀಗಾಗಿ ನನ್ನನ್ನು ಜೈಲಿಗೆ ಕಳುಹಿಸುತ್ತೇನೆ ಎಂದು ಎಂ.ಬಿ.ಪಾಟೀಲರು ಹೇಳಿದ್ದರು. ಇದಕ್ಕೆ ನಾನು ಸ್ಪಷ್ಟನೆ ನೀಡಬೇಕಾದಾಗ, ನಾನು ಮಾಡಿರುವ ತಪ್ಪಾದರೂ ಏನು ಎಂದು ಕೇಳಿದ್ದೆ. ಒಂದು ವೇಳೆ ಹಣ ದುರುಪಯೋಗವಾಗಿದ್ದರೆ ಅದರ ಬಗ್ಗೆ ಮಾಹಿತಿ ನೀಡಿ ಕಾನೂನು ಕ್ರಮ ಜರುಗಿಸಿ ಎಂದು ಮನವಿ ಮಾಡಿಕೊಂಡಿದ್ದೆ. ಅದನ್ನು ಹೊರತುಪಡಿಸಿದರೆ ವೈಯಕ್ತಿಕವಾಗಿ ನನಗೆ ಅವರ ಬಗ್ಗೆ ಗೌರವ ಇದೆ. ಈ ಬಗ್ಗೆ ಹರಿದಾಡುತ್ತಿರುವ ಸುದ್ದಿ ವದಂತಿ ಎಂದು ಸ್ಪಷ್ಟಪಡಿಸಿದರು. ತುಮಕೂರು ಜಿಲ್ಲೆಯ ಸಿರಾ ಬಳಿ ಸರ್ಕಾರದ 3200 ಎಕರೆ ಸ್ಥಳವಿದ್ದು ಇಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಅಗತ್ಯವಿದೆ. ರಾಜ್ಯದ 3ನೇ ದೊಡ್ಡ ವಿಮಾನ ನಿಲ್ದಾಣ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಮುಂದಾಗಬೇಕು. ಪ್ರತಿ 100 ಕಿ.ಮೀ.ಗೊಂದು ವಿಮಾನ ನಿಲ್ದಾಣ ಆಗಬೇಕೆಂಬ ಉದ್ದೇಶವಿದೆ. ರಾಯಚೂರು, ದಾವಣಗೆರೆ, ಚಿಕ್ಕಮಗಳೂರು, ಬಾಗಲಕೋಟೆ ಮತ್ತು ಬಾದಾಮಿಯಲ್ಲಿ ವಿಮಾನ ನಿಲ್ದಾಣಗಳ ಅಗತ್ಯತೆ ಇದೆ. ಎಂ.ಬಿ.ಪಾಟೀಲರು ಗ್ಲೋಬಲ್ ಸಮ್ಮಿಟ್ ಗೆ ತೆರಳಿ ಕರ್ನಾಟಕವನ್ನು ಕೈಗಾರಿಕೆಯಲ್ಲಿ ಮುಂಚೂಣಿಗೆ ತರಬೇಕೆಂದರು.

# ಬಿಜೆಪಿಯಲ್ಲಿ ಅಸಮಾಧಾನ ಇರೋದು ಸತ್ಯ – ಡಾ.ಮುರುಗೇಶ್ ಆರ್.ನಿರಾಣಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಭಾರತೀಯ ಜನತಾ ಪಾರ್ಟಿಯಲ್ಲಿ ಅಸಮಾಧಾನದ ಹೊಗೆ ಆಡುತ್ತಿರುವುದು ಸತ್ಯ. ಬೆಂಕಿ ಇಲ್ಲದೇ ಹೊಗೆ ಆಡುವುದಿಲ್ಲ. ಸಣ್ಣ ಪುಟ್ಟ ಸಮಸೆಯಗಳು ಇದೆ. ಎಲ್ಲವನ್ನೂ ಒಂದು ಚೌಕಟ್ಟಿನ ಒಳಗೆ ಸರಿಪಡಿಸಲು ನಮ್ಮ ರಾಷ್ಟ್ರೀಯ ನಾಯಕರಿಂದ ಸಾಧ್ಯವಿದೆ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷರು, ಮಾಜಿ ಸಚಿವರಾದ ಡಾ.ಮುರುಗೇಶ್ ಆರ್.ನಿರಾಣಿ ತಿಳಿಸಿದ್ದಾರೆ.

ಇಲ್ಲಿನ ಖಾಸಗಿ ಹೋಟೆಲ್‌ವೊಂದರಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯಲ್ಲಿ ಮೂರ್ನಾಲ್ಕು ಬಣಗಳಿವೆ. ನಮ್ಮಿಂದ ಕೈ ತಪ್ಪಿ ಯಾವುದೂ ಹೋಗಿಲ್ಲ. ರಾಮುಲು ಅವರು ಮಾತನಾಡಿರುವುದನ್ನು ಟಿವಿಯಲ್ಲಿ ನೋಡಿದ್ದೇನೆ. ರಾಷ್ಟ್ರೀಯ ಅಧ್ಯಕ್ಷರು ದೆಹಲಿಗೆ ಕರೆಯಿಸಿ ಸಭೆ ನಡೆಸಲಿದ್ದಾರೆ. ರಾಮುಲು ವಾಲ್ಮೀಕಿ ಸಮಾಜದ ನಾಯಕರು. 30 ವರ್ಷದಿಂದ ನಾವೆಲ್ಲ ಒಟ್ಟಿಗೆ ಇದ್ದೇವೆ. ಅವರಿಂದ ಏನೂ ಸಮಸ್ಯೆ ಇಲ್ಲ. ಎಲ್ಲರೂ ಒಂದಾಗಿ, ಒಗ್ಗಟ್ಟಾಗಿ ಕಾಂಗ್ರೆಸ್ ನ ಭ್ರಷ್ಟಾಚಾರ, ಅಭಿವೃದ್ಧಿ ಶೂನ್ಯ ಆಡಳಿತದ ಕುರಿತು ನಾವೆಲ್ಲ ಹೋರಾಟ ಮಾಡಲು ಅಣಿಯಾಗುತ್ತೇವೆ. ರಾಮುಲು ಮತ್ತು ರೆಡ್ಡಿ ಅಣ್ತಮ್ಮಂದಿರಿದ್ದಂತೆ. ಇನ್ನೂ ಹತ್ತು ದಿನದಲ್ಲಿ ನಮ್ಮ ಸಮಸ್ಯೆಗಳು ಬಗೆಹರಿಯುತ್ತವೆ ಎನ್ನುವ ವಿಶ್ವಾಸ ಇದೆ ಎಂದರು.

ರಾಜ್ಯದ ಉಸ್ತುವಾರಿ ವಹಿಸಿದ್ದ ಅಗರ್‌ವಾಲ್ ಅವರು ಕೇಂದ್ರದ ವರಿಷ್ಠರಿಗೆ ವರದಿ ನೀಡಿದ್ದಾರೆ. ವರಿಷ್ಠರು ಇಲ್ಲಿನ ನಾಯಕರನ್ನು ಆಹ್ವಾನಿಸಿ ಚರ್ಚಿಸಲಿದ್ದಾರೆ. ಬಸವನಗೌಡ ಪಾಟೀಲ್ ಯತ್ನಾಳ್ ಸೇರಿದಂತೆ ಯಾವುದೇ ಒಬ್ಬ ಬಿಜೆಪಿ ಕಾರ್ಯಕರ್ತನನ್ನು ಉಚ್ಛಾಟಿಸುವ ಅಗತ್ಯವಿಲ್ಲ. ಯತ್ನಾಳ್ ಕೇಂದ್ರದಲ್ಲಿ ಸಚಿವರಾಗಿದ್ದವರು. ತಪ್ಪು ಮಾಡುವುದು ಸಹಜ. ವಿಜಯೇಂದ್ರ ಪಕ್ಷದಲ್ಲಿ ಹಂತ ಹಂತವಾಗಿ ಬೆಳೆದವರು. ಯಡಿಯೂರಪ್ಪ 5 ದಶಕಗಳ ಕಾಲ ಕಾಲಿಗೆ ಚಕ್ರ ಕಟ್ಟಿಕೊಂಡು ರಾಜ್ಯದಾದ್ಯಂತ ಸಂಚರಿಸಿ ಪಕ್ಷ ಕಟ್ಟಿ ಬೆಳೆಸಿದ್ದಾರೆ. ನಾಲ್ಕು ಬಾರಿ ಮುಖ್ಯಮಂತ್ರಿ ಆಗಿದ್ದಾರೆ. ವರಿಷ್ಠರು ಅಳೆದೂ ತೂಗಿ ಅವರ ಪುತ್ರನನ್ನು ರಾಜ್ಯಾಧ್ಯಕ್ಷರನ್ನಾಗಿಸಿದ್ದಾರೆ. ಗೊಂದಲಗಳು ಇನ್ನುಮುಂದೆ ಆಗುವುದಿಲ್ಲ. ಎರಡೂ ಕಡೆ ಚರ್ಚಿಸಿ, ನಾಯಕರನ್ನು ಕೂಡಿಸಿಕೊಂಡು ಸರಿಪಡಿಸಲಿದ್ದಾರೆ.

ಡಿಕೆಶಿ ಕಾಂಗ್ರೆಸ್ ನಲ್ಲಿರುತ್ತಾರೆ. ಅದರಂತೆ ಬಿ.ಶ್ರೀರಾಮುಲು ಬಿಜೆಪಿಯಲ್ಲಿರುತ್ತಾರೆ. ನನಗೆ ಯಾವುದೇ ಜವಾಬ್ದಾರಿ ನೀಡಿದರೂ ನಾನು ಆ ಸ್ಥಾನಕ್ಕೆ ಬೆಲೆ ಬರುವ ಹಾಗೆ ನಡೆದುಕೊಳ್ಳುತ್ತೇನೆ. ಆರ್.ಅಶೋಕ್ ಮತ್ತು ವಿಜಯೇಂದ್ರ ಒಂದೇ ತಾಯಿಯ ಮಕ್ಕಳಿದ್ದಹಾಗೆ ಇದ್ದಾರೆ. ವಿಜಯೇಂದ್ರ ಪಕ್ಷದ ಅಧ್ಯಕ್ಷರು, ಅಶೋಕ್ ವಿರೋಧ ಪಕ್ಷದ ನಾಯಕರಿದ್ದಾರೆ ಎಂದು ಬಿಜೆಪಿಯ ತಲ್ಲಣಗಳಿಗೆ ತೆರೆ ಎಳೆದರು.

# 36ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಜಾಗೃತಿ ಜಾಥಾಕ್ಕೆ ಚಾಲನೆ

ಕಲಬುರಗಿ,ಜ.24:36ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಜಾಗೃತಿಮಾಸಾಚರಣೆ–2025ರ ಅಂಗವಾಗಿ ಸಾರ್ವಜನಿಕರಲ್ಲಿ ರಸ್ತೆ ಸುರಕ್ಷತೆ ಕುರಿತು ಜಾಗೃತಿ ಮೂಡಿಸಲು ಹಮ್ಮಿಕೊಳ್ಳಲಾಗಿದ್ದ ಜಾಥಾಕ್ಕೆ ಕಲಬುರಗಿ ನಗರದ ಜಗತ್ ವೃತ್ತದಲ್ಲಿ ಕಲಬುರಗಿ ವಿಭಾಗದ ಜಂಟಿ ಸಾರಿಗೆ ಆಯುಕ್ತರಾದ ಸಿದ್ದಪ್ಪ ಕಲ್ಲೇರ ಅವರು ಹಸಿರು ನಿಶಾನೆ ತೋರಿಸುವುದರ ಮೂಲಕ ಶುಕ್ರವಾರ ಅವರು ಜಾಥಾಕ್ಕೆ ಚಾಲನೆ ನೀಡಿದರು.

ಅವರು ಮಾತನಾಡಿ, "ರಸ್ತೆ ಸುರಕ್ಷತೆ–ಜೀವನ ರಕ್ಷೆ" ಎಂಬ ಧ್ಯೇಯವಾಕ್ಯದೊಂದಿಗೆ 36ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಜಾಗೃತಿಮಾಸಾಚರಣೆ–2025ರ ಯನ್ನು ಆಚರಿಸಲಾಗುತ್ತಿದ್ದು, ಸಾರ್ವಜನಿಕರಲ್ಲಿ ರಸ್ತೆ ಸುರಕ್ಷತೆ ಬಗ್ಗೆ ತಿಳಿಸಲು ವಿವಿಧ ಶಾಲೆಗಳ ವಿದ್ಯಾರ್ಥಿಗಳಿಂದ ನಗರದ ಜಗತ್ ವೃತ್ತದಿಂದ ಕಲಬುರಗಿ ಮಿನಿ ವಿಧಾನಸೌಧದವರೆಗೆ ವಾಕಥಾನ್ ಹಮ್ಮಿಕೊಳ್ಳಲಾಗಿದೆ. ರಸ್ತೆ ಸುರಕ್ಷತೆ ಕುರಿತು ನಾವೆಲ್ಲರೂ ಮುತುವರ್ಜಿವಹಿಸಿ ತಮ್ಮ ಪ್ರಾಣ ರಕ್ಷಿಸಿಕೊಳ್ಳಬೇಕು. ಜಾಗೃತೆಯಿಂದ ವಾಹನ ಚಾಲನೆ ಮಾಡಬೇಕು. ರಸ್ತೆಯಲ್ಲಿ ಸಂಚರಿಸುವಾಗ ಎಲ್ಲಾ ಸುರಕ್ಷತಾ ಕ್ರಮಗಳನ್ನು ಅನುಸರಿಸಬೇಕೆಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು. ಕಲಬುರಗಿ ಉಪ ಸಾರಿಗೆ ಆಯುಕ್ತರು ಹಾಗೂ ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಾದ



ಆನಂದ ಪಾರ್ಥನಳ್ಳಿ ಅವರು ಮಾತನಾಡಿ, ರಸ್ತೆ ಸುರಕ್ಷತೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಸಾರಿಗೆ ಇಲಾಖೆಯಿಂದ ಪ್ರತಿ ವರ್ಷ ಜನವರಿ ಮಾಹೆಯಲ್ಲಿ ರಾಷ್ಟ್ರೀಯ ರಸ್ತೆ ಸುರಕ್ಷತಾ ಜಾಗೃತಿ ಮಾಸಾಚರಣೆ ಆಚರಿಸಲಾಗುತ್ತಿದೆ. ಶಾಲಾ–ಕಾಲೇಜುಗಳಲ್ಲಿ ರಸ್ತೆ ಸುರಕ್ಷತೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಎಲ್ಲರೂ ರಸ್ತೆ ಸುರಕ್ಷತಾ ಕ್ರಮಗಳನ್ನು ಪಾಲಿಸಿ ತಮ್ಮ ಜೀವವನ್ನು ರಕ್ಷಿಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಡಿ.ಸಿ.ಪಿ. ಕನಿಕಾ ಸಿಕ್ರಿವಾಲ್, ಹಿರಿಯ ಮೋಟಾರ ವಾಹನ ನಿರೀಕ್ಷಕರು ಹಾಗೂ ಸಾರಿಗೆ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು, ಎನ್.ಸಿ.ಸಿ. ಕಚೇರಿಯ ಕಮಾಂಡಂಟ್ ಅವರು ಉಪಸ್ಥಿತರಿದ್ದರು. ಈ ಜಾಥಾದಲ್ಲಿ ಅಪ್ಪಾ ಪಬ್ಲಿಕ್ ಶಾಲೆಯ ಸ್ಕೌಟ್ಸ್ ಆಂಡ್ ಗೈಡ್ಸ್ ಎನ್.ಸಿ.ಸಿ. ವಿದ್ಯಾರ್ಥಿಗಳು ಹಾಗೂ ಇತರೆ ಶಾಲೆಗಳ ವಿದ್ಯಾರ್ಥಿಗಳು "ಸಂಚಾರ ಸೂಚನಾ ಫಲಕಗಳನ್ನು ಉಲ್ಲಂಘಿಸಬೇಡಿ","ಅಡ್ಡಾದಿಡ್ಡ ಸವಾರಿ ಸಾವಿಗೆ ದಾರಿ","ರಸ್ತೆಯ ಬಲಬದಿಯಲ್ಲೇ ನಡೆಯಿರಿ", "ವಾಹನ ಬಾಗಿಲು ತೆರೆದು ವಾಹನ ನಡೆಸಬೇಡಿ","ಮದ್ಯಪಾನ ಮಾಡಿ ವಾಹನ ನಡೆಸಬೇಡಿ", "ವಾಹನಗಳ ನಡುವೆ ಸುರಕ್ಷಿತ ಅಂತರವಿರಲಿ", "ಅಪ್ರಾಪ್ತ ವಯಸ್ಕರಿಂದ ವಾಹನ ಚಾಲನೆ ಶಿಕ್ಷಾರ್ಹ", "ಚಲಿಸುತ್ತಿರುವ ಬಸ್‌ನ್ನು ಹತ್ತುವುದಾಗಲಿ ಇಳಿಯುವುದಾಗಲಿ ಮಾಡಬೇಡಿ", "ಬಸ್ಸಿನ ಕಿಟಕಿ ಹೊರಗಡೆ ತಲೆ, ಕೈ ಹಾಕುವುದು ಅಪಾಯಕಾರಿ", "ವಾಹನ ಚಾಲನೆ ಮಾಡುವಾಗ ಸೀಟ್ ಬೆಲ್ಟ್ ಹಾಕಿರಿ" ಸೇರಿದಂತೆ ಮತ್ತಿತರ ಎಂಬ ಘೋಷಣೆಗಳನ್ನು ಕೈಯಿಂದ ಹಿಡಿದುಕೊಂಡು ರಸ್ತೆಯಲ್ಲಿ ಕೂಗುತ್ತಾ ಸಾರ್ವಜನಿರಲ್ಲಿ ರಸ್ತೆ ಸುರಕ್ಷತೆ ಕುರಿತು ಅರಿವು ಮೂಡಿಸಿದರು.

## ಕೇಂದ್ರ ಕಾರಾಗೃಹದಲ್ಲಿ ರಾಷ್ಟ್ರೀಯ ಮತದಾರರ ದಿನ ಆಚರಣೆ



ಮಲ್ಲಮ ನುಡಿ ವಾರ್ತೆ
ಕಲಬುರಗಿ,ಜ.24:ಪ್ರತಿ ವರ್ಷ ಜನವರಿ 25 ರಂದು ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸಲಾಗುತ್ತಿದ್ದು, ಅಂ–ದು ಸಾರ್ವತ್ರಿಕ ರಜೆ ಇರುವ ಹಿನ್ನೆಲೆಯಲ್ಲಿ ಜನವರಿ 24 ರಂದು ಶುಕ್ರವಾರ ಕಲಬುರಗಿ ಕೇಂದ್ರ ಕಾರಾಗೃಹದ ಒಳಾವರಣದಲ್ಲಿ ಮತದಾರರ ದಿನವನ್ನು ಆಚರಿಸಲಾಯಿತು.

15ನೇ ರಾಷ್ಟ್ರೀಯ ಮತದಾರರ ದಿನಾಚರಣೆಯ ಪ್ರಯುಕ್ತ ಈ ಸಂಸ್ಥೆಯ ಮುಖ್ಯಸ್ಥರಾದ ಡಾ॥ ಅನಿತಾ ಆರ್. ಅವರು "ಮತದಾನಕ್ಕಿಂತ ಇನ್ನೊಂದಿಲ್ಲ, ನಾನು ಖಚಿತವಾಗಿ ಮತದಾನ ಮಾಡಬೇಕು ಎಂಬ ವಿಶೇಷ ಧ್ಯೇಯ ವಾಕ್ಯದೊಂದಿಗೆ ಈ ಸಂಸ್ಥೆಯ ಎಲ್ಲಾ ಲಿಪಿಕ/ ಕಾರ್ಯನಿರ್ವಾಹಕ ಅಧಿಕಾರಿ/ ಸಿಬ್ಬಂದಿಗಳು ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

## ದೇಶ ಭಕ್ತರಿಗೆ ಪ್ರೇರಣೆಯಾಗಿದ್ದ ಬೋಸ್

ಮಲ್ಲಮ್ಮ ನುಡಿ ವಾರ್ತೆ
ಬೀದರ. ಜ. 24 : ಬ್ರಿಟಿಷರ ವಿರುದ್ಧ ವೀರಾವೇಶದಿಂದ ಹೋರಾಡಿದ್ದ ಸುಭಾಷ್ ಚಂದ್ರ ಬೋಸ್ ದೇಶ ಭಕ್ತರಿಗೆ ಪ್ರೇರಣೆಯಾಗಿದ್ದರು ಎಂದು ಸಂಸ್ಕಾರ ಕಾಲೇಜು ಪ್ರಾಚಾರ್ಯ ಮಲ್ಲಿನಾಥ ಮಠಪತಿ ಹೇಳಿದರು.

ಸುಭಾಷ್ ಚಂದ್ರ ಬೋಸ್ ಅವರ ಜನ್ಮದಿನದ ನಿಮಿತ್ತ ಭಾರತೀಯ ಶಿಕ್ಷಣ ಮಂಡಲದ ಜಿಲ್ಲಾ ಘಟಕದ ವತಿಯಿಂದ ಇಲ್ಲಿಯ ಅರುಣೋದಯ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಶುಕ್ರವಾರ ಆಯೋಜಿಸಿದ್ದ ಪರಾಕ್ರಮ ದಿನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹಾತ್ಮ ಗಾಂಧಿಜಿ ಜತೆ–ಗೂಡಿ ದೇಶದ ಸ್ವಾತಂತ್ರ್ಯಕ್ಕಾಗಿ



ಹೋರಾಟ ಮಾಡಿದ್ದರು ಎಂದು ತಿಳಿಸಿದರು.

ಯುವಕರು ಬೋಸ್ ಅವರ ಶೌರ್ಯ ಹಾಗೂ ಜೀವನ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಹೇಳಿದರು.

ಬೋಸ್ ಅವರು 'ನಿಮ್ಮ ರಕ್ತ ನನಗೆ ಕೊಡಿ, ನಾನು ನಿಮಗೆ ಸ್ವಾತಂತ್ರ್ಯ ತಂದು ಕೊಡುವೆ' ಎಂದು ಹೇಳಿದ್ದರು. ಸ್ವಾತಂತ್ರ್ಯ ಹೋರಾಟಕ್ಕಾಗಿಯೇ ಆಜಾದ್ ಹಿಂದ್ ಫೌಜ್ ಸ್ಥಾಪಿಸಿದ್ದರು ಎಂದು

ಅಧ್ಯಕ್ಷತೆವಹಿಸಿದ್ದ ಭಾರತೀಯ ಶಿಕ್ಷಣ ಮಂಡಲದ ಜಿಲ್ಲಾ ಘಟಕದ ಅಧ್ಯಕ್ಷ ಸಂತೋಷಕುಮಾರ ಮಂಗಳೂರೆ ನುಡಿದರು.

ಬೋಸ್ ಸ್ವಾಮಿ ವಿವೇಕಾನಂದರಿಂದ ಪ್ರಭಾವಿತರಾಗಿದ್ದರು ಎಂದು ತಿಳಿಸಿದರು.

ಭಾರತೀಯ ಸಂಸ್ಕೃತಿ ಉತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಯೋಗ ಶಿಬಿರದಲ್ಲಿ ಪಾಲ್ಗೊಂಡಿದ್ದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

ವಿದ್ಯಾರಣ್ಯ ಪ್ರೌಢಶಾಲೆಯ ಮುಖ್ಯಶಿಕ್ಷಕಿ ಪ್ರತಿಭಾ ಚಾಮಾ, ಜೀಜಾಮಾತಾ ಕನ್ಯಾ ಪ್ರೌಢಶಾಲೆಯ ಮುಖ್ಯಶಿಕ್ಷಕ ಪರಮೇಶ್ವರ ಬಿರಾದಾರ, ಪತಂಜಲಿ ಯೋಗ ಸಮಿತಿಯ ಜಿಲ್ಲಾ ಅಧ್ಯಕ್ಷ ಯೋಗೇಂದ್ರ ಯದಲಾಪುರೆ ಉಪಸ್ಥಿತರಿದ್ದರು. ಜ್ಯೋತಿ ಸಂಗೋಳಗಿ ಸ್ವಾಗತಿಸಿದರು. ಅಲ್ಕಾವತಿ ಹೊಸದೊಡ್ಡಿ ನಿರೂಪಿಸಿದರು.

## ಪ್ರತಿಭಾ ಕಾರಂಜಿ: ಕಮಠಾಣ ವಿದ್ಯಾರ್ಥಿನಿಯರ ಸಾಧನೆ



ಮಲ್ಲಮ ನುಡಿ ವಾರ್ತೆ
ಬೀದರ. ಜ. 24 : ತಾಲ್ಲೂಕಿನ ಕಮಠಾಣದ ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿನಿಯರು ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವದ ಸ್ಪರ್ಧೆಗಳಲ್ಲಿ ಸಾಧನೆಗೈದು ಗಮನ ಸೆಳೆದಿದ್ದಾರೆ.

ಚರ್ಚಾ ಸ್ಪರ್ಧೆಯಲ್ಲಿ ಶಾಲೆಯ 10ನೇ ವಿದ್ಯಾರ್ಥಿನಿ ಅಕ್ಷತಾ ಮಾಲೆ ರಾಜ್ಯಮಟ್ಟಕ್ಕೆ ಆಯ್ಕೆಯಾದರೆ, ಕನ್ನಡ ಭಾಷಣ ಸ್ಪರ್ಧೆಯಲ್ಲಿ 8ನೇ ತರಗತಿಯ ಶ್ರೇಯಾ ಜಿಲ್ಲಾಮಟ್ಟದಲ್ಲಿ ದ್ವಿತೀಯ ಸ್ಥಾನ ಪಡೆದರು.

ಬೀದ???ನಲ್ಲಿ ನಡೆದ ಸ್ಪರ್ಧೆಯಲ್ಲಿ ನೋಡಲ್ ಅಧಿಕಾರಿ ಗುಂಡಪ್ಪ ಹುಡಗೆ ವಿದ್ಯಾರ್ಥಿನಿಯರಿಗೆ ಪ್ರಶಸ್ತಿ ಪತ್ರ ಪ್ರದಾನ ಮಾಡಿದರು.

ವಿದ್ಯಾರ್ಥಿಗಳ ಸಾಧನೆಗೆ ಎ???ಡಿಎಂಸಿ ಅಧ್ಯಕ್ಷ ಗದಗೆಪ್ಪ ಕ್ಯಾಸಾ, ಮುಖ್ಯಶಿಕ್ಷಕ ರವಿಕುಮಾರ, ಶಿಕ್ಷಕರಾದ ಶ್ರೀದೇವಿ ವಿ. ಪಾಟೀಲ, ಸಂಗೀತಾ ಮೈನಾಳೆ, ಶಿವಲಿಂಗಯ್ಯ ಸ್ವಾಮಿ, ಮಹೇಶ ದುಬೆ, ಅಶೋಕ ಸಿಂಧೆ, ಭೀಮರಾವ್ ಗೌಳೆ, ಬಸಪ್ಪ ಪೂಜಾರಿ, ಜಗದೇವಿ ಸಾವಲೆ, ಸರೋಜಾ, ಸ್ವರೂಪಾರಾಣಿ, ಸಂದೀಪ್, ಕವಿತಾ ಸಂತಸ ವ್ಯಕ್ತಪಡಿಸಿದ್ದಾರೆ.

## ರಾಜ್ಯಮಟ್ಟದ ಆದರ್ಶ ದಂಪತಿ ಪ್ರಶಸ್ತಿ ಪ್ರದಾನ



ಮಲ್ಲಮನುಡಿವಾರ್ತೆಬೀದರ. ಜ. 24 : ಕಲಬುರಗಿಯ ಆರೋಗ್ಯ ಇಲಾಖೆಯ ತರಬೇತಿ ಕೇಂದ್ರದ ಪ್ರಾಚಾರ್ಯ ಡಾ. ದೀಪಕಕುಮಾರ ಸುಕೆ ಹಾಗೂ ವೈಶಾಲಿ ಸುಕೆ ದಂಪತಿಗೆ ಧಾರವಾಡದ ಕರ್ನಾಟಕ ಶಿಕ್ಷಕರ ಸಂಘಗಳ ಪರಿಷತ್ ಹಾಗೂ ಕಲ್ಯಾಣ ಕರ್ನಾಟಕ ಪ್ರೌಢಶಾಲಾ ಶಿಕ್ಷಕರ ಸಂಘದಿಂದ ಕೊಡಲಾಗುವ ರಾಜ್ಯಮಟ್ಟದ ಆದರ್ಶ ದಂಪತಿ ಪ್ರಶಸ್ತಿ ಲಭಿಸಿದೆ.

ಬೀದ???ನಲ್ಲಿ ಈಚೆಗೆ ನಡೆದ ಸಮಾರಂಭದಲ್ಲಿ ಶಾಲು ಹೊದಿಸಿ, ಸ್ಮರಣಿಕೆಯೊಂದಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಭಾಲ್ಕಿ ಹಿರೇಮಠ ಸಂಸ್ಥಾನದ ಗುರುಬಸವ ಪಟ್ಟದ್ದೇವರು, ಧಾರವಾಡದ ಕರ್ನಾಟಕ ಶಿಕ್ಷಕರ ಸಂಘಗಳ ಪರಿಷತ್ ರಾಜ್ಯ ಅಧ್ಯಕ್ಷ ಸಂಗಮೇಶ ಡಿ. ಖನ್ನಿನಾಯ್ಕರ್, ಕಲ್ಯಾಣ ಕರ್ನಾಟಕ ಪ್ರೌಢಶಾಲಾ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷ ಪಾಂಡುರಂಗ ಬೆಲ್ದಾರ್ ಮತ್ತಿತರರು ಇದ್ದರು.

## ಜೆಸ್ಕಾಂ ವ್ಯಾಪ್ತಿಯ 10 ಸಬ್ ಸ್ಟೇಷನ್‌ನಲ್ಲಿ ಒಟ್ಟಾರೆ 43 ಮೆಗಾವ್ಯಾಟ್ ಸೋಲಾರ್ ವಿದ್ಯುತ್ ಉತ್ಪಾದನೆ:ಕೆ.ಜೆ.ಜಾರ್ಜ್

ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ,ಜ.24: ವಿದ್ಯುತ್ ಸಮಸ್ಯೆ ನೀಗಿಸುವ ನಿಟ್ಟಿನಲ್ಲಿ ಜೆಸ್ಕಾಂ ವ್ಯಾಪ್ತಿಯ ಕಲಬುರಗಿ, ರಾಯಚೂರು, ಕೊಪ್ಪಳ ಹಾಗೂ ವಿಜಯನಗರ ಜಿಲ್ಲೆಯ 10 ವಿದ್ಯುತ್ ಉಪ ವಿತರಣಾ ಕೇಂದ್ರದ 5ಕಿ.ಮೀ ವ್ಯಾಪ್ತಿಯಲ್ಲಿ ಕುಸುಮ್ 'ಸಿ' ಯೋಜನೆಯಡಿ ಒಟ್ಟಾರೆ 43 ಮೆಗಾ ವ್ಯಾಟ್ ಸೋಲಾರ ವಿದ್ಯುತ್ ಉತ್ಪಾದಿಸುವ ಘಟಕ ಸ್ಥಾಪಿಸಲಾಗುತ್ತಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದರು. ಗುರುವಾರ ಇಲ್ಲಿನ ಜೆಸ್ಕಾಂನ ನಿಗಮ ಕಚೇರಿ ಸಭಾಂಗಣದಲ್ಲಿ ವಿದ್ಯುತ್ ಸಮಸ್ಯೆ ಕುರಿತು ಜಿಲ್ಲೆಯ ಶಾಸಕರು ಮತ್ತು ಜೆಸ್ಕಾಂ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಕಲಬುರಗಿ ಜಿಲ್ಲೆಯ ಹಡಗಿಲ್ ಹಾರುತಿ, ವಿ.ಕೆ.ಸಲಗರ್ ಹಾಗೂ ಗೊಬ್ಬೂರ ಸಬ್ ಸ್ಟೇಷನ್ ವ್ಯಾಪ್ತಿಯಲ್ಲಿ ಈ ಸೋಲಾರ ಘಟಕ ಸ್ಥಾಪಿಸಲಾಗುತ್ತಿದೆ. ಖಾಸಗಿ ಕಂಪನಿಗಳೆ ಸೋಲಾರ ಘಟಕ ಸ್ಥಾಪನೆಗೆ ಬಂಡವಾಳ ಹಾಕಲಿದ್ದು, ಸರ್ಕಾರ ಯಾವುದೇ ಹಣ ಖರ್ಚು ಮಾಡಲ್ಲ. 2.95 ರೂ. ದರದಲ್ಲಿ ಪ್ರತಿ ಯೂನಿಟ್ ವಿದ್ಯುತ್ ಅವರಿಂದ ಖರೀದಿಸಿ ಘಟಕ ಸುತ್ತಮುತ್ತ 5 ಕಿ.ಮೀ. ವ್ಯಾಪ್ತಿಯ 4,456 ರೈತರ ಪಂಪಸೆಟ್‌ಗಳಿಗೆ ವಿದ್ಯುತ್ ಪೂರೈಸಲಾಗುತ್ತದೆ ಎಂದರು.

ರಾಜ್ಯದಾದ್ಯಂತ ಈ ಯೋಜನೆಯಡಿ 400 ಸಬ್ ಸ್ಟೇಷನ್ ವ್ಯಾಪ್ತಿಯಲ್ಲಿ 3,000 ಮೆಗಾ ವ್ಯಾಟ್ ಸೋಲಾರ್ ವಿದ್ಯುತ್ ಉತ್ಪಾದನೆಗೆ ಯೋಜನೆ ಹಾಕಿಕೊಂಡಿದ್ದು, 1 ಮೆಗಾ



ವ್ಯಾಟ್ ಘಟಕಕ್ಕೆ 4 ಎಕರೆ ಜಮೀನು ಅವಶ್ಯಕತೆ ಇದೆ. ಇದಕ್ಕಾಗಿ ಸರ್ಕಾರಿ ಜಮೀನು ಉಚಿತವಾಗಿ ಪಡೆಯಲು ಸಚಿವ ಸಂಪುಟ ಒಪ್ಪಿಗೆ ನೀಡಿದ್ದು, ಸರ್ಕಾರಿ ಜಮೀನು ಇಲ್ಲದಿದ್ದಲ್ಲಿ ಖಾಸಗಿ ಜಮೀನು ಲೀಸ್ ಪಡೆದು ಯೋಜನೆ ಸಾಕಾರಗೊಳಿಸಲಾಗುವುದು ಎಂದರು. ಶಾಸಕ ಅಲ್ಲಮಪ್ರಭು ಪಾಟೀಲ ಮಾತನಾಡಿ, ದಕ್ಷಿಣ ವಿಧಾನಸಭಾ ಕ್ಷೇತ್ರದ ಕಲಬುರಗಿ ನಗರದಲ್ಲಿ ಒಂದು ಹೆಚ್ಚುವರಿ ಸಬ್ ಸ್ಟೇಷನ್ ಜೊತೆಗೆ ಪಟ್ಟಣ ಹೋಬಳಿಯಲ್ಲಿ ಒಂದು ವಿದ್ಯುತ್ ಸಬ್ ಸ್ಟೇಷನ್ ಮಂಜೂರು ಮಾಡಬೇಕಿದೆ. ಕಲಬುರಗಿ ನಗರದ ಸೂಪರ್ ಮಾರ್ಕೆಟ್ ಪ್ರದೇಶದಲ್ಲಿ ವಿದ್ಯುತ್ ಲೈನ್ ತಲೆ ಮೇಲೆ ನೇತಾಡುತ್ತಿದ್ದು, ಅವುಗಳನ್ನು ಭೂಗತ ಕೇಬಲ್ (ಅಂಡರ್ ಗ್ರೌಂಡ್) ಅಳವಡಿಸಬೇಕೆಂದರು. ಸಚಿವ ಕೆ.ಜೆ.ಜಾರ್ಜ್ ಮಾತನಾಡಿ ಅದು ಜನನಿಬಿಡಿತ ಪ್ರದೇಶ ಆಗಿರುವುದರಿಂದ ಭೂಗತ ಕೇಬಲ್ ಅಳವಡಿಸುವಂತೆ ಎಂ.ಡಿ. ರವೀಂದ್ರ ಅವರಿಗೆ ಸೂಚಿಸಿದರು. ಶಾಸಕ ಬಸವರಾಜ ಮತ್ತಿಮೂಡ ಮಾತನಾಡಿ ಕ್ಷೇತ್ರದ ಹರಕಂಚಿ, ಶ್ರೀಚಂದ ಸೇರಿದಂತೆ ಹಲವೆಡೆ ಟಿ.ಸಿ. ಕೆಟ್ಟಲ್ಲಿ ಎರಡು ತಿಂಗಳಾದರು ಬದಲಾಯಿಸುತ್ತಿಲ್ಲ. ರೈತರ ಸಮಸ್ಯೆಗೆ ಜೆಸ್ಕಾಂ ತ್ವರಿತ ಗತಿಯಲ್ಲಿ ಸ್ಪಂದಿಸಬೇಕು. ಕಮಲಾಪೂರ, ನರೋಣಾ 33 ಕೆ.ವಿ. ಸ್ಟೇಷನ್‌ಗಳನ್ನು 110 ಕೆ.ವಿ.ಗೆ ಮೇಲ್ದರ್ಜೆಗೇರಿಸಬೇಕೆಂದರು. ಕೆ.ಪಿ.ಟಿ.ಸಿ.ಎಲ್. ಎಂ.ಡಿ ಮತ್ತು ಜೆಸ್ಕಾಂ ಚೇರಮೆನ್ ಪಂಕಜಕುಮಾರ ಪಾಂಡೆ ಮಾತನಾಡಿ ಕಮಲಾಪೂರ ತಾಲೂಕಾ ಕೇಂದ್ರಸ್ಥಾನವಾಗಿರುವುದರಿಂದ ವಿದ್ಯುತ್ ಲೋಡ್ ಬೆಳವಣಿಗೆ ಪರಿಗಣಿಸಿ ಉನ್ನತಿಕರಿಸಲಾಗುವುದು ಎಂದರು. ಅಫಜಲಪೂರ ಶಾಸಕ ಎಂ.ವೈ.ಪಾಟೀಲ ಮಾತನಾಡಿ ಕ್ಷೇತ್ರದ ಶಿವೂರ, ನಂದರ್ಗಾ, ಘೋಳನೂರ, ಅತನೂರ, ಬಳ್ಳೂರ್ಗಿ 33.ಕೆ.ವಿ ವಿದ್ಯುತ್ ಉಪ ವಿತರಣಾ ಕೇಂದ್ರಗಳನ್ನು 110 ಕೆ.ವಿ.ಗೆ ಉನ್ನತಿಕರಿಸುವಂತೆ ಕೋರಿದರು. ಬುಧವಾರ ನಡೆದ ಸಭೆಯಲ್ಲಿ ಅಫಜಲಪೂರ ಪಟ್ಟಣಕ್ಕೆ ಹೊಸದಾಗಿ 220 ಕೆ.ವಿ. ಸಬ್ ಸ್ಟೇಷನ್ ಮಂಜೂರು ಮಾಡಲಾಗಿದೆ. ಉಳಿದ ಪ್ರಸ್ತಾವನೆ ಪರಿಶೀಲಿಸಲಾಗುವುದು ಎಂದು ಪಂಕಜಕುಮಾರ ಪಾಂಡೆ ತಿಳಿಸಿದರು. ವಿಧಾನ ಪರಿಷತ್ ಶಾಸಕ ತಿಪ್ಪಣ್ಣಪ್ಪ ಕಮಕನೂರ ಅವರು ವಿವಿಧ ವಿದ್ಯುತ್ ಸಮಸ್ಯೆಗಳನ್ನು ಸಚಿವರ ಮುಂದಿಟ್ಟರು. ಶಾಸಕ ಜಗದೇವ ಗುತ್ತೇದಾರ ಮಾತನಾಡಿ ನೂತನ ಕಾಳಗಿ ತಾಲೂಕಿನಲ್ಲಿ 33ಕೆ.ವಿ. ಸ್ಟೇಷನ್ 110 ಕೆ.ವಿ.ಗೆ ಮೇಲ್ದರ್ಜೆಗೇರಿಸುವಂತೆ ಮನವಿ ಮಾಡಿಕೊಂಡರು.


ಎಂ.ಎಲ್.ಸಿ ಬಿ.ಜಿ.ಪಾಟೀಲ ಮಾತನಾಡಿ ಫಿರೋಜಾಬಾದ ಬಳಿ ಕ್ರೆಡಲ್ ಸಂಸ್ಥೆಯಿಂದ 1,000 ಮೆಗಾ ವ್ಯಾಟ್ ಸೋಲಾರ್ ವಿದ್ಯುತ್ ಸ್ಥಾಪಿಸುವ ಕೆಲಸ ಎರಡು ವರ್ಷದಿಂದ ನೆನೆಗುದ್ದಿಗೆ ಬಿದ್ದಿದ್ದು, ಅನುಷ್ಠಾನಕ್ಕೆ ತರಬೇಕೆಂದರು. ಕೆ.ಇ.ಆರ್.ಸಿ. ಅವರು ಬ್ಯಾಟರಿ ಸ್ಟೋರೇಜ್ ಕ್ಯಾಪಾಸಿಟಿ ಅಳವಡಿಸಿಕೊಂಡು ಪ್ರಸ್ತಾವನೆ ಮರು ಸಲ್ಲಿಸಲು ತಿಳಿಸಿರುವುದರಿಂದ ವಿಳಂಬವಾಗಿದೆ ಎಂದು ಸಚಿವರು ಉತ್ತರಿಸಿದರು.

ಲೈನ್ ನಿರ್ವಹಣೆ ಮಾಡಿ, ಅವಘಡ ತಪ್ಪಿಸಿ: ಸಭೆಯ ಚರ್ಚೆಯಲ್ಲಿ ಶಾಸಕ ಬಸವರಾಜ ಮತ್ತಿಮೂಡ ಮಾತನಾಡಿ ತಮ್ಮ ಕ್ಷೇತ್ರದ ಹಲವೆಡೆ ಗ್ರಾಮೀಣ ಭಾಗದಲ್ಲಿ ವಿದ್ಯುತ್ ಲೈನ್ ಕೆಳಗೆ ಇಳಿಬಿದ್ದಿದ್ದು, ಅಪಾಯಕ್ಕೆ ಆಹ್ವಾನ ನೀಡುತ್ತಿವೆ. ಇತ್ತೀಚೆಗೆ ವಿದ್ಯುತ್ ತಂತಿ ತಗುಲಿ ರೈತನೊಬ್ಬ ಮೃತಪಟ್ಟಿದ್ದು, ನಿರ್ವಹಣೆ ಕೆಲಸ ನಿರಂತರ ನಡೆಯಬೇಕು ಎಂದು ಪ್ರಸ್ತಾಪಿಸಿದರು. ಇದಕ್ಕೆ ಪ್ರತಿಕ್ರಿಯೆಸಿದ ಸಚಿವ ಕೆ.ಜೆ. ಜಾರ್ಜ್ ಅವರು ಕೂಡಲೆ ಜಿಲ್ಲೆಯ ಎಲ್ಲೆಡೆ 2–3 ತಿಂಗಳಿನಲ್ಲಿ ವಿದ್ಯುತ್ ಲೈನ್ ನಿರ್ವಹಣೆ ಮತ್ತು ಕಂಬಗಳನ್ನು

ಕ್ರಮ ತೆಗೆದುಕೊಳ್ಳುವುದು ಅವಶ್ಯಕತೆ ಇದೆ ಎಂದು ಜೆಸ್ಕಾಂ ಅಧಿಕಾರಿಗಳಿಗೆ ನಿರ್ದೇಶನ ನೀಡಿದಲ್ಲದೆ ಜಿಲ್ಲೆಯ ಎಲ್ಲಾ ಚುನಾಯಿತ ಜನಪ್ರತಿನಿಧಿಗಳನ್ನು ಭೇಟಿ ಮಾಡಿ ಇಲಾಖೆಗೆ ಸಂಬಂಧಿಸಿದಂತೆ ಕ್ಷೇತ್ರಗಳ ಸಮಸ್ಯೆ ಆಲಿಸಿ ಪರಿಹಾರ ಕಲ್ಪಿಸಬೇಕೆಂದು ಸೂಚಿಸಿದರು.

ಜೆಸ್ಕಾಂನಿಂದ ಗರಿಷ್ಠ ಪರಿಹಾರ: ಕಲಬುರಗಿ ನಗರದ ಮೋಹನ್ ಲಾಡ್ಜ್ ಬಳಿ ಇತ್ತೀಚೆಗೆ ವಿದ್ಯುತ್ ಅವಘಡದಿಂದ ಎರಡು ಕಾಲು ಕಳೆದುಕೊಂಡು ನಗರದ ಯೂನೈಟೆಡ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಸಂತ್ರಸ್ತ ಮಹಿಳೆಗೆ ಜೆಸ್ಕಾಂ 1 ಲಕ್ಷ ರೂ. ಪರಿಹಾರ ನೀಡಿದೆ. ಇಬ್ಬರು ಬುದ್ಧಿ ಮಾಂದ್ಯ ಮಕ್ಕಳನ್ನು ಹೊಂದಿರುವ ಸಂತ್ರಸ್ತೆಯ ಇದೂವರೆಗಿನ ಆಸ್ಪತ್ರೆ ವೆಚ್ಚ 12 ಲಕ್ಷ ರೂ. ಆಗಿದ್ದು, ಚಿಕಿತ್ಸೆ ಮುಂದುವರೆದಿದೆ. ಹೀಗಾಗಿ ಆಸ್ಪತ್ರೆ ವೆಚ್ಚ ಜೆಸ್ಕಾಂನಿಂದ ಭರಿಸುವುದಲ್ಲದೆ ಕುಟುಂಬಕ್ಕೆ ಎಲ್ಲಾ ರೀತಿಯ ಪರಿಹಾರ ಒದಗಿಸಬೇಕು ಎಂದು ಶಾಸಕ ಅಲ್ಲಮಪ್ರಭು ಪಾಟೀಲ ಸಚಿವರ ಗಮನ ಸೆಳೆದರು. ಇದಕ್ಕೆ ಸಚಿವರು ಸಮ್ಮತಿಸಿ ಜೆಸ್ಕಾಂನಿಂದ ಗರಿಷ್ಠ ಪರಿಹಾರ ಒದಗಿಸುವ ಭರವಸೆ ನೀಡಿದರು. ಸಭೆಯಲ್ಲಿ ಜೆಸ್ಕಾಂ ಮುಖ್ಯ ಇಂಜಿನೀಯರ್ (ಕಾರ್ಯಾಚರಣೆ) ಆರ್.ವೆಂಕಟೇಶ ಪ್ರಸಾದ, ಕಲಬುರಗಿ ವಲಯದ ಮುಖ್ಯ ಇಂಜಿನೀಯರ್ ವೆಂಕಟೇಶ ಹಾಲ್ವಿ, ಮುಖ್ಯ ಆರ್ಥಿಕ ಅಧಿಕಾರಿ ಮುರಳೀಧರ ನಾಯಕ್, ಕಲಬುರಗಿ ಮತ್ತು ಯಾದಗಿರಿ ಅಧೀಕ್ಷಕ ಅಭಿಯಂತರರಾದ ಖಂಡೆಪ್ಪ ಸೋನಾವಣೆ ಸೇರಿದಂತೆ ಜೆಸ್ಕಾಂ ಕಾರ್ಯನಿರ್ವಾಹಕ ಇಂಜಿನೀಯರ್‌ಗಳು ಹಾಗೂ ಇತರೆ ಹಂತದ ಅಧಿಕಾರಿಗಳು ಭಾಗವಹಿಸಿದ್ದರು.

## ಯಾದಗಿರಿ ಜಿಲ್ಲೆ, ಶಹಾಪೂರ ತಾಲೂಕಿನ ಶಿರವಾಳ ಗ್ರಾಮದಲ್ಲಿ ಅಕ್ರಮ ಕಲ್ಲು ಗಣಿಗಾರಿಕೆ ತಡೆಗಟ್ಟಲು ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಇಂದು ದಿನಾಂಕ 23-01-2025ರಂದು ಕರವೇ ಜಿಲ್ಲಾ ಘಟಕ ವತಿಯಿಂದ ಮಾನ್ಯ ಜಿಲ್ಲಾಧಿಕಾರಿಗಳಿಗೆ ಹಾಗೂ ಮಾನ್ಯ ಹಿರಿಯ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಕರವೇ ಜಿಲ್ಲಾಧ್ಯಕ್ಷರಾದ ಟಿ.ಎನ್.ಭೀಮುನಾಯಕ ನೇತೃತ್ವದಲ್ಲಿ ಮನವಿ ಪತ್ರ ಸಲ್ಲಿಸಲಾಯಿತು, ಮನವಿ ಸಲ್ಲಿಸಿ ಮಾತನಾಡಿದ ಅವರು ಯಾದಗಿರಿ ಜಿಲ್ಲೆ, ಶಹಾಪೂರ ತಾಲೂಕಿನ ಶಿರವಾಳ, ಅಣಬಿ, ಹೊಸೂರು, ದೋರನಹಳ್ಳಿ ಗ್ರಾಮಗಳಲ್ಲಿ ನಿರಂತರವಾಗಿ ಹಲವು ವರ್ಷಗಳಿಂದ ಅಕ್ರಮ ಕಲ್ಲು ಗಣಿಗಾರಿಕೆ ಮಾಡಲಾಗುತ್ತಿದ್ದು, ಗಣಿಗಾರಿಕೆ ಇಲಾಖೆಯಿಂದ ಯಾವುದೇ ಅನುಮತಿ ಪಡೆ-ಯದೇ, ಕೃಷಿ ಜಮೀನಿನಲ್ಲಿ ಕಾನೂನು ಬಾಹಿರವಾಗಿ ಯಾವುದೇ ಸಂಬಂಧಪಟ್ಟ ಇಲಾಖೆಯ ಪರವಾನಿಗೆ ಇಲ್ಲದೇ ರಾಜಾ-ರೋಷವಾಗಿ ಹಗಲು ರಾತ್ರಿ ಎನ್ನದೇ ಕಲ್ಲು ಗಣಿಗಾರಿಕೆ, ಬ್ಲಾಸ್ಟಿಂಗ್ ಕೆಲಸ ನಡೆಯುತ್ತಿದೆ. 100 ಕ್ಕೂ ಹೆಚ್ಚು ಅಡಿಯಷ್ಟು ಆಳ ತೋಡಿರುತ್ತಾರೆ.

ನೂರಾರು ಎಕರೆ ವಿಶಾಲವಾಗಿ ನಡೆಸಿ, ಅಕ್ರಮ ದಂಧೆ ಮಾಡಿಕೊಂಡಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದರು.

ಇದರಿಂದ ಅಕ್ಕ-ಪಕ್ಕದ ಕೃಷಿ ಚಟುವಟಿಕೆ ಮಾಡುವ ರೈತರಿಗೆ ತೀವ್ರ ಅಡಚಣೆ ಉಂಟಾಗುತ್ತಿದ್ದು, ಹಾಗೂ ಭಯದಲ್ಲಿ ವಾಸಿಸುತ್ತಿದ್ದು, ಈ ಪ್ರದೇಶದ ಪಕ್ಕದಲ್ಲಿ ಸನ್ನತಿ ಬ್ರಿಡ್ಜ್ ಇದ್ದು, ಬ್ಲಾಸ್ಟಿಂಗ್‌ನಿಂದ ಸೇತುವೆಗೆ ಹಾಗೂ ಗ್ರಾಮದಲ್ಲಿರುವ ಮನೆಗಳಿಗೆ ಅಪಾಯ ಉಂಟಾಗುವ ಸಾಧ್ಯತೆ ಇದೆ.

ರಸ್ತೆ ಅಕ್ಕ-ಪಕ್ಕ ದೊಡ್ಡ ಗುಂಡಿಗಳು ಬಿದ್ದಿದ್ದರಿಂದ ರಸ್ತೆ ಮೂಲಕ ವಾಹನ ಸಂಚಾರಿ ವ್ಯವಸ್ಥೆಗೆ ಕೂಡಾ ತೊಂದರೆ ಆಗಿದೆ. ಈ ಬಗ್ಗೆ ಅಧಿಕಾರಿಗಳು ಕಣ್ಣು ಮುಚ್ಚಿ ಕುಳಿತಿದ್ದಾರೆ.

ಅಕ್ರಮದಾರರು ಕೃಷಿ ಭೂಮಿಯಲ್ಲಿ ಕಲ್ಲು ಗಣಿಗಾರಿಕೆ ಮಾಡುವುದು ಎಷ್ಟರ ಮಟ್ಟಿಗೆ ಸರಿ ಇರುತ್ತದೆ.

ಈ ಅಕ್ರಮದಲ್ಲಿ ಕಂದಾಯ, ಪೊಲೀಸ್, ಗಣಿಗಾರಿಕೆ ಇಲಾಖೆಯವರಿಗೆ ಮಾಹಿತಿ ಇದ್ದರೂ ಕೂಡಾ ಕ್ರಮಕ್ಕೆ ಮುಂದಾಗಿಲ್ಲ, ಇವರು ನೇರವಾಗಿ ಶಾಮೀಲಾಗಿರವುದು ಕಂಡುಬರುತ್ತದೆಂದು ಹೇಳಿದರು. ಆದ ಕಾರಣ ತಾವು ಈ ಬಗ್ಗೆ ಕ್ರಮ ಕೈಗೊಂಡು ಅಕ್ರಮ ತಡೆಗಟ್ಟಿ, ಶಾಮೀಲಾದವರ ಮೇಲೆ ಕ್ರಮಕ್ಕೆ ಮುಂದಾಗಲು ಎಚ್ಚರಿಸಲಾಯಿತು.

ಒಂದು ವೇಳೆ ಕ್ರಮಕ್ಕೆ ಮುಂದಾಗದೇ ಹೋದಲ್ಲಿ ನಮ್ಮ ಸಂಘಟನೆ ವತಿಯಿಂದ ಅಕ್ರಮ ಗಣಿಗಾರಿಕೆ ನಡೆಯುವಂತ ಸ್ಥಳಗಳಿಗೆ ಮುತ್ತಿಗೆ ಹಾಕಿ ಪರಿಸರವನ್ನು ನೈಸರ್ಗಿಕ ಸಂಪತ್ತನ್ನು ಉಳಿಸಿಕೊಳ್ಳಲು ಮುಂದಾಗಬೇಕಾಗುತ್ತದೆ, ಮತ್ತು ಇಲ್ಲಿ ಯಾವುದೇ ಅಹಿತಕರ ಘಟನೆ ನಡೆದರೆ ಸಂಬಂಧಪಟ್ಟ ಅಧಿಕಾರಿಗಳೆ ನೇರ ಹೊಣೆಗಾರರು ಆಗುತ್ತಾರೆಂದು ತಮ್ಮ ಗಮನಕ್ಕೆ ತರುತ್ತಿದ್ದೇವೆಂದು ತಿಳಿಸಿದರು. ಈ ಸಂಧರ್ಭದಲ್ಲಿ ಕರವೇ ಮುಖಂಡರಾದ ಸಿದ್ದು ನಾಯಕ ಹತ್ತಿಕುಣಿ, ಚೌಡಯ್ಯ ಬಾವೂರ, ಸಾಹೇಬಗೌಡ ನಾಯಕ, ಯಮನಯ್ಯ ಗುತ್ತೇದಾರ, ಪ್ರಕಾಶ ಪಾಟೀಲ ಜೈಗ್ರಾಮ್, ಸಿದ್ದಪ್ಪ ಕೂಯಿಲೂರ, ಸಿದ್ದಪ್ಪ ಕ್ಯಾಸಪನಳ್ಳಿ, ಅಬ್ದುಲ ಚಿಗನೂರ, ಶರಣಬಸಪ್ಪ ಯಲ್ಹೇರಿ, ವಿಶ್ವರಾಜ ಪಾಟೀಲ ಹೊನಗೇರಾ, ಸುರೇಶ ಬೆಳಗುಂದಿ, ಬಸ್ಸುನಾಯಕ ಸೈದಾಪೂರ, ಸುಭಾಷ ಯರಗೋಳ, ಲಿಂಗಾರಾಜ ವಡವಟ್, ಸೈದಪ್ಪ ಬಾಂಬೆ, ಮೌನೇಶ ಮಾಧ್ವಾರ, ಸಾಗರ ಹುಲ್ಲೇರ್, ಮಹೇಶ ಸೈದಾಪೂರ, ಮಲ್ಲು ಕೊಲ್ಕರ್, ರಮೇಶ.ಡಿ.ನಾಯಕ ಉಮೇಶ ಕಿಲ್ಲನಕೇರಾ, ಹಾಗೂ ಅನೇಕ ಕಾರ್ಯಕರ್ತರರು ಭಾಗಿಯಾಗಿದ್ದರು.

## ಸಿದ್ದರಾಮೇಶ್ವರ ವಚನಗಳು ಬದುಕಿನ ಸಾರ್ಥಕತೆಗೆ ಪೂರಕ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಮನುಷ್ಯ ಜೀವನದಲ್ಲಿ ಸ್ತುತಿ-ನಿಂದನೆಗಳನ್ನು ಸಮಾನವಾಗಿ ಸ್ವೀಕರಿಸಿ ಸಮಾಧಾನದ ಬದುಕು ಸಾಗಿಸಬೇಕು ಎಂದು ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ಬುಧವಾರ ಆಯೋಜಿಸಿದ್ದ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ ಮತ್ತು 307ನೆಯ ಮಾಸಿಕ ಶರಣ ಸಂಗಮ ಕಾರ್ಯಕ್ರಮದ ದಿವ್ಯ ಸನ್ನಿಧಾನ ವಹಿಸಿ ಅವರು ಮಾತನಾಡಿದರು.

ಶರಣ ಚಳುವಳಿಯಲ್ಲಿ ಶಿವಯೋಗಿ ಸಿದ್ದರಾಮೇಶ್ವರರು ಪ್ರಮುಖರಾಗಿದ್ದರು. ವಚನ ಸಾಹಿತ್ಯ ರಕ್ಷಣೆಯಲ್ಲಿ ಅವರ ಕೊಡುಗೆ ದೊಡ್ಡದಿದೆ. ಶಿವಯೋಗಿಗಳು ರಚಿಸಿ ವಚನಗಳು ಮನುಷ್ಯನ ಸಾರ್ಥಕ ಬದುಕಿಗೆ ಪೂರಕವಾಗಿವೆ. ಪ್ರತಿಯೊಬ್ಬರು ಅವರ ವಚನಗಳನ್ನು ಅರ್ಥೈಸಿಕೊಂಡು ನಿಜ ಜೀವನದಲ್ಲಿ ಆಚರಣೆಗೆ ತರುವ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು.

ನೇತೃತ್ವವಹಿಸಿದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಬಸವಾದಿ ಶರಣರ ವಚನಗಳನ್ನು ಜನಮಾನಸಕ್ಕೆ ತಲುಪಿಸುವಲ್ಲಿ ಶಿವಯೋಗಿ ಸಿದ್ದರಾಮೇಶ್ವರರ ಕೊಡುಗೆ ದೊಡ್ಡದಿದೆ ಎಂದು ತಿಳಿಸಿದರು.

ಸಿದ್ದರಾಮೇಶ್ವರ ಸಮಾಜದ ಅಧ್ಯಕ್ಷ ಮಾಣಿಕರಾವ ವಾಡೇಕರ ಗಡವಂತಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಬೀದರ್ ಬಸವಗಿರಿ ಬಸವಸೇವಾ ಪ್ರತಿಷ್ಠಾನದ ಅಕ್ಕ ಡಾ.ಗಂಗಾಂಬಿಕಾ ಅವರು ಅನುಭಾವ ನೀಡಿದರು.

ಜಿಲ್ಲಾ ಸರಕಾರಿ ನೌಕರರ ಸಂಘದ ಅಧ್ಯಕ್ಷ ಸೋಮಶೇಖರ ಬಿರಾದಾರ್(ಚಿದ್ರಿ) ಕಾರ್ಯಕ್ರಮ ಉದ್ಘಾಟಿಸಿದರು.

ವಿಜಯಲಕ್ಷ್ಮಿ ಸಂಗಮೇಶ ಬಿರಾದಾರ್ ಗ್ರಂಥ ಪಠಣ ಮಾಡಿದರು. ಈ ಸಂದರ್ಭದಲ್ಲಿ ಸಿದ್ದರಾಮೇಶ್ವರ ಜಯಂತಿ ಅಧ್ಯಕ್ಷ ರಾಜಕುಮಾರ ಹಣಮಂತ ಸಿಂಧೆ, ಸಂಜುಕುಮಾರ ಸಿಂಧೆ, ಚನ್ನಬಟ್ಟೆ ಕಲ್ಲಪ್ಪ ಸಿದ್ದಪ್ಪ ಸೇರಿದಂತೆ ಹಲವರು ಇದ್ದರು. ಶ್ರೀದೇವಿ ಶಾಂತಯ್ಯ ಸ್ವಾಮಿ ವಚನ ಗಾಯನ ನಡೆಸಿಕೊಟ್ಟರು. ದೀಪಕ ಠಮಕೆ ನಿರೂಪಿಸಿದರು.

### ಸಾಧಕರಿಗೆ ಸನ್ಮಾನ

ಇದೇ ವೇಳೆ ಶಿಕ್ಷಣ, ಸಾಮಾಜಿಕ, ಪತ್ರಿಕಾ ಮತ್ತು ರಾಜಕೀಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸಾಧಕರನ್ನು ಗುರುತಿಸಿ ಹಿರೇಮಠ ಸಂಸ್ಥಾನದ ವತಿಯಿಂದ ಸನ್ಮಾನಿಸಲಾಯಿತು. ಹಿರಿಯ ಪತ್ರಕರ್ತ ಅಪ್ಪಾರಾವ ಸೌಧಿ, ರಾಷ್ಟ್ರೀಯ ಜನಪದ ಬುಡಕಟ್ಟು ಕಲಾ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ರಾಜಕುಮಾರ ಹೆಬ್ಬಾಳೆ, ನಿವೃತ್ತ ಕಾರ್ಯನಿರ್ವಾಹಕ ಅಭಿಯಂತರ ಶಿವಕುಮಾರ ತಳವಾಡೆ, ಜಿಲ್ಲಾ ಸರಕಾರಿ ನೌಕರರ ಸಂಘದ ಗೌರವಾಧ್ಯಕ್ಷ ಸೂರ್ಯಕಾಂತ ಬಿರಾದಾರ್, ಅಧ್ಯಕ್ಷ ಸೋಮಶೇಖರ ಬಿರಾದಾರ್(ಚಿದ್ರಿ), ತಾಲೂಕು ಅಧ್ಯಕ್ಷ ಚಂದ್ರಶೇಖರ ಬನ್ನಾಳೆ, ಪ್ರಧಾನ ಕಾರ್ಯದರ್ಶಿ ರಾಜಪ್ಪ ಪಾಟೀಲ್, ಚನ್ನಬಟ್ಟೆ ಕಲ್ಲಪ್ಪ ಸಿದ್ದಪ್ಪ, ಅರ್ಬನ್ ಬ್ಯಾಂಕ್ ನಿರ್ದೇಶಕ ಅನಿಲ ಲೋಖಂಡೆ ಅವರನ್ನು ಪೂಜ್ಯರು ಸನ್ಮಾನಿಸಿ, ಅಭಿನಂದಿಸಿದರು.

## ಸಾರಿಗೆ ಘಟಕದಲ್ಲಿ ಚಾಲಕರ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ: ಪಟ್ಟಣದ ಸಾರಿಗೆ ಘಟಕದಲ್ಲಿ ಚಾಲಕರ ದಿನಾಚರಣೆ ಪ್ರಯುಕ್ತ ಚಾಲಕರ ದಿನವನ್ನು ಶುಕ್ರವಾರ ಆಚರಣೆ ಮಾಡಲಾಯಿತು. ದಿನಾಚರಣೆ ನಿಮಿತ್ಯ ಬಸ್ ಗಳನ್ನು ಸಿಂಗರಿಸಲಾಗಿತ್ತು. ಹಾಜರಿದ್ದ ಪ್ರತಿ ಚಾಲಕರಿಗೂ ಗುಲಾಬಿ ಹೂ ನೀಡಿ ಆರತಿ ಎತ್ತಿ, ಪುಷ್ಪವೃಷ್ಟಿ ಮಾಡಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಘಟಕ ವ್ಯವಸ್ಥಾಪಕ ಎ.ಬಿ.ಭೋವಿ ಮಾತನಾಡಿ ಈ ನಮ್ಮ ಸಂಸ್ಥೆಯಲ್ಲಿ ಹಗಲಿರುಳೆನ್ನದೆ ದುಡಿಯುವ ಚಾಲಕರ ಸೇವೆ ಅನನ್ಯವಾದುದು ಚಾಲಕರನ್ನು ಗೌರವಿಸಿ ಸನ್ಮಾನಿಸುವುದು ನಮಗೆ ಹೆಮ್ಮೆಯೆನಿಸುತ್ತದೆ ಎಂದರು. ಈ ಸಂದರ್ಭದಲ್ಲಿ, ಸಂಚಾರಿ ನಿರೀಕ್ಷಕರುಗಳಾದ ಲಿಂಗನಗೌಡ ಬಿರಾದಾರ, ಸುಭಾಸಚಂದ್ರ ಆಲ್ಯಾಳ, ಪಾರುಪತ್ಯೆಗಾರ ತಾರಾಸಿಂಗ ರಾಠೋಡ, ಲೆಕ್ಕಪತ್ರ ಮೇಲ್ವಿಚಾರಕ ಡಿ.ಎಂ.ನಧಾಪ, ಚಾಲಕರು, ನಿರ್ವಾಹಕರು, ತಾಂತ್ರಿಕ ಸಿಬ್ಬಂದಿ ಆಡಳಿತ ಸಿಬ್ಬಂದಿ ಹಾಜರಿದ್ದರು.

## ಮಹಾಸಬಾಕ್ಕೆ ಹಲವರ ನೇಮಕ ಸಂಘಟನೆ ಆನೆಬಲ : ಸುರೇಶ ಜಾಕಾ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಅಖಿಲ ಭಾರತ ವೀರಶೈವ ಮಹಾಸಭಾ ರಾಷ್ಟ್ರೀಯ ಘಟಕದ ಪದಾಧಿಕಾರಿಗಳನ್ನು ಮತ್ತು ರಾಜ್ಯ ಯುವ ಘಟಕದ ಅಧ್ಯಕ್ಷರನ್ನು ಆಯ್ಕೆ ಮಾಡಿದ ರಾಷ್ಟ್ರೀಯ ಅಧ್ಯಕ್ಷರೂ ಆಗಿರುವ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರ ಕ್ರಮವನ್ನು ಸ್ವಾಗತಿಸಿರುವ ಮಹಾಸಭಾ ಜಿಲ್ಲಾ ಯುವ ಘಟಕದ ಅಧ್ಯಕ್ಷ ಸುರೇಶ ಜಾಕಾ, ರಾಜ್ಯದ ಎಲ್ಲೆಡೇ ಸಂಪೂರ್ಣ ಸಂಘಟನೆ ಮಾಡಿ ಉಳಿದ ಪದಾಧಿಕಾರಿಗಳ ಆಯ್ಕೆ ಅನುಕೂಲ ಆಗಿದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು,

ರಾಷ್ಟ್ರೀಯ ಘಟಕಕ್ಕೆ ನೇಮಕಾತಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಸಮಾಜದ ಅನೇಕರಿಗೆ ಅವಕಾಶ ನೀಡಿದ್ದು ಸಂಘಟನಗೆ ಬಲ ಬಂದಂತಾಗಿದೆ.

ಅದರಲ್ಲಿ ಸಚಿವರಾದ ಶರಣಬಸಪ್ಪ ದರ್ಶನಾಪುರ, ಈಶ್ವರ ಖಂಡ್ರೆ, ಸಮಾಜದ ಹಿರಿಯರಾದ ಗುರಮ್ಮ ಸಿದ್ದಾರೆಡ್ಡಿ, ಸಿದ್ದಾಮಪ್ಪ ಉಪ್ಪಿನ ಅವರಿಗೆ ಸ್ಥಾನ ನೀಡಿದ್ದು ಮತ್ತು ರಾಜ್ಯ ಯುವ ಘಟಕಕ್ಕೆ ಅಬ್ಬಿಗೆರೆ ಮನೋಹರ ಅವರನ್ನು ನೇಮಕ ಮಾಡಿದ್ದು ಸಂತಸ ತಂದಿದೆ ಎಂದು ಯುವ ಘಟಕದ ಅಧ್ಯಕ್ಷ ಸುರೇಶ ಜಾಕಾ ಹೇಳಿದ್ದಾರೆ.

## ಕೊಟ್ಟ ಸಾಲ ಮರು ಪಾವತಿಸದಿರುವುದಕ್ಕೆ ಯುವಕನ ಕೊಲೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಕೊಟ್ಟ ಸಾಲ ಮರು ಪಾವತಿಸದಿರುವುದಕ್ಕೆ ಯುವಕನನ್ನು ಕೊಲೆ ಮಾಡಿರುವ ಘಟನೆ ಯಾದಗಿರಿ ನಗರದ ಲಾಡಿಸ್‌ಗಲ್ಲಿಯಲ್ಲಿ ನಡೆದಿದೆ

ಖಾಸೀಂ ಅಲಿಯಾಸ್ ಬಿಲ್ಲಿ (28) ಮೃತ ವ್ಯಕ್ತಿ. 30 ಸಾವಿರ ಸಾಲ ಮರು ಪಾವತಿಸುವುದು ತಡವಾಗಿದಕ್ಕೆ ಖಾಸಿಂ ಮೇಲೆ ಯಾಸೀನ್ ಎಂಬಾತ ಹಲ್ಲೆ ಮಾಡಿದ್ದಾನೆ.

ಮೃತ ಖಾಸೀಂ ಯಾಸೀನ್ ಬಳಿ 30 ಸಾವಿರ ಸಾಲ ಪಡೆದಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ಜನವರಿ 19ರಂದು ಸಾಲ ಮರುಪಾವತಿಸುವಂತೆ ಖಾಸೀಂನನ್ನು ಯಾಸೀನ್ ಕೇಳಿದ್ದ. ಆದರೆ, ಸ್ವಲ್ಪ ದಿನ ಸಮಯ ನೀಡುವಂತೆ ವಿನಂತಿ ಮಾಡಿದ್ದನು. ಆದರೆ, ಖಾಸೀಂ ಮೇಲೆ ಯಾಸೀನ್ ಮಾರಣಾಂತಿಕ ಹಲ್ಲೆ ನಡೆಸಿದ್ದಾನೆ. ಬಳಿಕ ಖಾಸೀಂನನ್ನು ಯಾದಗಿರಿ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿತ್ತು. ಹೆಚ್ಚಿನ ಚಿಕಿತ್ಸೆಗಾಗಿ ಕಲಬುರಗಿಗೆ ರವಾನಿಸಲಾಗಿತ್ತು. ಕಲಬುರಗಿ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ಸ್ಪಂದಿಸದೇ ಖಾಸೀಂ ಸಾವನ್ನಪ್ಪಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಈ ಕುರಿತು ಮಾಹಿತಿ ನೀಡಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, 'ಯಾಸೀನ್ ಬಳಿ ಖಾಸೀಂ 30 ಸಾವಿರ ಸಾಲ ಪಡೆದಿದ್ದ. ಆದರೆ, ಹಿಂತಿರುಗಿಸಿಲ್ಲ. ಈ ಕಾರಣಕ್ಕೆ ಹಲ್ಲೆ ನಡೆದಿದೆ. ಪ್ರಕರಣ ಸಂಬಂಧ ಆರೋಪಿಯನ್ನು ವಶಕ್ಕೆ ಪಡೆಯಲಾಗಿದೆ. ನಾಲ್ಕು ದಿನಗಳ ನಂತರ ಖಾಸೀಂ ಸಾವನ್ನಪ್ಪಿದ್ದಾನೆ' ಎಂದು ತಿಳಿಸಿದರು. ಆರೋಪಿ ಯಾಸೀನ್ ವಿರುದ್ಧ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪೌರಾಯುಕ್ತರ ವಿರುದ್ಧ ಕ್ರಮಕ್ಕೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ನಗರಸಭೆಯ ನಗರ ಆಶ್ರಯ ಸಮಿತಿಗೆ ಸದಸ್ಯರಾಗಿ ನೇಮಕಗೊಂಡಿರುವ ನಾಲ್ವರು ಸದಸ್ಯರನ್ನು ಇದುವರೆಗೂ ಅಧಿಕಾರ ಸ್ವೀಕಾರ ಮತ್ತು ಪ್ರತಿಜ್ಞಾ ವಿಧಿ ಕಾರ್ಯಕ್ರಮ ನಡೆಸದ ಹಾಗೂ ನಗರಸಭೆ ನೂತನ ಕಟ್ಟಡದ ಉದ್ಘಾಟನಾ ಸಮಾರಂಭದಲ್ಲಿ ಶಿಷ್ಟಾಚಾರ ಉಲ್ಲಂಘಿಸಿದ ಪೌರಾಯುಕ್ತರ ವಿರುದ್ಧ ಸೂಕ್ತ ಕ್ರಮ ಜರುಗಿಸುವಂತೆಯೇ ನಾಮ ನಿರ್ದೇಶನಗೊಂಡ ಸದಸ್ಯರು ಜಿಲ್ಲಾಧಿಕಾರಿ ಹಾಗೂ ಶಾಸಕರಿಗೆ ಮನವಿ ಸಲ್ಲಿಸಿದ್ದಾರೆ.

ಕಳೆಸ 2024 ಸೆ.13 ರಂದು ಸರ್ಕಾರ ನಮ್ಮನ್ನು ನೇಮಕ ಮಾಡಿದೆ, ಅಲ್ಲಿಂದ ಇಲ್ಲಿಯವರೆಗೂ ನಮಗೆ ಯಾವುದೇ ರೀತಿಯಿಂದಲ್ಲೂ ಮಾನ್ಯತೆ ಮಾಡಿಕೊಂಡಿಲ್ಲ. ಈ ಬಗ್ಗೆ ಅನೇಕ ಸಲ ವಿಚಾರಿಸಿದಾಗ ಸುಳ್ಳು ನೆಪ ಹೇಳಿ ಜಾರಿಕೊಂಡ ಪೌರಾಯುಕ್ತರು, ನಗರಸಭೆ ಕಟ್ಟಡದ ಉದ್ಘಾಟನೆ ವೇಳೆ ಸ್ವಾಗತಿಸಿ ಅಧಿಕಾರ ಸ್ವೀಕಾರ ಪ್ರತಿಜ್ಞಾ ವಿಧಿ ಕಾರ್ಯಕ್ರಮ ಮಾಡಿಸುವ ಭರವಸೆ ನೀಡಿದ್ದನ್ನು ಸಹ ಉಲ್ಲಂಘಿಸಿದ್ದಾರೆಂದು

ಆಶ್ರಯ ಸಮಿತಿ ಸದಸ್ಯರಾದ ಪ್ರಭಾಕರ ಜಿ., ಆರತಿ ಅಂಬರೀಷ ಜಾಕಾ, ಶಿವಕುಮಾರ ಮತ್ತು ಇಮುನವೆಲ್ ಕ್ರಿಷ್ಟಫರ್ ಆರೋಪಿಸಿದ್ದಾರೆ. ಆಮಂತ್ರಣ ಪತ್ರಿಕೆಯಲ್ಲಿ ಶಿಷ್ಟಾಚಾರದಂತೆಯೇ ತಮ್ಮ ಹೆಸರು ಹಾಕಿಲ್ಲ ಮತ್ತು ಕಾರ್ಯಕ್ರಮಕ್ಕೂ ಆಹ್ವಾನಿಸಿಲ್ಲ, ಬದಲಿಗೆ ಶಿಷ್ಟಾಚಾರ ವ್ಯಾಪ್ತಿಗೆ ಒಳಪಡದ ರಾಜಕೀಯ ವ್ಯಕ್ತಿಗಳಿಗೆ ವೇದಿಕೆಯಲ್ಲಿ ಕೂಡಿಸಿದ್ದಾರೆಂದು ಗಂಭಿರ ಆರೋಪ ಮಾಡಿದ್ದಾರೆ. ಈಗಲೂ ಇನ್ನೂ ಸುಳ್ಳು ಹೇಳಿ ಕಾಲ ನೂಕುತ್ತಿರುವ ಪೌರಾಯುಕ್ತರ ಮೇಲೇ ಕೂಡಲೇ ಕ್ರಮ ಜರುಗಿಸಬೇಕೆಂದು ಅವರು ಆಗ್ರಹಿಸಿದ್ದಾರೆ.

## 76ನೇ ಗಣರಾಜ್ಯೋತ್ಸವ ಅಂಗವಾಗಿ ಫಲ ಪುಷ್ಪ ಪ್ರದರ್ಶನ ಮೇಳ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನವರಿ 24- ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯಾದಗಿರಿ ತೋಟಗಾರಿಕೆ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಂಯುಕ್ತಾಶ್ರಯದಲ್ಲಿ 76ನೇ ಗಣರಾಜ್ಯೋತ್ಸವ ಅಂಗವಾಗಿ ಫಲ ಪುಷ್ಪ ಪ್ರದರ್ಶನವನ್ನು 2025ರ ಜನವರಿ 26ರ ಭಾನುವಾರ ರಂದು ಬೆಳಿಗ್ಗೆ 11 ಗಂಟೆಗೆ ಯಾದಗಿರಿ ಲುಂಬಿನಿ ಗಾರ್ಡನ್‌ದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು 76ನೇ ಗಣರಾಜ್ಯೋತ್ಸವ ಅಂಗವಾಗಿ ಫಲ ಪುಷ್ಪ ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸುವರು.

ಕರ್ನಾಟಕ ಸರ್ಕಾರ ಗಣಿ ಭೂವಿಜ್ಞಾನ ಮತ್ತು ತೆ-ೂೀಟಗಾರಿಕೆ ಸಚಿವರಾದ ಶ್ರೀ ಎಸ್.ಎಸ್.ಮಲ್ಲಿಕಾರ್ಜುನ ಹಾಗೂ ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ ಅವರ ಘನ ಉಪಸ್ಥಿತಿಯಲ್ಲಿ ನೆರವೇರಿಸುವರು.

ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅಧ್ಯಕ್ಷತೆ ವಹಿಸುವರು. ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ, ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ರಾಜಾ ವೇಣುಗೋಪಾಲ ನಾಯಕ, ಅತಿಥಿಗಳಾಗಿ ಪಾಲ್ಗೊಳ್ಳುವರು.

ಬೆಂಗಳೂರು ತೆ-ೂೀಟಗಾರಿಕೆ ಹಾಗೂ ರೇಷ್ಮೆ ಇಲಾಖೆ ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ಡಾ.ಶಮ್ಲಾ ಇಕ್ಬಾಲ್, ಬೆಂಗಳೂರು ಲಾಲ್‌ಬಾಗ್ ತೋಟಗಾರಿಕೆ ಇಲಾಖೆ ನಿರ್ದೇಶಕರು ಶ್ರೀ ಡಿ.ಎಸ್.ರಮೇಶ, ಬೆಂಗಳೂರು ರಾಷ್ಟ್ರೀಯ ತೋಟಗಾರಿಕೆ ಮಿಷನ್ ಲಾಲ್‌ಬಾಗ್ ಕಾರ್ಯನಿರ್ವಾಹಕ ನಿರ್ದೇಶಕರು ಶ್ರೀ ಕಾಂತೇಶ್ವರ ದುಂಡಿ, ಬೆಂಗಳೂರು ತಾಳೆಬೆಳೆ ಲಾಲ್‌ಬಾಗ್ ತೋಟಗಾರಿಕಾ ಅಪರ ನಿರ್ದೇಶಕರು ಡಾ.ಪಿ.ಎಂ.ಸೊಬರದ, ಯಾದಗಿರಿ ಜಿಲ್ಲೆ ನೋಡಲ್ ಅಧಿಕಾರಿಗಳು ಹಾಗೂ ಉದ್ಯಾನವನಗಳು ಮತ್ತು ತೋಟಗಳು ಹಾಗೂ ತೋಟಗಾರಿಕಾ ಜಂಟಿ ನಿರ್ದೇಶಕರು ಶ್ರೀ ಜಗದೀಶ ಎಂ, ಕಲಬುರಗಿ ವಿಭಾಗ ತೋಟಗಾರಿಕಾ ಜಂಟಿ ನಿರ್ದೇಶಕರು ಶ್ರೀ ಮಂಜುನಾಥ ನಾರಾಯಣಪೂರ ವಿಶೇಷ ಆಹ್ವಾನಿತರಾಗಿ ಆಗಮಿಸುವರು.

ಕಾರ್ಯಕ್ರಮಕ್ಕೆ ಮಾಧ್ಯಮ ಮಿತ್ರರು ಹಾಗೂ ಸರ್ವರೂ ಆಗಮಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಯಾದಗಿರಿ ಜಿಲ್ಲಾಧಿಕಾರಿಗಳು (ಪ್ರಭಾರಿ) ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಯಾದಗಿರಿ ತೋಟಗಾರಿಕೆ ಉಪನಿರ್ದೇಶಕರು ಶ್ರೀ ಅಜೀಮುದ್ದಿನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಥಪೂರ್ಣವಾಗಿ ಶ್ರೀ ಸವಿತಾ ಮಹರ್ಷಿ ಜಯಂತಿ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜ,24- ಶ್ರೀ ಸವಿತಾ ಮಹರ್ಷಿ ಜಯಂತಿಯನ್ನು ಇದೇ ಫೆಬ್ರವರಿ 4 ರಂದು ಜಿಲ್ಲಾಡಳಿತದ ವತಿಯಿಂದ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಶ್ರೀ ಸವಿತಾ ಮಹರ್ಷಿ ಜಯಂತಿ ಆಚರಣೆ ಕುರಿತ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಗಿದೆ.

ಸಭೆಯ ಅಧ್ಯಕ್ಷತೆ ವಹಿಸಿದ್ದ ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರು, ಅಂದು ಮಧ್ಯಾಹ್ನ 12 -30 ಗಂಟೆಗೆ ನಗರದ ಸರಕಾರಿ ಪದವಿ ಮಹಾವಿದ್ಯಾಲಯ ಸಭಾಂಗಣದಲ್ಲಿ ಈ ಕಾರ್ಯಕ್ರಮ ನಡೆಯಲಿದ್ದು, ಶಿಷ್ಟಾಚಾರದಂತೆ ಅತಿಥಿ ಗಣ್ಯರನ್ನು ಆಹ್ವಾನಿಸಲು, ವೇದಿಕೆ, ಆಹ್ವಾನ ಪತ್ರಿಕೆ ಸೇರಿದಂತೆ ಇನ್ನಿತರ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಅದರಂತೆ ಜಿಲ್ಲೆಯ ಎಲ್ಲ ಶಾಲಾ, ಕಾಲೇಜುಗಳಲ್ಲಿ, ಕಚೇರಿಗಳಲ್ಲಿ ಈ ಜಯಂತಿ ಆಚರಿಸಲು ಹಾಗೂ ತಾಲೂಕು ಮಟ್ಟದಲ್ಲಿ, ಈ ಜಯಂತಿಯನ್ನು ಆಚರಣೆಗೆ ಸಕಲ ಕ್ರಮಗಳನ್ನು ಕೈಗೊಳ್ಳಬೇಕು, ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಸೂಕ್ತ ಪೊಲೀಸ್ ಬಂದೋಬಸ್ತ ಮಾಡಲು ಹಾಗೂ ನುರಿತ ಉಪನ್ಯಾಸಕರನ್ನು ಜಿಲ್ಲಾ ಮಟ್ಟದಲ್ಲಿ ಕಾರ್ಯಕ್ರಮಕ್ಕೆ ಆಹ್ವಾನಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸಬೇಕು, ಜಿಲ್ಲೆಯ ಅಧಿಕಾರಿಗಳು, ಸಿಬ್ಬಂದಿಗಳು, ಆಯಾ ಸಮಾಜದ ಮುಖಂಡರು, ಸಂಘ ಸಂಸ್ಥೆಗಳವರು ತಪ್ಪದೇ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಅವರು ಸಲಹೆ ನೀಡಿದರು.

ಈ ಸಭೆಯಲ್ಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರದೇವಿ ಮಠಪತಿ, ಸವಿತಾ ಮಹರ್ಷಿ ಜಿಲ್ಲಾ ಸಂಘದ ಅಧ್ಯಕ್ಷ ಮಲ್ಲಣ್ಣ ವಡಗೇರಿ, ತಾಲೂಕ ಅಧ್ಯಕ್ಷ ಶ್ರೀನಿವಾಸ ಕಲ್ಮನಿ, ಜಿಲ್ಲಾ.ಸ. ಕಾರ್ಯದರ್ಶಿಗಳಾದ ಅಂಬಣ್ಣ ಹೊರುಂಚಾ, ಮಲ್ಲಿಕಾರ್ಜುನ ಮಲ್ಹಾರ, ಉಪಾಧ್ಯಕ್ಷ ಅಶೋಕ ಗೌನಳ್ಳಿ, ಇತರರು ಉಪಸ್ಥಿತರಿದ್ದರು.

## ನೋಂದಾಯಿತ ಎನ್.ಜಿ.ಓ.ಗಳಿಂದ ಸಲಹೆ ಸೂಚನೆಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನವರಿ 24- 2025-26ನೇ ಸಾಲಿನ ಆಯ-ವ್ಯಯ (ಬಜೆಟ್) ಎರಡನೇ ಸುತ್ತಿನ ಪೂರ್ವಭಾವಿ ಸಭೆಯನ್ನು 2025ರ ಜನವರಿ 28 ರಂದು ಬೆಳಿಗ್ಗೆ 11 ಗಂಟೆಗೆ ನಗರಸಭೆ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಶಹಾಪೂರ ನಗರಸಭೆ ಪೌರಾಯುಕ್ತರು ಅವರು ತಿಳಿಸಿದ್ದಾರೆ. ಎರಡನೇ ಸುತ್ತಿನ ಪೂರ್ವಭಾವಿ ಸಭೆಯ ನಿಮಿತ್ಯ ಈ ಬಜೆಟ್ ಪೂರ್ವಭಾವಿ ಸಭೆಗೆ ಶಹಾಪೂರ ನಗರದ ಸಂಘ ಸಂಸ್ಥೆಗಳು, ನೋಂದಾಯಿತ ಎನ್.ಜಿ.ಓ.ಗಳು ಮತ್ತು ಸಾರ್ವಜನಿಕರು ಈ ಸಭೆಯಲ್ಲಿ ಭಾಗವಹಿಸಬೇಕು ತಮ್ಮ ಸೂಕ್ತ ಸಲಹೆ ಸೂಚನೆಗಳನ್ನು ನೀಡಲು ಸೂಚಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ.24 ರಂದು ಕೊರವಂಜಿ ಅದ್ದೂರಿ ಜಾತ್ರಾ ಮಹೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಇಂಡಿ: ತಾಲ್ಲೂಕಿನ ಸುಕ್ಷೇತ್ರ ಅಹಿರಸಂಗ ಮತ್ತು ಲಚ್ಯಾಣ ಗ್ರಾಮದ ಕೊರವಂಜಿ ಜಾತ್ರಾ ಮಹೋತ್ಸವ ಜನವರಿ– 24 ರಂದು ಜರುಗಲಿದ್ದು ಶಾಸಕ ಯಶವಂತರಾಯಗೌಡಪಾಟೀಲ್ ಉದ್ಘಾಟನೆಗೊಳಿಸಿಲಿದ್ದಾರೆ.

ಕುದರಿ ಗೋಡಿಹಾಳ, ನಾಯೊಡಿ ವಸ್ತಿಯ ಮದ್ಯದಲ್ಲಿ ಲಚ್ಯಾಣದಿಂದ ಇಂಡಿಯರಸ್ತೆಯ, ಅಹಿರಸಂಗ ಹಾಗೂ ಆಳೂರ ಗೇಟ್ ಹತ್ತೀರುವ ಇರುವ ಕೊರವಂಜಿದೇವಿ ಜಾತ್ರಾ ಮಹೋತ್ಸವ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ಜರುಗಲಿದೆ ಎಂದು ಪತ್ರಿಕಾ ಪ್ರಕಟಣೆಗೆ ಜಾತ್ರಾ ಕಮಿಟಿ ಆಡಳಿತ ಮಂಡಳಿ ಅವರು ಮಾಹಿತಿ ನೀಡಿದ್ದಾರೆ.

ಬೆಳಿಗ್ಗೆ ಕೊರವಂಜಿದೇವಿಗೆ ಪಂಚಾಮೃತ್ ಅಭಿಷೇಕ, ಉಡಿತುಂಬುವ,ಮುತ್ತೈದರಿಂದ ಅಂಬಲಿ ಬಿಂದಗಿ ಕಾರ್ಯಕ್ರಮ ಜರಗುವುದು. ನಂತರ 1001 ಮುತ್ತೈದೇಯರಿಗೆ ಉಡಿ ತುಂಬುವ ಕಾರ್ಯಕ್ರಮ ಪೂಜ್ಯ ಡಾ. ವೃಷಭಲಿಂಗ ಮಹಾಶಿವಯೋಗಿಗಳು ಬಂಥನಾಳ, ಶ್ರೀ ಷ ಬ್ರ ಅಭಿನವ ರಾಚೋಟೇಶ್ವರ ಶಿವಾಚಾರ್ಯರರು ತಡವಲಗಾ, ಶ್ರೀ ಷ.ಬ್ರ ಮಲ್ಲಿಕಾರ್ಜುನ ಶಿವಾಚಾರ್ಯರರು ಅವರಿಂದ ಜರುಗುವುದು. ಬೆಳಿಗ್ಗೆ 10 ಘಂಟೆಗೆ ಸುಮಿತ್ರಾ ಮುಗಳಿಹಾಳ ಮಾಳಿಂಗರಾಯ ಗಾಯನ ಸಂಘ, ಸವದತ್ತಿ ತಾಲೂಕು, ಬೆಳಗಾಂವಿ ಜಿಲ್ಲೆ ಹಾಗೂ ಸುಚಿತ್ರಾ ಬಸನಾಳ ಶ್ರೀ ಗುರು ಅಮೋಘಸಿದ್ದ ಗಾಯನ ಸಂಘ ಬಸನಾಳ, ಇಂಡಿ ತಾಲೂಕು, ವಿಜಯಪುರ ಜಿಲ್ಲೆ ಇವರಿಂದ ಸುಪ್ರಸಿದ್ಧ ಡೊಳ್ಳಿನ ಪದ ಜರಗುವುದು ಎಂದು ತಿಳಿಸಿದರು.

ದಿವ್ಯಸಾನಿಧ್ಯೆ ಡಾ.ವೃಷಭಲಿಂಗ ಮಹಾಶೀವಯೋಗಿಗಳು ಬಂಥನಾಳ ಹಾಗೂ ಲಚ್ಯಾಣ, ಸಾನಿಧ್ಯೆ ಅಭಿನವ ರಾಚೋಟೇಶ್ವರ ಶಿವಾಚಾರ್ಯರು ತಡವಲಗಾ ಹಾಗೂ ಉದ್ಘಾಟಕರಾಗಿ ಶಾಸಕ ಯಶವಂತರಾಯಗೌಡ ಪಾಟೀಲ, ಅಧ್ಯಕ್ಷತೆ ಎಮ್ ಆರ್ ಪಾಟೀಲ್, ಮುಖ್ಯ ಅತಿಥಿ ಹಸನಸಾಬ್ ಶೇಖ ಭಾಗವಹಿಸಲಿದ್ದಾರೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕೊರಂಜಿದೇವಿಯ ಆಶೀರ್ವಾದ ಪಡೆಯಬೇಕು ಎಂದು ರೇವಣಸಿದ್ದ ಹತ್ತಳ್ಳಿ ಮಾಹಿತಿ ನೀಡಿದರು.

# ರಾಷ್ಟ್ರ ಮಟ್ಟದಲ್ಲಿ ಎರಡನೆಯ ಸ್ಥಾನ ವಿದ್ಯಾರ್ಥಿನಿ ಸ್ಮಿತಾ ನಂದರಗಿ




ಮಲ್ಲಮ್ಮ ನುಡಿ ವಾರ್ತೆ

ಇಂಡಿ : ಪಟ್ಟಣದ ಸಾಯಿ ಪಬ್ಲಿಕ ಶಾಲೆಯ 7 ನೇ ತರಗತಿಯ ವಿದ್ಯಾರ್ಥಿನಿ ಸ್ಮಿಥಾ ನಂದರಗಿ 2024ನೇ ಸಾಲಿಗಾಗಿ ನಡೆದ 18 ನೇ ಅಂತರ ರಾಷ್ಟ್ರೀಯ ಮಟ್ಟದ ವಿಜ್ಞಾನ ಪ್ರತಿಭಾನ್ವೇಷಣೆ ಪರೀಕ್ಷೆಯಲ್ಲಿ ಭಾಗವಹಿಸಿ ರಾಷ್ಟ್ರಮಟ್ಟದಲ್ಲಿ ಎರಡನೆಯ ಸ್ಥಾನ ಪಡೆದಿದ್ದಾಳೆ. ತಾರಾ ಮಂಡಲದ ಗೌರವ ನಿರ್ದೇಶಕ ಚಳ್ಳಕೆರೆ ಯರಿಸ್ವಾಮಿ ಈ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ.




ಕರ್ನಾಟಕದ ಅತ್ಯಂತ ಜನಪ್ರಿಯ ಮತ್ತು ಪ್ರಭಾವಶಾಲಿ ಆಶ್ರಮ ಹಾಗೂ ಅಂಧರು, ಅನಾಥರು ಮತ್ತು ಬಡ ಮಕ್ಕಳ ಉನ್ನತಿಗಾಗಿ ಮೀಸಲಾದ ದತ್ತಿ ಸಂಸ್ಥೆಯಾದ ಗದಗಿನ ವೀರೇಶ್ವರ ಪುಣ್ಯಾಶ್ರಮದ ಸ್ವಾಮೀಜಿಗಳು ರಾಜ್ಯ ಬಿಜೆಪಿಯ ರೈತ ಮೋರ್ಚಾ ಅಧ್ಯಕ್ಷರಾದ ಎ. ಎಸ್.ಪಾಟೀಲ (ನಡಹಳ್ಳಿ) ಅವರನ್ನು ತಾಳಿಕೋಟೆ ತಾಲೂಕಿನ ಮಿಣಜಗಿ ಗ್ರಾಮಕ್ಕೆ ತೆರಳುವ ಮಾರ್ಗ ಮಧ್ಯೆ ಸನ್ಮಾನಿಸಿ , ಆಶೀರ್ವದಿಸಿದರು. (ಮಲ್ಲಮ್ಮ ನುಡಿ ಚಿತ್ರ)




ಬಸವಕಲ್ಯಾಣ :– ನಗರದ ವರವಟ್ಟೆ ಜೀವನಜ್ಯೋತಿ ಬಂಜೆತನ ನಿವಾರಣೆ ಮತ್ತು ತಾಯಿಯ ಆರೈಕೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಹೆಣ್ಣು ಮಕ್ಕಳ ದಿನಾಚರಣೆ ಅಂಗವಾಗಿ ಹೆಣ್ಣು ಮಗುವಿಗೆ ಜನ್ಮ ನೀಡಿದ ತಾಯಿಯಂದಿರಿಗೆ ಡಾ. ಪ್ರಿಯಾಂಕ ವರವಟ್ಟೆ ಅವರು ಸನ್ಮಾನಿಸಿ ಶುಭ ಕೋರಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ನಿವೃತ್ತ ಉಪನಿರ್ದೇಶಕರಾದ ಬಸವರಾಜ್ ವಿ ವರವಟ್ಟೆ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಲಕ್ಷ್ಮೀ ನಾರಾಯಣ ಆಂಜನೇಯ ದೇವಸ್ಥಾನಕ್ಕೆ ಭೇಟಿ ನೀಡಿದ ಶ್ರೀಮದುತ್ತರಾದಿ ಶ್ರೀ



ಮಲ್ಲಮ್ಮ ನುಡಿ ವಾರ್ತೆ

ವಿಜಯನಗರ: ಜಿಲ್ಲೆಯ ಹೊಸಪೇಟೆ ತಾಲೂಕಿನ ಮರಿಯಮ್ಮನಹಳ್ಳಿಗೆ ಉತ್ತರಾಧಿಮಠದ ಮಠಾಧೀಶರಾದ ಸತ್ಯಾತ್ಮತೀರ್ಥ ಪಾದಂಗಳವರು ಶ್ರೀಲಕ್ಷ್ಮೀನರಾಯಣಸ್ವಾಮಿ, ಶ್ರೀಆಂಜನೇಯಸ್ವಾಮಿ ದೇವಸ್ಥಾನಗಳಿಗೆ ಭೇಟಿನೀಡಿ ದೇವರ ದರ್ಶನ ಪಡೆದರು.

ಪಟ್ಟಣದ ಮಾರ್ಗವಾಗಿ ಸಂಚರಿಸುವ ವೇಳೆ,ಪ್ರತಿ ಬಾರಿಯೂ ಇವರ ಗುರುಗಳಾದ ನರಹರಿತೀರ್ಥರಿಂದ ಪ್ರತಿಷ್ಠಾಪನೆಗೊಂಡ ಉಭಯ ದೇವರುಗಳಿಗೆ ಮಂಗಳಾರತಿ ನೆರವೇರಿಸಿ,ದರ್ಶನಮಾಡುತ್ತಾರೆ.

ಇದೀಗ ಉಭಯ ದೇವರುಗಳ ದೇವಸ್ಥಾನಗಳಲ್ಲಿ ನಡೆದಿರುವ ಅಭಿವೃದ್ಧಿ ಕಾಮಗಾರಿಗಳ ಕುರಿತು, ದೇವಸ್ಥಾನದ ಸಮಿತಿಯ ಸದಸ್ಯರಿಂದ ಮಾಹಿತಿಪಡೆದು, ಕೆಲವು ಸಲಹೆಗಳನ್ನು ನೀಡಿದರು.

ನಂತರ ಜೋಡುರಥಗಳ ನಿರ್ಮಾಣದ ಕಾಮಗಾರಿಯ ಸ್ಥಳಕ್ಕೆ ಭೇಟಿ ನೀಡಿ, ರಥಗಳ ವಾಸ್ತುಶಿಲ್ಪ,ಎತ್ತರವನ್ನು ಕಂಡು ಮೂಕ ವಿಸ್ಮಿತರಾಗಿ, ಪ್ರಶಂಸೆ ವ್ಯಕ್ತಪಡಿಸಿದರು.

ಈ ಸಂಧರ್ಭದಲ್ಲಿ ವೇದವ್ಯಾಸ ಜೋಷಿ, ದೇವಸ್ಥಾನ ಸಮಿತಿಯ ಸದಸ್ಯರಾದ ಚಿದ್ರಿ ಸತೀಶ್, ಗೋವಿಂದರ ಪರಶುರಾಮ, ತಳವಾರದೊಡ್ಡರಾಮಣ್ಣ,ಸಜ್ಜೇದ ವಿಶ್ವನಾಥ, ಈ.ಯರಿಸ್ವಾಮಿ, ಎಲೆಗಾರ ಮಂಜುನಾಥ, ನರಸಿಂಹಮೂರ್ತಿ, ಸ್ಥಳಿಯ ಮುಖಂಡರಾದ ಎಂ.ವಿಶ್ವನಾಥಶೆಟ್ಟಿ, ಜಿ.ಸತ್ಯನಾರಾಯಣಶೆಟ್ಟಿ,ಕಲ್ಲಾಳ ಪರಶುರಾಮ,ಪ್ರಸಾದ್ ಜೋಷಿ, ಬಿ.ರುದ್ರಮುನಿ ಸೇರಿದಂತೆ ಇತರರಿದ್ದರು.

## ಸಂಭವನೀಯ ಅತಿವೃಷ್ಟಿ ಅನಾವೃಷ್ಟಿಗೆ ಮುಜಾಗ್ರತಾ ಕ್ರಮ ಅನುಸರಿಸಿ : ಅಜಯ ಕುಮಾರ್

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಸಂಭವನೀಯ ಅತಿವೃಷ್ಟಿ, ಅನಾವೃಷ್ಟಿಗೆ ಮುಂಜಾಗ್ರತಾ ಕ್ರಮ ಅನುಸರಿಸಬೇಕು ಎಂದು ಎನ್.ಡಿ.ಆರ್.ಎಫ್ ಇನ್ನಿಫೆಕ್ಟರ್ ಅಜಯ ಕುಮಾರ್ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಆನೆಗೊಂದಿ ಗ್ರಾಮದ ಸರಕಾರಿ ಪ್ರೌಢಶಾಲೆ ಆವರಣದಲ್ಲಿ ನಡೆದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಬೆಟಾಲಿಯನ್ 10ನೇ ತಂಡದಿಂದ ವಿಪತ್ತು ನಿರ್ವಹಣೆಯ ಅಣುಕು ಪ್ರದರ್ಶನ ಹಾಗೂ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಬೆಟಾಲಿಯನ್ 10ನೇ ತಂಡದಿಂದ ಸಂಭವನೀಯ ವಿಪತ್ತು, ಪ್ರವಾಹ ಸ್ಥಳಗಳಿಗೆ ಆಗಮಿಸಿ ಸಮುದಾಯ ಜಾಗೃತಿ ಕಾರ್ಯಕ್ರಮ ಮಾಡುತ್ತಿದ್ದೇವೆ. ಕೊಪ್ಪಳ ಜಿಲ್ಲೆಯ ನದಿ ಪಾತ್ರದ ಗ್ರಾಮಗಳಲ್ಲಿ ಹಾಗೂ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಗುತ್ತಿದೆ.ಸಂಭವನೀಯ ಅತಿವೃಷ್ಟಿ ಹಾಗೂ ಅನಾವೃಷ್ಟಿ ಗ್ರಾಮಗಳಲ್ಲಿ ಮುಂಜಾಗ್ರತಾ ಕ್ರಮಗಳನ್ನು ತಿಳಿದುಕೊಳ್ಳುವುದು ಅತ್ಯವಶ್ಯಕವಾಗಿದೆ ಎಂದರು.

ಪ್ರಕೃತಿ ವಿಕೋಪ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಪ್ರಥಮ ಚಿಕಿತ್ಸೆ, ಪ್ರವಾಹ ರಕ್ಷಣೆ, ಪ್ರಕೃತಿ ವಿಕೋಪದಿಂದ ಆಗುವ ಅನಾಹುತ, ಅನಿಲ ಸೋರಿಕೆ ತಡೆಗಟ್ಟುವಿಕೆ, ಸುನಾಮಿ, ಭೂಕಂಪ, ಅಗ್ನಿ ಅವಘಡ ಹಾಗೂ ಸಿಡಿಲು ಬಡಿತದಿಂದ ರಕ್ಷಣೆ ಸೇರಿದಂತೆ ಕಟ್ಟಡ ಕುಸಿತ, ರಾಸಾಯನಿಕ ಪದಾರ್ಥಗಳಿಂದ ಆಗುವ ಅನಾಹುತಗಳು ಮತ್ತು ಇನ್ನಿತರ ಅನಾಹುತಗಳಿಂದ ಸಾರ್ವಜನಿಕರು ಯಾವ ರೀತಿ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂಬುದರ ಕುರಿತು ಎನ್‌ಡಿಆರ್‌ಎಫ್ ತಂಡದ ಸದಸ್ಯರಾದ ವಜ್ರಚೇತನ ಅವರು ಮಾಹಿತಿ ನೀಡಿದರು. ಎನ್‌ಡಿಆರ್‌ಎಫ್ ತಂಡದ ಸದಸ್ಯರು ಹಾಗೂ ವಿದ್ಯಾರ್ಥಿಗಳಿಂದ ಅಣಕು ಪ್ರದರ್ಶನ ನೀಡಿ ಅರಿವು ಮೂಡಿಸಿದರು. ಆನೆಗೊಂದಿ ಗ್ರಾಪಂ ಅಧ್ಯಕರಾದ ಹುಲಿಗೆಮ್ಮ ಹೊನ್ನಪ್ಪನಾಯಕ ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದರು.ಗಂಗಾವತಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಲಕ್ಷ್ಮೀದೇವಿ, ಎನ್.ಡಿ.ಆರ್.ಎಫ್ ತಂಡದ ಎ.ಎಸ್.ಐ ಸೋಮ್ ಬಿರ್ ಕುಮಾರ್,ಗ್ರೇಡ್ 2 ತಹಸೀಲ್ದಾರ ಮಹಾಂತಗೌಡ್ರು, ಶಿರಸ್ತೆದಾರ ರವಿಕುಮಾರ ನಾಯಕವಾಡಿ, ಶಿಕ್ಷಣ ಇಲಾಖೆಯ ಟಿಪಿಓ (ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರು) ಉಮಾದೇವಿ ಪಾಟೀಲ್, ಆನೆಗೊಂದಿ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಬಸವರಾಜ ಗೌಡ್ರ, ಗ್ರಾಪಂ ಸದಸ್ಯರಾದ ಎಚ್.ಎಂ ಮಲ್ಲಿಕಾರ್ಜುನಸ್ವಾಮಿ ಹಾಗೂ ಸುಶೀಲಾಬಾಯಿ, ಕಂದಾಯ ನಿರೀಕ್ಷಕ ಬಸೀರುದ್ದಿನ್, ಶಾಲಾ ಮುಖ್ಯಶಿಕ್ಷಕರಾದ ವಿಜಯಕುಮಾರ್,ಎನ್.ಡಿ.ಆರ್. ಎಫ್ ತಂಡದ ಸದಸ್ಯರಾದ ವಜ್ರಚೇತನ,ಗಂಗಾಧರ ಚಿಕ್ಕೊಡಿ, ಕರುಣಾಮೂರ್ತಿ, ಶಶಿಕಾಂತ, ಗಂಗಾಧರ ಶಂಕರಪ್ಪ, ಗ್ರಾಪಂ ಕಾರ್ಯದರ್ಶಿ ಮನೋರಮ, ತಾಲೂಕ ಐಇಸಿ ಸಂಯೋಜಕ ಬಾಳಪ್ಪ ತಾಳಕೇರಿ, ಗ್ರಾಮ ಆಡಳಿತಾಧಿಕಾರಿ ಮಹಾಲಕ್ಷ್ಮಿ, ಕಂದಾಯ ಇಲಾಖೆ ಸಿಬ್ಬಂದಿಗಳು, ಗ್ರಾಪಂ ಸಿಬ್ಬಂದಿಗಳು, ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು ಇದೇ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಇಪಿಎಫ್‌ಒ: ಸದಸ್ಯರ ಪ್ರೊಫೈಲ್ ನವೀಕರಣಕ್ಕಾಗಿ ಆನ್‌ಲೈನ್ ಪ್ರಕ್ರಿಯೆ ಸರಳೀಕರಣ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.23:ನೌಕರರ ಭವಿಷ್ಯ ನಿಧಿ ಸಂಸ್ಥೆ(ಇಪಿಎಫ್‌ಒ)ಯು ತನ್ನ ಸದಸ್ಯರ ಸೇವೆಗಳನ್ನು ಸುಧಾರಿಸುವ ಮತ್ತು ಸದಸ್ಯರ ದತ್ತಾಂಶದ ನಿಖರತೆಯನ್ನು ಖಚಿತಪಡಿಸಿಕೊಳ್ಳಲು ಪ್ರೊಫೈಲ್ (ವೈಯಕ್ತಿಕ ವಿವರ) ಅನ್ನು ನವೀಕರಿಸುವ ಪ್ರಕ್ರಿಯೆಯನ್ನು ಸರಳೀಕರಣಗೊಳಿಸಿದೆ ಎಂದು ಬಳ್ಳಾರಿ ಪ್ರಾದೇಶಿಕ ಕಚೇರಿಯ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತರು ತಿಳಿಸಿದ್ದಾರೆ.ಪರಿಷ್ಕೃತ ಕಾರ್ಯವಿಧಾನದಡಿ ಯುನಿವರ್ಸಲ್ ಅಕೌಂಟ್ ನಂಬರ್ (ಯುಎಎನ್) ಅನ್ನು ಈಗಾಗಲೇ ಆಧಾರ್ ಮೂಲಕ ಮೌಲ್ಯೀಕರಿಸಿದ ಸದಸ್ಯರು ಯಾವುದೇ ದಾಖಲೆ ಅಪ್ಲೋಡ್ ಮಾಡುವ ಅಗತ್ಯವಿಲ್ಲದೆ ಹೆಸರು, ಹುಟ್ಟಿದ ದಿನಾಂಕ, ಲಿಂಗ, ರಾಷ್ಟ್ರೀಯತೆ, ತಂದೆ–ತಾಯಿಯ ಹೆಸರು, ವೈವಾಹಿಕ ಸ್ಥಿತಿ, ಸಂಗಾತಿಯ ಹೆಸರು, ಸೇರಿದ ದಿನಾಂಕ ಮತ್ತು ತೊರೆದ ದಿನಾಂಕಗಳನ್ನು ತಮ್ಮ ಪ್ರೊಫೈಲ್ ನಲ್ಲಿ ನವೀಕರಿಸಬಹುದು.1–10–2017 ಕ್ಕಿಂತ ಮೊದಲು ಯುಎಎನ್ ಪಡೆದ ಕೆಲವು ಸಂದರ್ಭಗಳಲ್ಲಿ ಮಾತ್ರ ನವೀಕರಣಕ್ಕೆ ಉದ್ಯೋಗದಾತರ ಪ್ರಮಾಣೀಕರಣ ಮಾತ್ರ ಅಗತ್ಯ ಇತ್ತು.ಸೇವೆಗಳನ್ನು ತಡೆರಹಿತವಾಗಿ ಒದಗಿಸಲಾಗಿದೆಯೆ ಎಂದು ಖಚಿತಪಡಿಸಿಕೊಳ್ಳಲು ಮತ್ತು ನಿಧಿಯಿಂದ ತಪ್ಪು/ಮೋಸದ ಪಾವತಿಯ ಅಪಾಯವನ್ನು ತಪ್ಪಿಸಲು ಇಪಿಎಫ್‌ಓ ಡೇಟಾಬೇಸ್ ನಲ್ಲಿ ಇಪಿಎಫ್ ಸದಸ್ಯರ ವೈಯಕ್ತಿಕ ಡೇಟಾದ ಸ್ಥಿರತೆ ಮತ್ತು ಸತ್ಯಾಸತ್ಯತೆ ಅತ್ಯಂತ ಮಹತ್ವದ್ದಾಗಿದೆ.ಸದಸ್ಯರ ವಿವರಗಳನ್ನು ಬದಲಾಯಿಸುವ ಅಥವಾ ಸರಿಪಡಿಸುವ ಯಾವುದೇ ಅಗತ್ಯವಿದ್ದರೆ, ಸದಸ್ಯರಿಗೆ ಅಗತ್ಯವಿರುವ ದಾಖಲೆಗಳನ್ನು ಅಪ್ಲೋಡ್ ಮಾಡಲು ಮತ್ತು ಅವರ ವಿನಂತಿಗಳನ್ನು ಆನ್‌ಲೈನ್ ನಲ್ಲಿ ಸಲ್ಲಿಸಲು ಈಗಾಗಲೇ ಒಂದು ಕಾರ್ಯಚಟುವಟಿಕೆಯನ್ನು ಒದಗಿಸಲಾಗಿದೆ.ಅಂತಹ ವಿನಂತಿಗಳನ್ನು ಉದ್ಯೋಗದಾತರು ಆನ್‌ಲೈನ್ ನಲ್ಲಿ ಅನುಮೋದಿಸುತ್ತಿದ್ದರು ಮತ್ತು ಅಂತಿಮ ಅನುಮೋದನೆಗಾಗಿ ಇಪಿಎಫ್‌ಒಗೆ ಕಳುಹಿಸುತ್ತಿದ್ದರು.2024–25ರ ಹಣಕಾಸು ವರ್ಷದಲ್ಲಿ ಉದ್ಯೋಗದಾತರ ಮೂಲಕ ತಿದ್ದುಪಡಿಗಾಗಿ ಇಪಿಎಫ್‌ಒನಲ್ಲಿ ಸ್ವೀಕರಿಸಿದ ಒಟ್ಟು 8 ಲಕ್ಷ ವಿನಂತಿಗಳಲ್ಲಿ, ಸುಮಾರು ಶೇ.45 ರಷ್ಟು ಬದಲಾವಣೆ ವಿನಂತಿಗಳನ್ನು ಉದ್ಯೋಗದಾತರ ಪರಿಶೀಲನೆ ಅಥವಾ ಇಪಿಎಫ್‌ಒ ಅನುಮೋದನೆ ಇಲ್ಲದೆ ಸದಸ್ಯರು ಸ್ವಯಂ ಅನುಮೋದಿಸಬಹುದು. ಇದು ಜಂಟಿ ಘೋಷಣೆಗಳನ್ನು (ಜೆಡಿ) ಅನುಮೋದಿಸಲು ಉದ್ಯೋಗದಾತರು ತೆಗೆದುಕೊಳ್ಳುವ ಸುಮಾರು 28 ದಿನಗಳ ವಿಳಂಬವನ್ನು ನಿವಾರಿಸುತ್ತದೆ. ಪೂರ್ಣ ಇ–ಕೆವೈಸಿ ಹೊಂದಿರದ ಇಪಿಎಫ್ ಖಾತೆದಾರರ ಬದಲಾವಣೆ, ತಿದ್ದುಪಡಿಯ ವಿನಂತಿಯನ್ನು ಇಪಿಎಫ್‌ಒನಲ್ಲಿ ಯಾವುದೇ ಅನುಮೋದನೆಯ ಅಗತ್ಯವಿಲ್ಲದೆ ಸರಿಸುಮಾರು ಶೇ.50 ರಷ್ಟು ಪ್ರಕರಣಗಳಲ್ಲಿ ಉದ್ಯೋಗದಾತರ ಮಟ್ಟದಲ್ಲಿ ಅನುಮೋದಿಸಲಾಗುತ್ತದೆ.ಈ ಪರಿಷ್ಕರಣೆಯು ವಿವಿಧ ಹಂತಗಳಲ್ಲಿ ಬಾಕಿ ಇರುವ ಸುಮಾರು 3.9 ಲಕ್ಷ ಸದಸ್ಯರಿಗೆ ತಕ್ಷಣವೇ ಪ್ರಯೋಜನವನ್ನು ನೀಡುತ್ತದೆ. ಸ್ವಯಂ ಅನುಮೋದಿಸಬಹುದಾದ ಯಾವುದೇ ಸದಸ್ಯರು ಈಗಾಗಲೇ ಉದ್ಯೋಗದಾತರೊಂದಿಗೆ ಬಾಕಿ ಇರುವ ತಮ್ಮ ವಿನಂತಿಯನ್ನು ಸಲ್ಲಿಸಿದ್ದರೆ, ಸದಸ್ಯರು ಈಗಾಗಲೇ ಸಲ್ಲಿಸಿದ ವಿನಂತಿಯನ್ನು ಅಳಿಸಬಹುದು ಮತ್ತು ಸರಳೀಕೃತ ಪ್ರಕ್ರಿಯೆಯ ಪ್ರಕಾರ ಸ್ವಯಂ ಅನುಮೋದನೆ ನೀಡಬಹುದು. ಹೆಚ್ಚಿನ ಪ್ರಕರಣಗಳನ್ನು ಸದಸ್ಯರೇ ನೇರವಾಗಿ ಸ್ವಯಂ ಅನುಮೋದಿಸಬಹುದು ಅಥವಾ ಕೆಲವು ಆಯ್ದ ಸಂದರ್ಭಗಳಲ್ಲಿ ಉದ್ಯೋಗದಾತರು ಸ್ವಯಂ ಅನುಮೋದಿಸಬಹುದು.ಪ್ರಸ್ತುತ ಸದಸ್ಯರು ಸಲ್ಲಿಸಿದ ಸುಮಾರು ಶೇ.27ರಷ್ಟು ಕುಂದುಕೊರತೆಗಳು ಸದಸ್ಯರ ಪ್ರೊಫೈಲ್ / ಕೆವೈಸಿ ಸಮಸ್ಯೆಗಳಿಗೆ ಸಂಬಂಧಿಸಿವೆ ಮತ್ತು ಪರಿಷ್ಕೃತ ಜೆಡಿ ಕಾರ್ಯವನ್ನು ಪರಿಚಯಿಸುವುದರೊಂದಿಗೆ,ಸದಸ್ಯರು ಸಲ್ಲಿಸುವ ಕುಂದುಕೊರತೆಗಳ ಸಂಖ್ಯೆಯಲ್ಲಿ ತೀವ್ರ ಇಳಿಕೆಯಾಗಲಿದೆ ಎಂದು ನಿರೀಕ್ಷಿಸಲಾಗಿದೆ. ಆನ್‌ಲೈನ್ ಪ್ರಕ್ರಿಯೆಯಲ್ಲಿನ ಈ ಸರಳೀಕರಣವು ಸದಸ್ಯರ ವಿನಂತಿಗಳನ್ನು ತಕ್ಷಣವೇ ತೆರವುಗೊಳಿಸಲು ಅನುವು ಮಾಡಿಕೊಡುತ್ತದೆ, ದತ್ತಾಂಶ ಸ್ಥಿರತೆಯನ್ನು ಖಚಿತಪಡಿಸುತ್ತದೆ, ದೋಷಗಳ ಅಪಾಯವನ್ನು ಕಡಿಮೆ ಮಾಡುತ್ತದೆ ಮತ್ತು ಸದಸ್ಯರಿಗೆ ಪರಿಣಾಮಕಾರಿ ಸೇವಾ ವಿತರಣೆಯನ್ನು ಮಾಡುತ್ತದೆ ಮತ್ತು ಜೀವನವನ್ನು ಸುಲಭಗೊಳಿಸುತ್ತದೆ. ಅದೇ ಸಮಯದಲ್ಲಿ ಅಂತಹ ವಿವರಗಳ ಪರಿಶೀಲನೆಗಾಗಿ ಉದ್ಯೋಗದಾತರ ಕಡೆಯಿಂದ ಹೆಚ್ಚುವರಿ ಕೆಲಸದ ಹೊರೆಯನ್ನು ತಪ್ಪಿಸುವ ಮೂಲಕ, ಸರಳೀಕೃತ ಪ್ರಕ್ರಿಯೆಯು ವ್ಯವಹಾರವನ್ನು ಸುಲಭಗೊಳಿಸುವುದನ್ನು ಗಣನೀಯವಾಗಿ ಸುಧಾರಿಸುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಡಿವಾಳ ಮಾಚಿದೇವರ ಜಯಂತಿ ಅರ್ಥಪೂರ್ಣವಾಗಿ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜ,24– ಮಡಿವಾಳ ಮಾಚಿದೇವರ ಜಯಂತಿಯನ್ನು ಬರುವ ಫೆಬ್ರುವರಿ 1 ರಂದು ಜಿಲ್ಲಾಡಳಿತದವತಿಯಿಂದ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ. ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಮಡಿವಾಳ ಮಾಚಿದೇವರ ಜಯಂತಿ ಆಚರಣೆ ಕುರಿತ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಗಿದೆ.

ಸಭೆಯ ಅಧ್ಯಕ್ಷತೆ ವಹಿಸಿದ್ದ ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರು, ಅಂದು ಬೆಳಿಗ್ಗೆ 11–30 ಗಂಟೆಗೆ ನಗರದ ಸರ್ಕಾರಿ ಪದವಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ಈ ಕಾರ್ಯಕ್ರಮ ನಡೆಯಲಿದ್ದು, ಶಿಷ್ಟಾಚಾರದಂತೆ ಅತಿಥಿ ಗಣ್ಯರನ್ನು ಆಹ್ವಾನಿಸಲು, ವೇದಿಕೆ, ಆಹ್ವಾನ ಪತ್ರಿಕೆ ಸೇರಿದಂತೆ ಇನ್ನಿತರ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.ಅದರಂತೆ ಜಿಲ್ಲೆಯ ಎಲ್ಲ ಶಾಲಾ, ಕಾಲೇಜುಗಳಲ್ಲಿ, ಕಚೇರಿಗಳಲ್ಲಿ ಈ ಜಯಂತಿ ಆಚರಿಸಲು ಹಾಗೂ ತಾಲೂಕು ಮಟ್ಟದಲ್ಲಿ, ಈ ಜಯಂತಿ ಆಚರಣೆಗೆ ಸಕಲ ಕ್ರಮಗಳನ್ನು ಕೈಗೊಳ್ಳಬೇಕು, ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಸೂಕ್ತ ಪೊಲೀಸ್ ಬಂದೋಬಸ್ತ ಮಾಡಲು ಹಾಗೂ ನುರಿತ ಉಪನ್ಯಾಸಕರನ್ನು ಜಿಲ್ಲಾಮಟ್ಟದಲ್ಲಿ ಕಾರ್ಯಕ್ರಮಕ್ಕೆ ಆಹ್ವಾನಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸಬೇಕು. ಜಿಲ್ಲೆಯ ಅಧಿಕಾರಿಗಳು, ಸಿಬ್ಬಂದಿಗಳು, ಆಯಾ ಸಮಾಜದ ಮುಖಂಡರು, ಸಂಘ ಸಂಸ್ಥೆಗಳವರು ತಪ್ಪದೇ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಅವರು ಸಲಹೆ ನೀಡಿದರು. ಸಭೆಯಲ್ಲಿ , ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರದೇವಿ ಮಠಪತಿ,,ಸಮಾಜದ ಮುಖಂಡರಾದ ಮಡಿವಾಳ ಮಾಚಿದೇವ ಜಿಲ್ಲಾ ಸಂಘದ ಅಧ್ಯಕ್ಷ ಮಡಿವಾಳಪ್ಪ ಬಿಜಾಸ್ಪುರ, ತಾಲೂಕ ಅಧ್ಯಕ್ಷ ಶರಣು ಮಡಿವಾಳ, ರುದ್ರಲಿಂಗ ಮಡಿವಾಳ, ಮಲ್ಲಣ್ಣ.ಬಿ.,ಚನ್ನಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಆರೋಗ್ಯಕರ ಸಮಾಜದ ನಿರ್ಮಾಣ ಎಲ್ಲರ ಹೊಣೆ : ಸಿಪಿಐ ಅಲಿಸಾಬ್



ಮಲ್ಲಮ್ಮ ನುಡಿ ವಾರ್ತೆ.

ಬಸವಕಲ್ಯಾಣ : –ಶಾಂತಿ, ಸೌಹಾರ್ದತೆ,ಸಹಬಾಳ್ವೆನಡೆಸಲು ಇರಬೇಕಾದ ಆರೋಗ್ಯಕರ ಸಮಾಜದ ನಿರ್ಮಾಣ ಎಲ್ಲರ ಹೊಣೆಯಾಗಿದೆ ಎಂದು ಸಿ.ಪಿ.ಐ. ಅಲಿಸಾಬ್ ಹೇಳಿದರು.

ನಗರದ ಶ್ರೀ ಬಸವೇಶ್ವರ ಪದವಿ ಕಾಲೇಜಿನಲ್ಲಿ ಜರುಗಿದ 'ಸ್ವಾಸ್ಥ್ಯ ಸಮಾಜ ರೂಪಿಸುವಲ್ಲಿ ವಿದ್ಯಾರ್ಥಿಗಳ ಜವಾಬ್ದಾರಿ ' ಕುರಿತ ಉಪನ್ಯಾಸ ಸಮಾರಂಭ ಉದ್ಘಾಟಿಸಿ ಮಾತನಾಡಿ ವಿದ್ಯಾರ್ಥಿಗಳು ನಿರಂತರ ಓದಿನಲ್ಲಿ ನಿರತರಾಗಿ. ಅಧ್ಯಯನ ನಿಮ್ಮ ಭವಿಷ್ಯ ರೂಪಿಸುತ್ತದೆ ಎಂದರು.

ಈ ಕಾಲದಲ್ಲಿ ಸೈಬರ್ ಅಪರಾಧ ಹೆಚ್ಚುತ್ತಿದೆ. ಬೆಟ್ಟಿಂಗ್, ಆನ್ಲೈನ್ ಗೇಮ್ಸ್ ನ ಚಟದಿಂದ ಹಲವು ಯುವಕರು ಹಣ ಕಳೆದುಕೊಂಡಿದ್ದಾರೆ. ಸಾಲ ಮಾಡಿಕೊಳ್ಳುತ್ತಿದ್ದಾರೆ . ಖಿನ್ನತೆಗೆ ಒಳಗಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಸಮಾಜ, ದೇಶದ ಬೆಳವಣಿಗೆ ಭಾಗವಾಗಬೇಕಾದ ಯುವ ಜನಾಂಗ ಅಪರಾಧಗಳಲ್ಲಿ ಭಾಗಿಯಾಗದೆ ಉಜ್ವಲ ಭವಿಷ್ಯ ರೂಪಿಸಿಕೊಳ್ಳಿ ಎಂದರು.

ಯುವಜನತೆ. ವಯೋಸಹಜ ಆಕರ್ಷಣೆಗೆ ಒಳಗಾಗಿ, ಪ್ರೀತಿ ಪ್ರೇಮದ ಭ್ರಮೆಯಲ್ಲಿ ಬೀಳದೆ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅಧ್ಯಯನ ಮಾಡಿ. ಪರೀಕ್ಷೆ ಬರೆದು ಒಳ್ಳೆಯ ಉದ್ಯೋಗ ಪಡೆದು ಸ್ವಾವಲಂಬನೆಯ ಬದುಕು ಮಾಡಿಕೊಳ್ಳಿ. ನೈತಿ–ಕತೆ, ಸಾಮಾಜಿಕ ಜವಾಬ್ದಾರಿ, ಅಂತಃಕರಣ ಬೆಳೆಸಿಕೊಂಡು ಉತ್ತಮ ನಾಗರಿಕರಾಗಿ ಎಂದು ಸಲಹೆ ನೀಡಿದರು.

ನಗರ ಸಂಚಾರಿ ಪಿ. ಎಸ್.ಐ. ಸಿದ್ದೇಶ್ವರ ಅವರು ಮಾತನಾಡಿ, ಸಾಮಾಜಿಕ ಜಾಲತಾಣಗಳ ದುರುಪಯೋಗವಾಗದಂತೆ ಎಲ್ಲರಲ್ಲಿ ಎಚ್ಚರಿಕೆ ವಹಿಸಿ. ರಸ್ತೆ ಸುರಕ್ಷತೆಗಾಗಿ ಸಂಚಾರಿ ನಿಯಮ ಕಡ್ಡಾಯವಾಗಿ ಪಾಲಿಸಬೇಕು. ನಿಮ್ಮನ್ನು ನಂಬಿಕೊಂಡ, ಅವಲಂಬಿತರಾದ ನಿಮ್ಮ ಕುಟುಂಬದವರ ನೆನಪು ನಿಮಗಿರಲಿ. ಸಮಾಜದ ಸುರಕ್ಷತೆಗಾಗಿ ಎಲ್ಲರೂ ಕಾನೂನನ್ನು ಕಡ್ಡಾಯವಾಗಿ ಗೌರವಿಸಲೇಬೇಕು ಹಾಗೂ ಪಾಲಿಸಲೇ ಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಆಡಳಿತಾಧಿಕಾರಿ ಡಾ.ಮಲ್ಲಿಕಾರ್ಜುನ ಲಕಶೆಟ್ಟಿ ಮಾತನಾಡಿ ಕಾನೂನು, ಪೋಲಿಸ್ ಇಲಾಖೆ ಜನರ ಸಂರಕ್ಷಣೆ, ಸುರಕ್ಷತೆಗಾಗಿ ಇವೆ. ಸಮಾಜದಲ್ಲಿ ಎಲ್ಲರಿಗೂ ಭದ್ರತೆ, ರಕ್ಷಣೆ ಒದಗಿಸುವ ಸರ್ಕಾರದ ಬಹುದೊಡ್ಡ ಸಂಸ್ಥೆಗಳಾಗಿವೆ. ಕಾನೂನು ಉಲ್ಲಂಘಿಸಿದರೆ ಶಿಕ್ಷೆ ಖಚಿತ. ಅದರ ಕುರಿತು ಸಿಪಿಐ ಸಾಹೇಬರು ಇಂದು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಕೆಲಸ ಶ್ಲಾಘನೀಯ ಎಂದರು.

ಪ್ರಾಚಾರ್ಯರಾದ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ಭಾರತೀಯ ಸಂವಿಧಾನವನ್ನು ವರ್ಗಕೋಣೆಯಲ್ಲಿ ಓದುವ ನಾವೆಲ್ಲರೂ ಕಾನೂನು ಪಾಲನೆ ಹಾಗೂ ಸಂವಿಧಾನದ ತತ್ವಗಳು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಸಂವಿಧಾನಕ್ಕೆ ಗೌರವಿಸಬೇಕು ಎಂದರು. ಈ ಸಂದರ್ಭದಲ್ಲಿ ಸಂಚಾರಿ ಪೊಲೀಸ್ ಇಲಾಖೆಯ ಶರಣಪ್ಪ ಹಾರಕೂಡೆ, ಶ್ರೀ ಬಸವೇಶ್ವರ ಪಿಜಿ ಪ್ರಾಚಾರ್ಯರಾದ ಡಾ. ಶಾಂತಲಾ ಪಾಟೀಲ, ಡಾ.ಬಸವರಾಜ ಖಂಡಾಳೆ, ಪವನ ಪಾಟೀಲ, ಸಂಗೀತಾ ಮಹಾಗಾವೆ, ಜಗದೇವಿ ಜವಳಗೆ, ಶೃತಿ ನೀಲಮಠ, ಚನ್ನಬಸಪ್ಪ ಗೌರ, ವೆಂಕಟರಾವ್ ಗುನಾಳೆ, ಪ್ರವೀಣ ಬಿರಾದಾರ, ಗಣೇಶ ಮೇತ್ರೆ, ಅಶೋಕ ರೆಡ್ಡಿ ಗದಲೆಗಾವ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಈ ವೇಳೆ ಬಿಕಾಂ ಮೊದಲ ಸೆಮಿಸ್ಟರ್ ವಿದ್ಯಾರ್ಥಿಗಳು ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಮಾಸ್ತಿ ವೆಂಕಟೇಶ ಅಯ್ಯಂಗಾರ್ ಅವರ ಭಾವಚಿತ್ರ ಕಾಲೇಜಿಗೆ ನೀಡಿದರು.

ಗಂಗಾಧರ ಸಾಲಿಮಠ ಸ್ವಾಗತಿಸಿದರು. ವಿವೇಕಾನಂದ ಶಿಂಧೆ ನಿರೂಪಿಸಿದರು. ರೋಶನ್ ಬಿ ವಂದಿಸಿದರು.



ಬಸವಕಲ್ಯಾಣ :– ನಗರದ ಎಸ್.ಎಸ್.ಕೆ. ಬಸವೇಶ್ವರ ಕಲಾ, ವಿಜ್ಞಾನ, ವಾಣಿಜ್ಯ ಸ್ನಾತಕ ಮತ್ತು ಸ್ನಾತಕೋತ್ತರ ಮಹಾವಿದ್ಯಾಲಯದಲ್ಲಿ ಸುಭಾಷ್ ಚಂದ್ರ ಬೋಸ್ ಜಯಂತಿಯ ಆಚರಿಸಲಾಯಿತು. ಮಹಾ ವಿದ್ಯಾಲಯದ ಪ್ರಾಂಶುಪಾಲರಾದ ಡಾ.ಬಸವರಾಜ್ ಎವಲೆ ಅವರು ಸುಭಾಷ್ ಚಂದ್ರ ಬೋಸ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಡಾ. ಸುರೇಶ ಎಚ್.ಆರ್, ಗ್ರಂಥಪಾಲಕರಾದ ಸೂರ್ಯಕಾಂತ್ ನಾಸೆ, ಶ್ರೀ ಕಲ್ಯಾಣಪ್ಪ ನಾವದಗಿ,ಕು. ಭಾರತಿ ಮಠ, ಶಿವಕುಮಾರ್ ಕೊಲ್ಲೆ,ಶಿವಾನಂದ್ ಬಿರಾದಾರ್ ಮತ್ತು ಎನ್.ಸಿ.ಸಿ ಅಧಿಕಾರಿಗಳಾದ ಭೀಮಾಶಂಕರ.ಪೂಜಾರಿ ಹಾಗೂ ಬೋಧಕ –ಬೋಧಕೇತರ ಸಿಬ್ಬಂದಿ ಮತ್ತು ಎನ್.ಸಿ.ಸಿ ಕೆಡೆಟ್ ಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ದಿ ಮಾಣಿಕ ಪಬ್ಲೀಕ್ ಶಾಲೆಯಲ್ಲಿ ಅಧ್ಯಯನ ಕೇಂದ್ರದ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಮಾಣಿಕನಗರದ 'ದಿ ಮಾಣಿಕ ಪಬ್ಲೀಕ್ ಸ್ಕೂಲ್' ನಲ್ಲಿ ಶಾಲೆಯ ವಿದ್ಯಾರ್ಥಿಗಳಿಗಾಗಿ ಸುಸಜ್ಜಿತ ಅಧ್ಯಯನ ಕೇಂದ್ರವನ್ನು ಹುಮನಾಬಾದ ಶಾಸಕರಾದ ಡಾ॥ ಸಿದ್ಧಲಿಂಗಪ್ಪಾ ಪಾಟೀಲ್ ಅವರು ನೇರವೇರಿಸಿದರು. ಅಧ್ಯಯನ ಕೇಂದ್ರದ ಉದ್ಘಾಟನೆ ನೇರವೇರಿಸಿ ಮಾತನಾಡುತ್ತ ನಮ್ಮ ಕರ್ನಾಟಕದಲ್ಲಿ ನಮ್ಮ ಮಾಣೀಕಪ್ರಭು ಸಂಸ್ಥಾನ ಮತ್ತು ಶಿಕ್ಷಣ ಸಮೀತಿ ಸಂಚಾಲಿತ ದಿ ಮಾಣಿಕ ಪಬ್ಲೀಕ್ ಶಾಲೆ ಇಡೀ ರಾಜ್ಯದಲ್ಲಿ ಹೆಸರುವಾಸಿಯಾಗಿದೆ. ಈ ಶಾಲೆಯಲ್ಲಿ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಯ ದೃಷ್ಟಿಯಿಂದ ಶೈಕ್ಷಣೀಕ, ಸಂಸ್ಕಾರ, ಮತ್ತು ಕ್ರೀಡೆಗೆ ಮಹತ್ವ ನೀಡಿದ್ದಾರೆ. ಎಲ್ಲಾ ಸೌಲಭ್ಯಗಳು ರಾಜ್ಯದ ರಾಜಧಾನಿಯಲ್ಲೂ ಲಬ್ಯವಿಲ್ಲ ಎಂದರು. ಈ ಒಂದು ಕೇಂದ್ರ ಸ್ಥಾಪನೆಯಾಗಿದ್ದು ನನಗೆ ತುಂಬಾ ಸಂತೋಷವಾಗಿದೆ ಎಂದರು. ಈ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿದ ಶ್ರೀ ಆನಂದರಾಜ ಪ್ರಭುಗಳು ಮಾತನಾಡುತ್ತ ಪಾಟೀಲ್ ಪರಿವಾರ ಸುಮಾರು ವರ್ಷಗಳಿಂದ ನಮ್ಮ ಸಂಸ್ಥೆಗೆ ಹಾಗೂ ಮಾಣಿಕನಗರ ಗ್ರಾಮಕ್ಕೆ ಸಾಕಷ್ಟು ರೂಪದಲ್ಲಿ ಸಹಾಯ ಸಹಕಾರ ನಿರಂತರವಾಗಿ ನೀಡುತ್ತ ಬಂದಿರುತ್ತಾರೆ. ಸಂಸ್ಥೆಯ ಕಾರ್ಯದರ್ಶಿಗಳಾದ ಚಾರುದತ್ತಪ್ರಭು, ಪ್ರಾಚಾರ್ಯರಾದ ಶ್ರೀ ಮೃಗಾಂಕ ಪಾಂಡೆ, ಉಪಪ್ರಾಚಾರ್ಯರಾದ ಶ್ರೀ ವಿಲಾಸ ನಾಯಕ, ಶ್ರೀಮತಿ ಅರುಂಧತಿ ಭಾಗವತ್, ಶ್ರೀಮತಿ ಮೀನಾಕ್ಷಿ ಮೇಡಂ, ಸಿಬ್ಬಂಧಿ ವರ್ಗದವರು,ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು. ನಿರುಪಣೆಯನ್ನು ಮಂಜುನಾಥ ನಡೆಸಿಕೊಟ್ಟರು.

## ಹಾರಕೂಡ ಸಿರಿಮಠದಲ್ಲಿ ರಾಜ್ಯಮಟ್ಟದ "ಜನಪದಸಿರಿ" ಪ್ರಶಸ್ತಿ ಪ್ರಧಾನ

# ಸಾಹಿತ್ಯ ಹಾಗೂ ಸಾಂಸ್ಕೃತಿಕ ಕ್ಷೇತ್ರಕ್ಕೆ ಸೂಗಯ್ಯ ಹಿರೇಮಠ ಕೊಡುಗೆ ಅಪಾರ ಡಾ. ಲಂಡನಕರ್





ಮಲ್ಲಮ್ಮ ನುಡಿ ವಾರ್ತೆ.

ಬಸವಕಲ್ಯಾಣ :– ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರಕ್ಕೆ ಸೂಗಯ್ಯ ಹಿರೇಮಠ ರವರ ಕೊಡುಗೆ ಅಪಾರವಾಗಿದೆ ಎಂದು ಗುಲ್ಬರ್ಗ ವಿಶ್ವವಿದ್ಯಾಲಯ ಕುಲಸಚಿವರಾದ ಡಾ. ರಮೇಶ ಲಂಡನಕರ್ ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಪ್ರೊ. ಸೂಗಯ್ಯ ಹಿರೇಮಠ ಸಾಹಿತ್ಯ ಹಾಗೂ ಸಾಂಸ್ಕೃತಿಕ ಟ್ರಸ್ಟ್ ಕಲಬುರ್ಗಿ ವತಿಯಿಂದ ಆಯೋಜಿಸಿದ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ ಸಮಾಜದ ತಳಸ್ಪರ್ಶಿಯ ಚಿಂತನೆ ಹಾಗೂ ಸಾಮಾಜಿಕ ಕಳಕಳಿ ಸೂಗಯ್ಯ ಹಿರೇಮಠರ ಸಾಹಿತ್ಯದ ಕೇಂದ್ರ ಬಿಂದುವಾಗಿದೆ.ಪ್ರಗತಿಪರ ಹಾಗೂ ರೈತಾಪಿ ವರ್ಗ ಕುರಿತಾದ ಚಿಂತನೆಗಳನ್ನು ಇಂದಿನ ಯುವ ಪೀಳಿಗೆ ಹಾಗೂ ಮುಂದಿನ ಜನಾಂಗಕ್ಕೆ ತಲುಪಿಸುವ ಗುರುತರ ಹೊಣೆ ನಮ್ಮದಾಗಿದೆ.

ಸಾಹಿತ್ಯ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವಲ್ಲಿ ಹಾರಕೂಡ ಪೂಜ್ಯ ಡಾ. ಚನ್ನವೀರ ಶಿವಾಚಾರ್ಯರು ಮುಂಚೂಣಿಯಲ್ಲಿದ್ದು,ಶ್ರೀ ಮಠದ ತತ್ವಾದರ್ಶ ಹಾಗೂ ಸಮಾಜಮುಖಿ ಚಿಂತನೆಗಳು ಯಾವತ್ತೂ ಪ್ರಸ್ತುತ ಎಂದು ನುಡಿದರು. ನಾಡಿನ ಖ್ಯಾತ ಜಾನಪದ ವಿದ್ವಾಂಸರಾದ ಎಚ್. ಕಾಶಿನಾಥ ರೆಡ್ಡಿ, ಈ ಭಾಗದ ಖ್ಯಾತ ಜನಪದ ವಿದ್ವಾಂಸರಾದ ಡಾ. ಹನುಮಂತರಾಯ ದೊಡ್ಡಮನಿ ಮಲ್ಲಾಬಾದ ಹಾಗೂ ಜನಪದ ರಂಗಭೂಮಿ ಕಲಾವಿದರಾದ ನಿಂಗಣ್ಣಗೌಡ ಪೊಲೀಸ್ ಪಾಟೀಲ ಸಿಂಗನಹಳ್ಳಿ ಇವರನ್ನು 2024ನೇ ಸಾಲಿನ ರಾಜ್ಯಮಟ್ಟದ "ಜನಪದಸಿರಿ" ಪ್ರಶಸ್ತಿ ಪ್ರಧಾನ ಮಾಡಿ ಗೌರವಿಸಲಾಯಿತು.

ಸಂಶೋಧಕರು ಹಾಗೂ ಸಾಹಿತಿಗಳಾದ ಡಾ. ಡಿ. ಎನ್. ಅಕ್ಕಿ ಮಾತನಾಡಿದರು.

ಸಮಾರಂಭದ ದಿವ್ಯ ಸಾನಿಧ್ಯವನ್ನು ಹಾರಕೂಡ ಶ್ರೀಮಠದ ಪೀಠಾಧಿಪತಿಗಳಾದ ಪೂಜ್ಯ ಶ್ರೀ ಷ. ಬ್ರ. ಡಾ. ಚನ್ನವೀರ ಶಿವಾಚಾರ್ಯರು ವಹಿಸಿದ್ದರು.ಪ. ಮಾನು ಸಗರ, ಗೌರವ ಅಧ್ಯಕ್ಷತೆ ವಹಿಸಿದ್ದರು.

ಡಾ.ಜಯದೇವಿ ಗಾಯಕವಾಡ್ ಸಂಪಾದಿತ ಹಾಗೂ ಸುಜಾತ ಗೌನಳ್ಳಿ ಸಂಪಾದಿತ "ಒಮ್ಮೆ ನೋಡು ಹಾರಕೂಡ ಮಠ" ಶ್ರೀ ರಾಮಯ್ಯ ಐನುಲಿಸ್ವಾಮಿ ಇವರು ರಚಿಸಿದ ಭಕ್ತಿಗೀತೆಗಳ ಪುಸ್ತಕಗಳನ್ನು ಹಾರಕೂಡದ ಪರಮಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ಬಿಡುಗಡೆಗೊಳಿಸಿದರು.

ಹಿರಿಯ ಸಾಹಿತಿಗಳಾದ ಡಾ. ಸ್ವಾಮಿರಾವ ಕುಲಕರ್ಣಿ,ಮಲ್ಲಿನಾಥ ಹಿರೇಮಠ ಹಾರಕೂಡ, ಡಾ. ಬಸವರಾಜ ಕೊನೇಕ,ಡಾ. ಎಸ್. ಎಸ್. ಗುಬ್ಬಿ, ಮೇಘರಾಜ ನಾಗರಾಳೆ, ಎಪಿಎಂಸಿ ಮಾಜಿ ಅಧ್ಯಕ್ಷರಾದ ಸಿದ್ರಾಮಪ್ಪ ಗುದಗೆ, ಶಾಂತಮ್ಮ ಸುಗಯ್ಯ ಹಿರೇಮಠ, ನಟರಾಜ ಸೂಗಯ್ಯ ಹಿರೇಮಠ, ನಿವೃತ್ತ ನ್ಯಾಯಾಧೀಶರಾದ ಸುಭಾಸಚಂದ್ರ ನಾಗರಾಳೆ, ನ್ಯಾಯವಾದಿಗಳಾದ ಸಂತೋಷ ನಾಗರಾಳೆ ಉಪಸ್ಥಿತರಿದ್ದರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಾದ ಮುದುಕಾ ಬಸವರಾಜ ಬೀದರ, ಶಿಕ್ಷಣ ಕ್ಷೇತ್ರ.

ವೈಜನಾಥ ಎಮ್. ಚನ್ನಶೆಟ್ಟಿ ಬೀದರ, ಶಿಕ್ಷಣ ಕ್ಷೇತ್ರ. ಡಾ. ವಿಜಯ ಕುಮಾರ ಪರೂತೆ ಕಲಬುರ್ಗಿ, ಸಾಹಿತ್ಯ ಕ್ಷೇತ್ರ. ನೀಲಮ್ಮ ಕತ್ನಳ್ಳಿ ಕಲಬುರಗಿ, ಸಾಹಿತ್ಯ ಕ್ಷೇತ್ರ.

ಶೋಭಾತಿ ಚಕ್ಕಿ ಸೇಡಂ, ಸಾಹಿತ್ಯ ಕ್ಷೇತ್ರ.ಶಿವಶರಣ ಎಸ್. ಬಾಳಿ ಕಲಬುರಗಿ, ಶಿಕ್ಷಣ ಕ್ಷೇತ್ರ. ನಾರಾಯಣ ಸಿಂಗಾಡೆ ಕಲಬುರ್ಗಿ, ಸಮಾಜ ಸೇವೆ.

ನೀಲಕಂಠ ಜಮಾದರ ಕಲಬುರ್ಗಿ,ಸಮಾಜ ಸೇವೆ. ವಿ. ಬಿ. ಐರಡ್ಡಿ ರಾಯಚೂರು, ಶಿಕ್ಷಣ ಕ್ಷೇತ್ರ.ಡಾ. ಎಸ್. ಬಿ. ಕಾಮಶೆಟ್ಟಿ ಕಲಬುರ್ಗಿ, ಶಿಕ್ಷಣ ಕ್ಷೇತ್ರ.ಬಿ. ಎಸ್. ಮಾಲಿ ಪಾಟೀಲ ಕಲಬುರ್ಗಿ, ಶಿಕ್ಷಣ ಕ್ಷೇತ್ರ.ಮೀನಾಕ್ಷಿ ಎ. ಗುತ್ತೇದಾರ ಕಲಬುರಗಿ, ಚಿತ್ರಕಲಾ ಕ್ಷೇತ್ರ ಇವರನ್ನು ಪ್ರೊ. ಸುಗಯ್ಯ ಹಿರೇಮಠ ಗೌರವ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಬಸವರಾಜ ಐನೋಳಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ನರಸಪ್ಪ ಗೌನಳ್ಳಿ ನಿರೂಪಿಸಿದರು.

ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನೆ ಗೀತೆ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಪ್ರಶಸ್ತಿ ಸ್ವೀಕರಿಸಿದ ಜನಪದ ಕಲಾವಿದರಾದ ನಿಂಗಣ್ಣಗೌಡ ಸಿಂಗನಹಳ್ಳಿ ದೊಡ್ಡಾಟದ ಹಾಡು ಪ್ರಸ್ತುತಪಡಿಸಿದ್ದರು.

# ಗ್ರಾಮೀಣ ಪ್ರದೇಶದ ಗ್ರಂಥಾಲಯಗಳು ಮಾದರಿ ಗ್ರಂಥಾಲಯಗಳಾಗಾಲಿ:– ಗ್ರಾ.ಪಂ ಮಾಜಿ ಅಧ್ಯಕ್ಷ ನರಸಾರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಗ್ರಾಮೀಣ ಪ್ರದೇಶದ ಗ್ರಂಥಾಲಯಗಳು ಮಾದರಿ ಗ್ರಂಥಾಲಯಗಳಾಗಬೇಕೆಂದು ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ನರಸಾರೆಡ್ಡಿ ಇದ್ದಾರೆಡ್ಡಿ ಹೇಳಿದರು. ತಾಲೂಕಿನ ಉಡಬಾಳ ಗ್ರಾಮದಲ್ಲಿ ಸುಮಾರು 18.28 ಲಕ್ಷ ರೂ. ವೆಚ್ಚದ ನೂತನ ಗ್ರಂಥಾಲಯ ಕಟ್ಟಡ ಗ್ರಾಮ ಪಂಚಾಯತ್ ಅಧ್ಯಕ್ಷೆ ಅನುಸೊಯಾ ಕಡಿಮನಿ ಮತ್ತು ಮಾಜಿ ಅಧ್ಯಕ್ಷ ನರಸಾರೆಡ್ಡಿ ಇದ್ದಾ–ರೆಡ್ಡಿ ಉದ್ಘಾಟಿಸಿದರು. ಮಾಜಿ ಅಧ್ಯಕ್ಷ ನರಸಾರೆಡ್ಡಿ ಇದ್ದಾರೆಡ್ಡಿ ಮಾತನಾಡಿ, ಯುವ ಪೀಳಿಗೆ ತಮ್ಮ ಬಹುಪಾಲು ಸಮಯವನ್ನು ಪುಸ್ತಕಗಳನ್ನು ಓದುವುದರ ಮೂಲಕ ಜ್ಞಾನಾರ್ಜನೆಯನ್ನು ಹೆಚ್ಚಿಸಿಕೊಳ್ಳಬೇಕು. ಅದಕ್ಕಾಗಿ ಸ್ಥಳೀಯ ಗ್ರಂಥಾಲಯಗಳಿಗೆ ಹೋಗಿ ಅಲ್ಲಿಯ ಉತ್ತಮ ಗ್ರಂಥಗಳ ಮಾಹಿತಿಯನ್ನು ಪಡೆದುಕೊಂಡು ಉತ್ತಮ ಜೀವನವನ್ನು ರೂಪಿಸಿಕೊಳ್ಳಬೇಕು ಎಂದರು. ಗ್ರಂಥಾ ಪಾಲಕರ ಸಂಘದ ಜಿಲ್ಲಾ ಸಂಘಟನಾ ಕಾರ್ಯದರ್ಶಿ ನಾಗೇಂದ್ರ ಹಡಪದ ಮಾತನಾಡಿ, ಸಾಮಾಜಿಕ ಜಾಲತಾಣಗಳ ಬಳಕೆಯನ್ನು ಕಡಿಮೆ ಮಾಡಿ ಗ್ರಂಥಾಲಯಕ್ಕೆ ಬಂದು ಪುಸ್ತಕ ಓದುವ ಹವ್ಯಾಸಗಳನ್ನು ರೂಢಿಸಿಕೊಳ್ಳುವುದರ ಜೊತೆಗೆ ಗ್ರಂಥಾಲಯದಲ್ಲಿ ದೊರಕುವ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸಂಧ್ಯಾರಾಣಿ ಮಾತನಾಡಿ, ಗ್ರಂಥಾ ಪಾಲಕರ ಸಂಘದ ತಾಲೂಕಾಧ್ಯಕ್ಷ ಚನ್ನಪ್ಪ ಪಿ. ತರಿ, ಪ್ರೌಢ ಶಾಲೆ ಮುಖ್ಯ ಶಿಕ್ಷಕ ಲಕ್ಷ್ಮಿಕಾಂತ ಭಯ್ಯಾ ಮಾತನಾಡಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಸದಸ್ಯರಾದ ರಾಜರೆಡ್ಡಿ ಮದ್ದಿ, ಮಾಣಿಕ ಮದಳೆ, ಶಿವಗಂಗಮ್ಮ ಸಜ್ಜನಶೆಟ್ಟಿ, ರವಿ ಮಾಲಿ ಪಾಟೀಲ್, ಪ್ರಾಥಮಿಕ ಶಾಲೆ ಮುಖ್ಯ ಶಿಕ್ಷಕಿ ತನುಜಾ ಆಣದುರೆ, ಗ್ರಂಥಾಲಯ ಮೇಲ್ವಿಚಾರಕಿ ಚಂದ್ರಮ್ಮಾ ಕೆ. ಕಾಂಬಳೆ, ಗ್ರಂಥಾಲಯ ಗ್ರಾಮ ಮಟ್ಟದ ಸಲಹಾ ಸಮಿತಿ ಸದಸ್ಯರಾದ ಶಿವಶರಣ ಗೋಪಾ, ಪ್ರಮುಖರಾದ ಸಂಬಣ್ಣ ಕಡಿಮನಿ, ಈರಣ್ಣ ಜನ್, ನವೀನ ಗೋಪಾ, ರವಿ ಮಾಳಗೆ, ಕುಪೇಂದ್ರ ಕಾಂಬಳೆ, ರೇಣುಕಾ ಗೋಪಾ, ಚಿತ್ರಮ್ಮಾ ಭಂಗಿ, ಪ್ರೀತಿ ಸಿದ್ದನೂರ್, ಸಂತೋಷ ಸಿದ್ದನೂರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನಿರ್ಣಾ; ಪಿಕೆಪಿಎಸ್ ನಿರ್ದೇಶಕ ಎಂ.ಡಿ. ರಸೂಲ್ ಅಹಮದ್ ಲಶ್ಕೇರಿ ಅವರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ತಾಲೂಕಿನ ನಿರ್ಣಾ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ನಿರ್ದೇಶಕರಾಗಿ ಆಯ್ಕೆಯಾದ ಎಂ. ಡಿ. ರಸೂಲ್ ಅಹಮದ್ ಲಶ್ಕೇರಿ ಅವರಿಗೆ, ಅವರ ಸುಪುತ್ರರಾದ ಉರ್ದು ಪತ್ರಿಕೆ ಪತ್ರಕರ್ತರಾದ ಅಬ್ದುಲ್ ಖದೀರ್ ಲಶ್ಕೇರಿ ಅವರ ಗೆಳೆಯರ ಬಳಗದಿಂದ ಶಾಲು ಹೊದಿಸಿ ಸನ್ಮಾನಿಸಿ ಶುಭ ಕೋರಿದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ನಾನು ಗ್ರಾಮ ಪಂಚಾಯತ್ ಸದಸ್ಯನಾಗಿ, ಪಿಕೆಪಿಎಸ್, ನಿರ್ದೇಶಕನಾಗಿ, ಬಡ ಜನರ ಹಾಗೂ ರೈತರ ಧ್ವನಿಯಾಗಿ ಸೇವೆ ಸಲ್ಲಿಸಿದ್ದೇನೆ ಎಂದು ಹೇಳಿದರು. ಈ ಸಂದರ್ಭದಲ್ಲಿ ರಾಜಕುಮಾರ ಆರ್. ಹಡಪದ, ಸೈಯದ್ ಅಜೀಮ, ಪೆಂಟಾ–ರೆಡ್ಡಿ ಲಚನಗಾರ, ಗುಂಡಪ್ಪ ಮದರಗಿ, ತಾಜೋದ್ದಿನ ಲಶ್ಕೇರಿ, ಸರ್ದಾರ್ ಲಕಡಿ, ಯೂಸುಫ್ ಖುರೇಶಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮುತ್ತಂಗಿ; ಸಹಕಾರಿ ಸಂಘಕ್ಕೆ ಅಧ್ಯಕ್ಷರಾಗಿ ರಾಚಪ್ಪ ಸಾದಾ ಉಪಾಧ್ಯಕ್ಷರಾಗಿ ಶಾಂತಬಾಯಿ ಚವ್ಹಾಣ ಅವಿರೋಧ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕಿನ ಮುತ್ತಂಗಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾಗಿ ರಾಚಪ್ಪ ಶಿವಪುತ್ರ ಸಾದಾ ಉಪಾಧ್ಯಕ್ಷರಾಗಿ ಶಾಂತಬಾಯಿ ಚಂದ್ರಶೆಟ್ಟಿ ಅವಿರೋಧ ಆಯ್ಕೆಯಾದರು. ಶುಕ್ರವಾರ ಪಿಕೆಪಿಎಸ್ ಕಾರ್ಯಾಲಯದಲ್ಲಿ ಜರುಗಿದ ಚುನಾವಣೆಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಒಬ್ಬರೆ ನಾಮಪತ್ರ ಸಲ್ಲಿಸಿದ ಹಿನ್ನೆಲೆಯಲ್ಲಿ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಮೃತುಂಜಯ ತಿಳಿಸಿದರು. ನಂತರ ಪಿಕೆಪಿಎಸ್ ಮುಖ್ಯ ಕಾರ್ಯನಿರ್ವಾಹಕ ರವಿಕುಮಾರ ಬಿರಾದಾರ್ ನೂತನ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸರ್ವ ನಿರ್ದೇಶಕರನ್ನು ಸನ್ಮಾನಿಸಿದರು. ಬಳಿಕ ನೂತನ ಅಧ್ಯಕ್ಷ ರಾಚಪ್ಪ ಸಾದಾ ಮಾಧ್ಯಮದವರೊಂದಿಗೆ ಮಾತನಾಡಿ, ಮುತ್ತಂಗಿ ಸಹಕಾರಿ ಸಂಘ ಮಾದರಿ ಸಹಕಾರ ಸಂಘ ಮಾಡುವುದು ನನ್ನ ಗುರಿಯಾಗಿದೆ, ಎಲ್ಲಾ ನಿರ್ದೇಶಕರು ಹಾಗೂ ಸಂಘ ವ್ಯಾಪ್ತಿಯ ಗ್ರಾಮದ ಹಿರಿಯರು ಯುವಕನಿಗೆ ಅಧ್ಯಕ್ಷನಾಗಿ ಮಾಡಿದ್ದಾರೆ, ಅವರೆಲ್ಲರಿಗೂ ಧನ್ಯವಾದಗಳು ಸಲ್ಲಿಸುತ್ತೇನೆ ಎಂದರು. ಎಲ್ಲರ ಸಹಕಾರದಿಂದ ಸಂಘ ಮತ್ತು ರೈತರ ಹಿತಕ್ಕಾಗಿ ಹಗಲಿರಳು ಶ್ರಮಿಸುತ್ತೇನೆ ಎಂದು ಹೇಳಿದರು. ಉಪಾಧ್ಯಕ್ಷೆ ಶಾಂತಬಾಯಿ ಚಂದ್ರಶೆಟ್ಟಿ ಮಾತನಾಡಿ, ನನಗೆ ನಿರ್ದೇಶಕರಾಗಿ ಹಾಗೂ ಉಪಾಧ್ಯಕ್ಷೆಯಾಗಿ ಆಯ್ಕೆ ಮಾಡಿದ ಎಲ್ಲರಿಗೂ ಚಿರಋಣಿ ಆಗಿರುತ್ತೇನೆ, ಈ ದಿನ ನನ್ನಗೆ ತುಂಬಾ ಖುಷಿ ಆಗುತ್ತಿದೆ ಎಂದರು. ಗ್ರಾಮದ ಮುಖಂಡ ಮಲ್ಲಿಕಾರ್ಜುನ ಮಾಲಿ ಪಾಟೀಲ್ ಮಾತನಾಡಿ, ಎಲ್ಲಾ ಹಿರಿಯರ ಮತ್ತು ರೈತರ ಸಹಕಾರದಿಂದ ರಾಚಪ್ಪ ಸಾದಾ ಅವರು ಚಿಕ್ಕ ವಯಸ್ಸಿನಲ್ಲೇ ಪಿಕೆಪಿಎಸ್ ಅಧ್ಯಕ್ಷರಾಗಿ ಅವಿರೋಧ ಆಯ್ಕೆಯಾಗಿದ್ದಾರೆ, ಚಿಕ್ಕ ವಯಸ್ಸಿನಲ್ಲಿ ಅಧಿಕಾರ ಸಿಕ್ಕಿದೆ, ರೈತರ ಹಿತಕ್ಕಾಗಿ ಒಳ್ಳೆಯ ಕಾರ್ಯ ನಿರ್ವಹಿಸಿ ಎಂದು ಸಲಹೆ ನೀಡಿದರು. ನಿರ್ದೇಶಕರಾದ ಅಲಿ ಉಸ್ಮಾನಸಾಬ್, ಶಾಮರಾವ ಬೋಜು, ವೀರಪ್ಪ ಕಂಟೇಪ್ಪ, ಸುರೇಶ್ ರತನಸಿಂಗ್, ಸಣ್ಮುಖಪ್ಪ ನರಸಪ್ಪ, ಸವಿತ್ರಾ ನಂದು, ಶಾಂತಿಬಾಯಿ ಮಾಣಿಕ, ಹಣಮಂತ ಶಿವಪ್ಪಾ, ಅಹ್ಮದ್ ಪಟೇಲ್ ಇಸಾಮೋದ್ದಿನ, ಪ್ರೇಮಿಳಾ ಶಂಕರ ಸಿಬ್ಬಂದಿಗಳಾದ ವೈಜಿನಾಥ ಪೂಜಾರಿ, ಅಮರ ಪಂಚಾಳ, ನೀಲಕಂಠ ರಾಥೋಡ್, ವೀರಭದ್ರಪ್ಪ ಬುರ್ನಾಪುರ್, ವಿಜಯಕುಮಾರ್ ಎಖೇಳ್ಳಿ, ಪ್ರಮುಖರಾದ ಶಿವಪುತ್ರಪ್ಪ ಸಾದಾ, ನಾರಾಯಣರಾವ ದಾಸ್, ಅಶೋಕ ಪೊಲೀಸ್ ಪಾಟೀಲ್, ಪ್ರಕಾಶ ಚಾಲಿಮಟ್ಟಿ, ಗುಂಡಪ್ಪ ಮದರಗಿ, ಗುರುಪಾದಯ್ಯಾ ಸ್ವಾಮಿ, ಷಣ್ಮುಖ, ಬಾಬಾ ಪಟೇಲ್, ಶ್ರೀನಿವಾಸ ಪರಶುರಾಮ ನಾಯಕ ಭಾದ್ರಾಪುರ್, ಪರಶುರಾಮ, ಯಲ್ಲಾಲಿಂಗ, ಪ್ರಭು, ವಿಕಾಸ, ಅಂಜುಮ್, ಜೈಸಿಂಗ್, ಶೇಷು, ಜೈಸಿಂಗ್, ಚಂದರ್, ಮಲ್ಲಿಕಾರ್ಜುನ ಸುಭಾಷ, ಕಾಶಿನಾಥ ಕಾರಬಾರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕೆಡಿಪಿ ಸಭೆ; ಅಕ್ರಮ ಮರಳು ಮಾರಾಟಕ್ಕೆ ಶಾಸಕರಿಂದ ಬಲವಾದ ವಿರೋಧ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರಜ:24ವೈದ್ಯಕೀಯ ಶಿಕ್ಷಣ ಸಚಿವರು ಹಾಗೂ ರಾಯಚೂರಜಿಲ್ಲಾಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಜನವರಿ 24ರಂದು ರಾಯಚೂರ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ನಡೆದ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ, ಮರಳು ಮಾರಾಟದ ವಿಷಯವು ಚರ್ಚೆಗೆ ಬಂದಿತು.ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಪ್ರಗತಿ ಪರಿಶೀಲನೆ ವೇಳೆ, ವಿಧಾನ ಪರಿಷತ್ ಶಾಸಕರಾದ ಬಸನಗೌಡ ಬಾದರ್ಲಿ ಅವರು ಮಾತನಾಡಿ, ರಾಯಚೂರ ಜಿಲ್ಲೆಯಲ್ಲಿ ಅಕ್ರಮ ಮರಳು ಮಾರಾಟವು ಅವ್ಯಾಹತವಾಗಿ ನಡೆಯುತ್ತಿದೆ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಜಿಲ್ಲಾದ್ಯಂತ ಎಲ್ಲೆಡೆ ನಡೆಯುತ್ತಿರುವ ಈ ಅಕ್ರಮ ಮರಳು ಸಾಗಣೆ-ಯ ಅವ್ಯವಹಾರಕ್ಕೆ ಕಡಿವಾಣ ಹಾಕಲೇಬೇಕು ಎಂದು ಇದೆ ವೇಳೆ ಸಿಂಧನೂರ ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ದೇವದುರ್ಗ ಶಾಸಕರಾದ ಕರೆಮ್ಮ ಜಿ ನಾಯಕ, ಎ ವಸಂತಕುಮಾರ ಅವರು ಧನಿಗೂಡಿಸಿದರು.

ಲಾರಿ ಚಾಲಕರು ಮಣ್ಣನ್ನು ಮಿತಿಮೀರಿತುಂಬಿಸಂಚರಿಸುತ್ತಿದ್ದು, ಇದರಿಂದಾಗಿ ರಸ್ತೆಗಳು ಸಹ ಹಾಳಾಗಿ ಸುಗಮ ಸಂಚಾರಕ್ಕೆ ತೊಂದರೆಯಾಗಿದೆ. ರಸ್ತೆ ಸರಿ ಇಲ್ಲ ಎಂದು ವಿದ್ಯಾರ್ಥಿಗಳು ದೂರುತ್ತಿದ್ದಾರೆ. ಇದಕ್ಕೆ ಕಡಿವಾಣ ಹಾಕಬೇಕು ಎಂದು ರಾಯಚೂರ ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ್ ಅವರು ಆರ್ ಟಿಓ ಮತ್ತು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮರಳು ಮಾರಾಟ ವ್ಯವಸ್ಥೆಯ ಬಗ್ಗೆ ಇಲಾಖೆಯ ಅಧಿಕಾರಿಗಳಿಂದ ಮಾಹಿತಿ ಪಡೆದ ಸಚಿವರು, ರಾಯಚೂರು ಜಿಲ್ಲಾದ್ಯಂತ ನಡೆಯುತ್ತಿದೆ ಎನ್ನಲಾದ ಅಕ್ರಮ ಮರಳು ಮಾರಾಟಕ್ಕೆ ಕಡಿವಾಣ ಹಾಕಲು ತುರ್ತಾಗಿ ಕ್ರಮ ವಹಿಸಬೇಕು ಎಂದು ಜಿಲ್ಲಾ ಪೊಲೀಸ್ ಇಲಾಖೆ ಮತ್ತು ಇನ್ನಿತರ ಇಲಾಖೆಗಳ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಆನ್ ಲೈನ್ ಈ ಪ್ರಕ್ಯುರಮೆಂಟ್ ಮೂಲಕ ಸ್ಯಾಂಡ್ ಬ್ಲಾಕ್ ಅಲಾಟಮೆಂಟ್ ಮಾಡಿ ಹದಿನೈದು ದಿನದಲ್ಲಿ ಸಾರ್ವಜನಿಕರಿಗೆ ಮರಳು ಸಿಗುವಂತೆ ಸರಳೀಕರಣಕ್ಕೆ ಕ್ರಮ ವಹಿಸಲಾಗುವುದು.

ಈಗಾಗಲೇ ಸರ್ಕಾರವು ಆನ್ ಲೈನ್ ಮೂಲಕ ಸ್ಯಾಂಡ್ ಬ್ಲಾಕ್ ಅಲಾಟಮೆಂಟ್ ಮಾಡಲು ಅವಕಾಶ ಕಲ್ಪಿಸಿದೆ. ಈ ಹಿನ್ನೆಲೆಯಲ್ಲಿ ರಾಯಚೂರ ಜಿಲ್ಲೆಯಲ್ಲಿ ಸಹ ಸ್ಯಾಂಡ್ ಬ್ಲಾಕಗಳನ್ನು ಆನ್ ಲೈನ್ ಈ ಪ್ರಕ್ಯೂರಮೆಂಟ್ ಮೂಲಕ ಮಂಜೂರು ಮಾಡಲಾಗುವುದು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಸಭೆಗೆ ಮಾಹಿತಿ ನೀಡಿದರು.

# ತೃಪ್ತಿ ಪಡುವವ ನಿಜವಾದ ಶರಣ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜ.24:ದೊರೆತದ್ದು ದೇವ ಪ್ರಸಾದ. ಅದರಲ್ಲೇ ತೃಪ್ತಿಪಡುವವನೇ ನಿಜವಾದ ಶರಣ ಎಂದು ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ ನುಡಿದರು.

ಇಲ್ಲಿಯ ಬಸವಗಿರಿಯ ಲಿಂಗಾಯತ ಮಹಾ ಮಠದಲ್ಲಿ ಗುರುವಾರ ನಡೆದ ಮಾಸಿಕ ಶರಣ ಸಂಗಮ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಆದದ್ದೆಲ್ಲ ದೇವ ಇಚ್ಛೆ ಎಂದು ಭಾವಿಸಬೇಕು. ಸಿಕ್ಕಿದ್ದರಲ್ಲೇ ತೃಪ್ತಿಪಡುವುದನ್ನು ರೂಢಿಸಿಕೊಳ್ಳಬೇಕು. ಅತೃಪ್ತಿ ಭಕ್ತನ ಲಕ್ಷಣ ಅಲ್ಲ ಎಂದು ಹೇಳಿದರು.

ಮನುಷ್ಯನ ಮಾತು ಹಾಗೂ ಕೃತಿ ಒಂದೇ ಆಗಿರಬೇಕು. ಮನಸ್ಸಿನಲ್ಲಿ ಒಂದು, ಮಾತಿನಲ್ಲಿ ಇನ್ನೊಂದು ಇರಬಾರದು. ನಮ್ಮ ಅಂತರಂಗ ಶುದ್ಧವಾಗಿರಬೇಕು. ಅದನ್ನು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು ಎಂದು ತಿಳಿಸಿದರು.

ಸಚ್ಚಾರಿತ್ರ್ಯವಂತರು ಹಾಗೂ ಪ್ರಾಮಾಣಿಕ ಪ್ರಜೆಗಳ ನಿರ್ಮಾಣ ಇಂದಿನ ಅವಶ್ಯಕತೆಯಾಗಿದೆ ಎಂದು ಸನ್ಮಾನ ಸ್ವೀಕರಿಸಿ ಮಾತನಾಡಿ ಕಲ್ಯಾಣ ಕರ್ನಾಟಕ ಪ್ರತಿಷ್ಠಾನದ ಅಧ್ಯಕ್ಷ ಬಸವಕುಮಾರ ಪಾಟೀಲ ಹೇಳಿದರು.

ಇಂದು ದೇಶಕ್ಕೆ ಗಂಡಾಂತರ ಇರುವುದು ವಿದ್ಯಾವಂತರಿಂದಲೇ ಹೊರತು ಅವಿದ್ಯಾವಂತರಿಂದಲ್ಲ ಎಂದರು.

ಮೊಟ್ಟ ಮೊದಲ ಬಾರಿಗೆ ಅಕ್ಷರ ಕ್ರಾಂತಿಗೈದವರು ಬಸವಣ್ಣ. ಕಸಗುಡಿಸುವ ಸತ್ಯಕ್ಕ, ಸೂಳೆ ಸಂಕವ್ವೆ ಅಂಥವರಿಗೆ ಅಕ್ಷರ ಕಲಿಸಿ, ವಚನ ಬರೆಯುವ ಮಟ್ಟಕ್ಕೆ ಬೆಳೆಸಿದ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ ಎಂದು ಹೇಳಿದರು.

ಲಿಂಗಾಯತ ಪರಂಪರೆ ಬಲು ಶ್ರೇಷ್ಠ. ಲಿಂಗಾಯತರು ಶ್ರೇಷ್ಠತೆಯ ವ್ಯಸನದಿಂದ ಹೊರ ಬಂದು ನಿಜ ಆಚರಣೆಯಲ್ಲಿ ತೊಡಗಬೇಕು ಎಂದು ಬಗದಲ್ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಚಾರ್ಯ ಚನ್ನಬಸವ ಹೇಡೆ ತಿಳಿಸಿದರು.

ನಾಡಿಗೆ ಭವ್ಯ-ದಿವ್ಯ ಪರಂಪರೆ ಕೊಟ್ಟವರಲ್ಲಿ ಲಿಂಗಾಯತರು ಪ್ರಮುಖರು. ಹೆಸರಾಂತ ವಿದ್ಯಾಸಂಸ್ಥೆಗಳನ್ನು ಕಟ್ಟಿದರು. ಅರಿವು, ಆಚಾರ ಬಿತ್ತಿದರು ಎಂದು ಬಣ್ಣಿಸಿದರು.

ಪ್ರಸ್ತುತ ದಾರಿ ತಪ್ಪುತ್ತಿರುವ ಮಕ್ಕಳನ್ನು ಸರಿ ದಾರಿಗೆ ತರಬೇಕಾಗಿದೆ. ಮೊಬೈಲ್, ಸಾಮಾಜಿಕ ಜಾಲ ತಾಣದ ಆಕರ್ಷಣೆಯಿಂದ ಮಕ್ಕಳು ಹೊರ ಬರಬೇಕಾಗಿದೆ ಎಂದು ತಿಳಿಸಿದರು.

ಉದ್ಘಾಟನೆ ನೆರವೇರಿಸಿದ ಜ್ಞಾನ ಕಾರಂಜಿ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಮಾಣಿಕಪ್ಪ ಗೋರನಾಳೆ ಮಾತನಾಡಿದರು.

ಹುಬ್ಬಳ್ಳಿಯ ಶಂಭುಯಾವಗಲ್ ಷ???ಸ್ಥಲ ಧ್ವಜಾರೋಹಣ ಮಾಡಿದರು. ರಾಜಕುಮಾರ ಶೀಲವಂತ ಹಾಗೂ ಮಾರುತಿ ಪಾಟೀಲ ಅನುಷ್ಠಾನ ಕುಟೀರ ಅನಾವರಣಗೊಳಿಸಿದರು. ಕೊಟಕ್ ಮಹೀಂದ್ರ ಬ್ಯಾಂಕ್ ನಿವೃತ್ತ ವ್ಯವಸ್ಥಾಪಕ ಅಶೋಕ ಎಲಿ ಅಧ್ಯಕ್ಷತೆ ವಹಿಸಿದ್ದರು. ಸಾಹಿತಿ ರಮೇಶ ಮಠಪತಿ, ಚನ್ನಬಸವ ಹಂಗರಗಿ ಉಪಸ್ಥಿತರಿದ್ದರು.

ಸೃಷ್ಟಿ, ಸನ್ನಿಧಿ, ಸೌಮ್ಯ ಗುರು ಪೂಜೆ ನೆರವೇರಿಸಿದರು. ಶ್ಯಾಮಲಾ ಎಲಿ, ಗುರುಶ್ರೀ ಹಾಗೂ ಪರುಷಕಟ್ಟೆಯ ಚನ್ನಬಸವಣ್ಣ ವಚನ ಗಾಯನ ಮಾಡಿದರು. ನೀಲಮ್ಮನ ಬಳಗದವರು ಪ್ರಾರ್ಥನೆ ನಡೆಸಿಕೊಟ್ಟರು.

ಲಕ್ಷ್ಮಿಬಾಯಿ ಶಿವಲಿಂಗಯ್ಯ ಮಠಪತಿ ಭಕ್ತಿದಾಸೋಹಗೈದರು.

ಬಸವರಾಜ ಬಿರಾದಾರ ಸ್ವಾಗತಿಸಿದರು.

# ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳಲಿ : ಗದ್ದಿಗೌಡರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ : ಜ 24 : ವಿವಿಧ ಇಲಾಖೆಯಡಿ ಬರುವ ಕೇಂದ್ರ ಪುರಸ್ಕೃತ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಮೂಲಕ ಅರ್ಹ ಫಲಾನುಭವಿಗಳಿಗೆ ತಲುಪಿಸುವ ಕಾರ್ಯವಾಗಬೇಕೆಂದು ಸಂಸದ ಪಿ.ಸಿ.ಗದ್ದಿಗೌಡರ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಶುಕ್ರವಾರ ಜರುಗಿದ ಮೂರನೇತ್ರೈಮಾಸಿಕ ದಿಶಾ ಪ್ರಗತಿ ಪರಶೀಲನಾ ಸಭೆಯ ಅಧ್ಯಕ್ಷೆ ವಹಿಸಿ ಮಾತನಾಡಿದ ಅವರು ಪ್ರತಿಯೊಂದು ಇಲಾಖೆಯ ಅಧಿಕಾರಿಗಳು ಕೇಂದ್ರ ಸರಕಾರದ ಮಹತ್ವದ ಯೋಜನೆಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸಿ ಆ ಯೋಜನೆಗಳ ಲಾಭ ಪಡೆಯುವಂತಾಗಬೇಕು. ಅಲ್ಲದೇ ಕಾಮಗಾರಿಗಳು ಸಹ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಅಧಿಕಾರಿಗಳು ಶ್ರಮಿಸುವ ಅಗತ್ಯವಿದೆ ಎಂದು ತಿಳಿಸಿದರು.

ಶಿರೂರ ಕ್ರಾಸ್‌ನಿಂದ ಗದ್ದನಕೇರಿ ಕ್ರಾಸ್‌ವರೆಗೆ ಒಟ್ಟು 24 ಕಿ.ಮೀ ಚತುಷ್ಪಥ ರಸ್ತೆ ಕಾಮಗಾರಿ ವರ್ಷವಾದರೂ ಇನ್ನು ಪೂರ್ಣಗೊಂಡಿಲ್ಲ. ಭೂ ಸ್ವಾಧೀನ ಪ್ರಕ್ರಿಯೆ ವಿಳಂಬವಾದಲ್ಲಿ ನಮ್ಮ ಗಮನಕ್ಕೆ ತಂದು ನಾವು ಸಹ ಬಗೆಹರಿಸುವ ಕೆಲಸಮಾಡುತ್ತೇವೆ. ಕಾಮಗಾರಿಯಲ್ಲಿ ವಿಳಂಬ ದೋರಣೆ ಅನುಸರಿಸುವಂತಿಲ್ಲ. ಅಲ್ಲದೇ ಪಟ್ಟದಕಲ್ಲದಿಂದ ಶಿರೂರವರೆಗಿನ 26 ಕಿ.ಮೀ ದ್ವಿಪಥ ರಸ್ತೆ ಕಾಮಗಾರಿ ಭೂಸ್ವಾದಿನ ಪ್ರಕ್ರಿಯೆ ಮತ್ತು ಅರಣ್ಯ ಇಲಾಖೆ ಅನುಮತಿ ಪಡೆಯುವಲ್ಲಿ ವಿಳಂಬವಾಗಿದೆ. ಆದರೆ ಸುಮ್ಮನೆ ಕೂಡದೇ ರಸ್ತೆ ಕಾಮಗಾರಿ ಪ್ರಾರಂಭಿಸಲು ಕ್ರಮ ಕೈಗೊಳ್ಳಲು ಸೂಚಿಸಿದರು. ಕಾಮಗಾರಿ ವಿಳಂಬಕ್ಕೆ ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ ಅಸಮಾಧಾನ ವ್ಯಕ್ತಪಡಿಸಿದರು.

ನಂತರ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ಮಾಡಿದ ಅವರು ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ ಮೂಲಕ ಕೇಂದ್ರ ಸರಕಾರದ ಮಹತ್ವದ ಯೋಜನೆಗಳು ಜಾರಿಗೆ ತರಲಾಗಿದ್ದು, ಅವುಗಳು ಮಹಿಳೆಯರಿಗೆ ಹಾಗು ಮಕ್ಕಳಿಗೆ ತಲುಪಿಸುವ ಕಾರ್ಯವಾಗಬೇಕು. ಮಾತೃವಂದನಾ ಯೋಜನೆ, ಶಾಲಾ ಪೂರ್ವ ಮಕ್ಕಳ ಉಪಹಾರ, ರಾಷ್ಟ್ರೀಯ ಪೋಷನ್ ಅಭಿಯಾನ, ಮಹಿಳಾ ಸಬಲೀಕರಣ ಸೇರಿದಂತೆ ಅನೇಕ ಯೋಜನೆಗಳು ಕಾರ್ಯಗತಗೊಳಿಸಲು ಸೂಚಿಸಿದರು. ಕೃಷಿ ಹಾಗೂ ತೋಟಗಾರಿಕೆ ಇಲಾಖೆಯಡಿ ಪರಿಶಿಷ್ಟ ಜಾತಿ ಮತ್ತು ಪಂಗಡ ವರ್ಗದ ಜನರಿಗೆ ಶೇ.90 ರಷ್ಟು ಸಹಾಯಧನದಲ್ಲಿ ನೀಡುವ ಕೃಷಿ ಪರಿಕರಣಗಳು ಸಮರ್ಪಕವಾಗಿ ವಿತರಣೆಗೆ ಕ್ರಮವಹಿಸಲು ಸೂಚಿಸಲಾಯಿತು.

## ಭಾರತದಲ್ಲಿ ಮತದಾನವು ಮಹತ್ವದ ಪಾತ್ರ ವಹಿಸುತ್ತದೆ : ಪ್ರೊ.ಬಿ.ಎಸ್.ಬಿರಾದಾರ್




ಮಲ್ಲಮ್ಮ ನುಡಿ ವಾರ್ತೆ

ಬೀದರ.ಜ. 24 :ಜಗತ್ತಿನ ಅತಿದೊಡ್ಡ ಪ್ರಜಾಪ್ರಭುತ್ವ ಹಾಗೂ ಅತಿ ಹೆಚ್ಚು ಜನಸಂಖ್ಯೆ ಹೊಂದಿರುವ ಭಾರತ ದೇಶದ ಸದೃಢ ಅಭಿವೃದ್ಧಿಗಾಗಿ ಹಾಗೂ ಸುಸ್ಥಿರ ಸರಕಾರದ ನಿರ್ಮಾಣಕ್ಕಾಗಿ ಮತದಾನವು ಮಹತ್ವದ ಪಾತ್ರ ವಹಿಸುತ್ತದೆ ಎಂದು ಬೀದರ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಬಿ.ಎಸ್.ಬಿರಾದಾರ್ ಅವರು ಅಭಿಪ್ರಾಯಪಟ್ಟರು.

ಇಂದು ಬೀದರ್ ವಿಶ್ವವಿದ್ಯಾಲಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಮತದಾರರ ಪ್ರತಿಜ್ಞಾವಿಧಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮತದಾನದಲ್ಲಿ ಎಲ್ಲರೂ ಪಾಲ್ಗೊಂಡಾಗ ಮಾತ್ರ ಪ್ರಜಾಪ್ರಭುತ್ವಕ್ಕೆ ಬೆಲೆ ಬರುತ್ತದೆ. ಮತದಾನದಿಂದಾಗಿ ತಮ್ಮ ಸಮರ್ಥ ಪ್ರತಿನಿಧಿಯನ್ನು ಆಯ್ಕೆಮಾಡಲು ಸಾಧ್ಯವಾಗುತ್ತದೆ. 18 ವರ್ಷ ಮೇಲ್ಪಟ್ಟವರೆಲ್ಲರೂ ಕಡ್ಡಾಯವಾಗಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳುವ ಮೂಲಕ ಚುನಾವಣಾ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ತಿಳಿಸಿದರು.

ವಿಶ್ವವಿದ್ಯಾಲಯದ ಆಡಳಿತ ಕುಲಸಚಿವೆ ಸು-ರೇಖಾ ಅವರು ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಮತದಾನದ ಜಾಗೃತಿ ಮೂಡಿಸುವುದು ತುರ್ತಾಗಿದೆ. ಎಷ್ಟೋ ಜನ ಯುವಕರು ಜಾಗೃತೆಯ ಕೊರತೆಯಿಂದಾದ ಮತದಾನದ ಹಕ್ಕಿನಿಂದ ವಂಚಿತರಾಗುತ್ತಿದ್ದಾರೆ. ಯುವಕರು ವೋಟರ್ ಹೆಲ್ಪ್ ಲೈನ್ ಆಪ್ ನಲ್ಲಿ ತಾವಾಗಿಯೇ ನೋಂದಣಿಮಾಡಿಕೊಳ್ಳಬಹುದು. ವಿದ್ಯಾವಂತರು ಪ್ರತಿಯೊಬ್ಬರನ್ನೂ ಜಾಗೃತಗೊಳಿಸಿ, ಸರ್ವರೂ ಮತದಾನದ ಹಕ್ಕು ಪಡೆಯುವಂತೆ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಪರಮೇಶ್ವರ್ ನಾಯಕ್.ಟಿ, ಡಾ.ರವೀಂದ್ರನಾಥ್ ಗಬಾಡಿ ಹಾಗೂ ವಿಶ್ವವಿದ್ಯಾಲಯದ ಶಿಕ್ಷಕ ಶಿಕ್ಷಕೇತರ ಸಿಬ್ಬಂದಿ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮತದಾನಕ್ಕೆ ರಾಷ್ಟ್ರ ನಿರ್ಮಾಣ ಶಕ್ತಿಯಿದೆ :ಡಾ. ಬಸವರಾಜ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜ.24: ಮತದಾನ ಎನ್ನುವದು ಅತ್ಯಂತ ಪವಿತ್ರವಾದ ಒಂದು ಅಸ್ತ್ರವಾಗಿದೆ ಅದನ್ನು ಯಾರು ತಪ್ಪದೆ ಉಪಯೋಗಿಸಿಕೊಳ್ಳಬೇಕು ಎಂದು ಪ್ರಾಂಶುಪಾಲ ಡಾ.ಬಸವರಾಜ ಹನಸಿ ಹೇಳಿದರು.

ಪಟ್ಟಣದ ಗದಗ ರಸ್ತೆಯಲ್ಲಿರುವ ಶಿವಪ್ರೀಯಾ ಕಾನೂನು ಮಹಾವಿದ್ಯಾಲಯದಲ್ಲಿ ನಡೆದ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮತದಾರರ ದಿನಾಚರಣೆ ಆಚರಣೆ ಮಾಡುವದು ಎಲ್ಲಾ ದಿನಾಚರಣೆಗಳಿಗಿಂತ ಉತ್ತಮವಾದ ಸಂದೇಶಗಳನ್ನು ನೀಡುವದಾಗಿದೆ ಯಾಕೆಂದರೆ ನಮ್ಮ ದೇಶದ ಭವಿಷ್ಯ ಅಡಗಿರುವದು ಹಾಗೂ ಮುಂದಿನ ಪಿಳಿಗೆಗೆ ನಾವು ಮಾಡಬೇಕಾದ ಕಾರ್ಯಗಳನ್ನು ಮಾಡಲು ಇರುವ ಒಂದು ಉತ್ತಮ ಅವಕಾಶವಾಗಿದೆ ಅದನ್ನು ಯಾರು ಹಣಕ್ಕೆ ಮಾರಾಟ ಮಾಡಿಕೊಳ್ಳದೆ ಭ್ರಷ್ಟಾಚಾರಕ್ಕೆ ಅನುವುಬಮಾಡಿ ಕೊಡದೆ ಅಭಿವೃದ್ಧಿ ಚಿಂತನೆಯೊಂದಿಗೆ ಮತದಾನವನ್ನು ಕಡ್ಡಾಯವಾಗಿ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಉಪನ್ಯಾಸಕರಾದ ಮಹಾಂತೇಶ ಕೋರಡಕೇರಿ. ರಜೀಯಾಬೇಗಂ .ಶಿವಯ್ಯ ಕೊಟ್ರೂರಮಠ ಸೇರಿದಂತೆ ಎಲ್ಲಾ ಕಾನೂನು ವಿದ್ಯಾರ್ಥಿಗಳು ಹಾಜರಿದ್ದರು.

# ಉತ್ತಮ ಅಂಕ ಗಳಿಕೆಗೆ ಸ್ಪರ್ಧೆ ಸಹಕಾರಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜ.24: ವಿದ್ಯಾರ್ಥಿಗಳ ಉತ್ತಮ ಅಂಕಗಳಿಕೆಗೆ ಸ್ಪರ್ಧೆಗಳು ಅತ್ಯಂತ ಸಹಕಾರಿಯಾಗುತ್ತವೆ ಎಂದು ಚನ್ನಬಸವೇಶ್ವರ ಸ್ನಾತ-ಕೋತ್ತರ ಪದವಿ ಕಾಲೇಜಿನ ಪ್ರಾಚಾರ್ಯ ಮೀನಾಕುಮಾರಿ ಪಾಟೀಲ್ ಹೇಳಿದರು.

ಪಟ್ಟಣದ ಲೆಕ್ಚರ್ ಕಾಲೋನಿಯ ಖಡಕೇಶ್ವರ ಪ್ರೌಢ ಶಾಲೆಯಲ್ಲಿ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗಾಗಿ ಶುಕ್ರವಾರ ಆಯೋಜಿಸಿದ್ದ ಪಠ್ಯಾಧಾರಿತ ರಂಗೋಲಿ ಸ್ಪರ್ಧೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಗಣಿತ, ವಿಜ್ಞಾನ ವಿಷಯಗಳು ಎಂದರೆ ಸಾಕು ವಿದ್ಯಾರ್ಥಿಗಳಲ್ಲಿ ನಡುಕ, ಅದೊಂದು ಕಬ್ಬಿಣದ ಕಡಲೆ ಎಂದು ತಿಳಿದುಕೊಳ್ಳುತ್ತಾರೆ.

ಇಂತಹ ಕಠಿಣ ವಿಷಯಗಳನ್ನು ವಿದ್ಯಾರ್ಥಿಗಳಿಗೆ ಸರಳವಾಗಿ ತಿಳಿ ಹೇಳುವ ಪ್ರಯತ್ನ ನಡೆದಿರುವುದು ಅತ್ಯಂತ ಖುಷಿ ತಂದು ಕೊಟ್ಟಿದೆ.

ಗಣಿತ, ವಿಜ್ಞಾನ, ಸಮಾಜ ವಿಜ್ಞಾನ ಸಂಬಂಧಿತ ವಿಷಯ, ಚಿತ್ರಗಳು ರಂಗೋಲಿ ಸ್ಪರ್ಧೆ ಏರ್ಪಡಿಸುವುದರಿಂದ ಹೆಚ್ಚು ಅಂಕ ಗಳಿಕೆ ಜತೆಗೆ ಆಯಾ ವಿಷಯ ಮನದಟ್ಟಾಗಿ ತಿಳಿದು ಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಿಆರ್‌ಪಿ ಅಂಬರೀಷ ಖಂಡ್ರೆ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ ಬೆಳೆಸಲು ಇಂತಹ ಸ್ಪರ್ಧೆಗಳು ಅವಶ್ಯಕ ಎಂದು ತಿಳಿಸಿದರು.

ಮುಖ್ಯಗುರು ಆನಂದ ಕಲ್ಯಾಣೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಜಯಪ್ರಕಾಶ ಸಹಾನೆ, ಅಂಜಲಿ ಜೋಶಿ, ಶುಭಂ ರಾಯವಾಡೆ ಇದ್ದರು. ದಿಲೀಪ ಘಂಟೆ ಸ್ವಾಗತಿಸಿದರು. ಉದಯ ಜೋಶಿ ನಿರೂಪಿಸಿದರು. ಪ್ರಕಾಶ ರುದನೂರೆ ವಂದಿಸಿದರು.

# ಜ. 29 ರಂದು ಸೇಡಂದಲ್ಲಿ ಲೋಕಾಯುಕ್ತ ಅಧಿಕಾರಿಯಿಂದ ಅಹವಾಲು ಸ್ವೀಕಾರ

ಕಲಬುರಗಿ,ಜ.24:ಕಲಬುರಗಿ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ಇದೇ ಜನವರಿ 29 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಸೇಡಂ ತಹಶೀಲ್ದಾರರ ಕಚೇರಿಯಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ ಎಂದು ಕಲಬುರಗಿಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಬಿ.ಕೆ. ಉಮೇಶ ಅವರು ತಿಳಿಸಿದ್ದಾರೆ.

ಕಲಬುರಗಿ ಕರ್ನಾಟಕ ಲೋಕಾಯುಕ್ತ ಡಿ.ಎಸ್.ಪಿ. ಯವರಾದ ಗೀತಾ ಟಿ. ಬೇನಹಾಳ (ಮೊಬೈಲ್ ಸಂಖ್ಯೆ 9364062569) ಹಾಗೂ ಕಲಬುರಗಿ ಕರ್ನಾಟಕ ಲೋಕಾಯುಕ್ತ ಪೊಲೀಸ್ ನಿರೀಕ್ಷಕರಾದ ರಾಜಶೇಖರ ವಿ. ಹಳಿಗೋದಿ (ಮೊಬೈಲ್ ಸಂಖ್ಯೆ 9364062671) ಅವರು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ.

**ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ,**
**ಕಲಬುರಗಿ ವಿಭಾಗ, ಕಲಬುರಗಿ**
ಮಿನಿ ವಿಧಾನ ಸೌಧ ಎದುರುಗಡೆ, ಐವಾನ-ಎ-ಶಾಹಿ ರೋಡ, ಕಲಬುರ್ಗಿ -585102, ದೂ. 08472-220815

ಸಂಖ್ಯೆ:ಕಜಮ/ಕಾಪಾಅ/ತಾಂತ್ರಿಕ/ಕಿ.ಅ/ಶಹಾಪೂರ/11 ಕೆ.ವಿ-ನೀ.ಸ.ಯೋ/2024-25/2ನೇ ಕರೆ/2862
ದಿನಾಂಕ::23-1-2025

**:: ಅಲ್ಪಾವಧಿ ಟೆಂಡರ ಪ್ರಕಟಣೆ ಇ-ಪ್ರೋಟಲ್ ಮುಖಾಂತರ ::**

ಈ ಕೆಳಗೆ ವಿವರಿಸಿದಂತೆ ಈ ಕೆಳಗಿನ ಕೆಲಸಗಳಿಗೆ ಅರ್ಹತಾ ಮಾನದಂಡಗಳನ್ನು ಪೂರೈಸುವ ಸಂಸ್ಥೆಗಳು/ಗುತ್ತಿಗೆದಾರರಿಂದ ಟೆಂಡರಗಳನ್ನು ಆಹ್ವಾನಿಸಲಾಗಿದೆ.
1) ಕೆಲಸ ವಿವರಣೆ: ಶಹಾಪೂರ ಪಟ್ಟಣಕ್ಕೆ ಭೀಮಾ ನದಿಯ ಮೂಲದ ಸನ್ನತಿ ಸೇತುವೆ ಮತ್ತು ಬ್ಯಾರೇಜ್‌ನಿಂದ ನೀರು ಸರಬರಾಜು ಮಾಡಲು ಸನ್ನತಿ ಸೇತುವೆ ಮತ್ತು ಬ್ಯಾರೇಜ್ ಹತ್ತಿರ 33/11 KV MUSS ನಲ್ಲಿ 01 ಸಂಖ್ಯೆಯ ಹೊಸ 11 ಕೆ.ವಿ ಬ್ರೇಕರ್‌ನ ಸರಬರಾಜು, ಸ್ಥಾಪನೆ ಮತ್ತು ಕಾರ್ಯರಂಭ ಮಾಡುವ ಕಾಮಗಾರಿ. (ಲಮ್‌ಸಮ್) ಯಾವುದೇ ವೇರಿಯೇಷನ್ ಇರುವುದಿಲ್ಲ), 2) ಕೆಲಸದ ಅಂದಾಜು ಮೊತ್ತ (ರೂ.ಗಳಲ್ಲಿ): **ರೂ: 17,03,351.00** ಜಿ.ಎಸ್.ಟಿ ಹೊರತುಪಡಿಸಿ, 3) ಮುಂಗಡ ಠೇವಣಿ ಮೊತ್ತ (ರೂ. ಗಳಲ್ಲಿ): ರೂ. 40,200.00, 4) ಟೆಂಡರ ಪ್ರಕ್ರಿಯೆ ಶುಲ್ಕ: ಕೆ.ಪಿ.ಪಿ. ಪೋರ್ಟಲ್‌ನಲ್ಲಿರುವಂತೆ, 5) ಕೆಲಸದ ಕಾಲಾವಧಿ: 02 ತಿಂಗಳು (ಮಳೆಗಾಲ ಸೇರಿ), 6) ಅರ್ಹತೆಯ ಮಾನದಂಡಗಳು: ಬಿಡ ದಾಖಲೆಗಳ ಪ್ರಕಾರ, 7) ಮಾಹಿತಿಗಾಗಿ ಸಂಪರ್ಕಿಸಬೇಕಾದ ವಿಳಾಸ: ಕಾರ್ಯಪಾಲಕ ಅಭಿಯಂತರು, ಕನನೀಸ ಮತ್ತು ಒಚ ಮಂಡಳಿ, ವಿಭಾಗ ಕಲಬುರಗಿ ಮಿನಿ ವಿಧಾನ ಸೌಧ ಎದುರುಗಡೆ, ಐವಾನ-ಎ-ಶಾಹಿ ರೋಡ, ಕಲಬುರಗಿ, 8) ಟೆಂಡರನ್ನು ಡೌನ್‌ಲೋಡ್ ಮಾಡಲು ಪ್ರಾರಂಬಿಸಲು ದಿನಾಂಕ ಮತ್ತು ಸಮಯ: **24-01-2025 13.00 ಗಂಟೆಯಿಂದ,** 9) ಟೆಂಡರನ್ನು ಇ-ಪ್ರಾಕ್ಯೂರಮೆಂಟ್ ಮೂಲಕ ಸಲ್ಲಿಸಲು / ಅಪಲೋಡ ಮಾಡಲು ಕೊನೆಯ ದಿನಾಂಕ ಮತ್ತು ಸಮಯ: **07-02-2025 ಸಾ. 16:30 ಗಂಟೆವರೆಗೆ,** 10) ತಾಂತ್ರಿಕ ಟೆಂಡರ ತೆರೆಯುವ ದಿನಾಂಕ ಮತ್ತು ಸಮಯ: **10-02-2025 ಬೆ. 17:00 ಗಂಟೆ ನಂತರ,** 11) ಆರ್ಥಿಕ ಟೆಂಡರ ತೆರೆಯುವ ದಿನಾಂಕ ಮತ್ತು ಸಮಯ: **11-02-2025 ಬೆ. 11.00 ಗಂಟೆ ನಂತರ,** 12) ಅಂತರಜಾಲ ತಾಣದ ವಿಳಾಸ: https://kppp.karnataka.gov.in/

**ಸಹಿ/- ಕಾರ್ಯಪಾಲಕ ಅಭಿಯಂತರರು,**
**ಕನನೀಸ ಮತ್ತು ಒಚ ಮಂಡಳಿ, ವಿಭಾಗ, ಕಲಬುರಗಿ**

ವಾ.ಸಾ.ಸಂ.ಇ/ಕಲಬುರಗಿ/877/ಕೆ.ಎಸ್.ಎಂ.ಸಿ.&ಎ/2024-25

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.